ಕರ್ನಾಟಕ ಸರ್ಕಾರ
**ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆ**
ಬೆಂಗಳೂರು

**ಸಂಖ್ಯೆ:07/ನೇಮಕಾತಿ-3(ಬಿ)/ಕೆ.ಕೆ/2026-27**

ಡೈರೆಕ್ಟರ್ ಜನರಲ್ ಆಫ್ ಪೊಲೀಸ್
ನೇಮಕಾತಿ ರವರ ಕಛೇರಿ,
ಕಾರ್ಲಟನ್ ಭವನ, ಅರಮನೆ ರಸ್ತೆ,
ಬೆಂಗಳೂರು, **ದಿನಾಂಕ: 10.07.2026**

# ಅಧಿಸೂಚನೆ

**ವಿಷಯ:-** ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಸ್ಥಳೀಯ ವೃಂದದಲ್ಲಿ ಖಾಲಿ ಇರುವ ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಕೆ.ಎಸ್.ಆರ್.ಪಿ)-334, (ಕೆ.ಎಸ್.ಐ.ಎಸ್.ಎಫ್)-364 ಮತ್ತು (ಭಾರತೀಯ ಮೀಸಲು ಪಡೆ)-161 ಹುದ್ದೆಗಳ ನೇರ ನೇಮಕಾತಿ ಕುರಿತು.

*****

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ಕಲ್ಯಾಣ ಕರ್ನಾಟಕ ವೃಂದದಲ್ಲಿ ಖಾಲಿ ಇರುವ ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಪುರುಷ & ಮಹಿಳಾ) (ಕೆ.ಎಸ್.ಆರ್.ಪಿ)-334, ಪೊಲೀಸ್ ಕಾನ್ಸ್‌ಟೇಬಲ್ (ಪುರುಷ & ಮಹಿಳಾ) (ಕೆ.ಎಸ್.ಐ.ಎಸ್.ಎಫ್)-364 ಮತ್ತು ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಭಾರತೀಯ ಮೀಸಲು ಪಡೆ) (ಪುರುಷ)-161 ಹುದ್ದೆಗಳಿಗೆ ನೇಮಕಾತಿ ಮಾಡುವ ಸಂಬಂಧ ಈ ಅಧಿಸೂಚನೆ ಹೊರಡಿಸಿದೆ. ಈ ಹುದ್ದೆಗಳ ನೇಮಕಾತಿ ಲಿಖಿತ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದವರು ಕೈಗೊಳ್ಳಲಾಗುವುದು, ಕಾರಣ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಹ ಅಭ್ಯರ್ಥಿಗಳು ಸದರಿ ಹುದ್ದೆಗಳ ದೇಹದಾರ್ಢ್ಯತೆ ಹಾಗೂ ಇತರೆ ನೇಮಕಾತಿಗೆ ಅರ್ಹತೆ ಪಡೆಯಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಾಜರಾಗಬೇಕು.

ಕರ್ನಾಟಕ ರಾಜ್ಯದ, ಪೊಲೀಸ್ ಇಲಾಖೆಯಲ್ಲಿ ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಕೆ.ಎಸ್.ಆರ್.ಪಿ) ಮತ್ತು ಭಾರತಿಯ ಮೀಸಲು ಪಡೆ (ಐ.ಆರ್.ಬಿ) (ವೃಂದ ಮತ್ತು ನೇಮಕಾತಿ) ನಿಯಮಗಳು 2025 ಹಾಗೂ ಪೊಲೀಸ್ ಕಾನ್ಸ್‌ಟೇಬಲ್ ಕರ್ನಾಟಕ ರಾಜ್ಯ ಕೈಗಾರಿಕ ಭದ್ರತಾ ಪಡೆ (ಕೆ.ಎಸ್.ಐ.ಎಸ್.ಎಫ್) (ವೃಂದ ಮತ್ತು ನೇಮಕಾತಿ) ನಿಯಮಗಳು 2021 ಮತ್ತು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013, ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 77 ಹೈಕಕೋ 2025, ದಿನಾಂಕ: 03.06.2025 ಮತ್ತು ಸರ್ಕಾರದ **ಆದೇಶ ಸಂಖ್ಯೆ ಹೆಚ್‌ಡಿ 44 ಪಿಪಿಎ 2026 ದಿನಾಂಕ:13.04.2026 ಮತ್ತು ಸೇರ್ಪಡೆ ಆದೇಶ ದಿನಾಂಕ:18.04.2026 ರಲ್ಲಿ ಪೊಲೀಸ್ ಕಾನ್ಸ್‌ಟೇಬಲ್ ವೃಂದದ ಹುದ್ದೆಗಳ ನೇರ ನೇಮಕಾತಿಯಲ್ಲಿನ ವಿಧಾನ ಮತ್ತು ಅರ್ಹತೆಯನ್ನು ಪರಿಷ್ಕರಿಸಿದನ್ವಯ** ಮತ್ತು ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಾವಳಿ 1977 ಮತ್ತು ಕಾಲಕಾಲಕ್ಕೆ ಆಗಿರುವ ಅದರ ತಿದ್ದುಪಡಿ ನಿಯಮಗಳನ್ವಯ ಹಾಗೂ **ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2026, ದಿನಾಂಕ: 13.05.2026 ರನ್ವಯ ಸದರಿ ಸರ್ಕಾರ ಆದೇಶಕ್ಕೆ ಒಳಪಟ್ಟಿರುವಂತೆ ಸರ್ಕಾರದ ತಿದ್ದುಪಡಿ ಆದೇಶ ದಿನಾಂಕ: 18.05.2026, ಸರ್ಕಾರದ ನಡವಳಿ ದಿನಾಂಕ: 22.05.2026 ಹಾಗೂ ಸೇರ್ಪಡೆ ಆದೇಶ ದಿನಾಂಕ: 25.05.2026 ಗಳನ್ವಯ ಹಾಗೂ ಸರ್ಕಾರದ ಪತ್ರ ಸಂಖ್ಯೆ:ಹೆಚ್‌ಡಿ 186 ಪಿಪಿಎಸ್ 2026, ದಿನಾಂಕ:23.06.2026ರ ಪ್ರಕಾರ 2026-27ನೇ ಸಾಲಿನ ಕಲ್ಯಾಣ ಕರ್ನಾಟಕ ಮೀಸಲಾತಿಯಲ್ಲಿನ ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಕೆ.ಎಸ್.ಆರ್.ಪಿ, ಐ.ಆರ್.ಬಿ ಮತ್ತು ಕೆ.ಎಸ್.ಐ.ಎಸ್.ಎಫ್) ಹುದ್ದೆಗಳಿಗೆ ಒಂದೇ ಲಿಖಿತ ಪರೀಕ್ಷೆ ಆಗಿರುವುದರಿಂದ ಪ್ರತ್ಯೇಕ ಅಂಕಪಟ್ಟಿಗಳನ್ನು ಪ್ರಕಟಿಸಲಾಗುವುದು.** ತಿಳಿಯಪಡಿಸಿದ ನಿಯಮಗಳಿಗೆ ಕಾಲಕಾಲಕ್ಕೆ ಆಗುವ ತಿದ್ದುಪಡಿಗಳ ಅನುಸಾರ ಈ ಅಧಿಸೂಚನೆಯನ್ನು ಪ್ರಕಟಿಸುತ್ತ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

➢ **ಪೊಲೀಸ್ ಇಲಾಖೆಯಲ್ಲಿ ಈ ಕೆಳಕಂಡಂತೆ ಸ್ಥಳೀಯ ವೃಂದದ 371-(ಜೆ) ಕಲ್ಯಾಣ ಕರ್ನಾಟಕ ಮೀಸಲಾತಿಯಡಿಯಲ್ಲಿ ಖಾಲಿ ಇರುವ ಹುದ್ದೆಗಳ ವಿವರ.**

| ಕ್ರ ಸಂ. | ಹುದ್ದೆಯ ವಿವರ | ವೇತನ ಶ್ರೇಣಿ (ರೂ./-) | ಹುದ್ದೆಗಳ ಸಂಖ್ಯೆ | |
|---|---|---|---|---|
| | | | ಪುರುಷ | ಮಹಿಳಾ |
| 1 | ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಕೆ.ಎಸ್.ಆರ್.ಪಿ) | 37,500–76100/– | 284 | 50 |
| ಒಟ್ಟು ಹುದ್ದೆಗಳ ಸಂಖ್ಯೆ | | | 334 | |

| ಕ್ರ ಸಂ. | ಹುದ್ದೆಯ ವಿವರ | ವೇತನ ಶ್ರೇಣಿ (ರೂ./-) | ಹುದ್ದೆಗಳ ಸಂಖ್ಯೆ | |
|---|---|---|---|---|
| | | | ಪುರುಷ | ಮಹಿಳಾ |
| 1 | ಪೊಲೀಸ್ ಕಾನ್ಸ್‌ಟೇಬಲ್ (ಕೆ.ಎಸ್.ಐ.ಎಸ್.ಎಫ್) | 37,500–76100/– | 274 | 90 |
| ಒಟ್ಟು ಹುದ್ದೆಗಳ ಸಂಖ್ಯೆ | | | 364 | |

| ಕ್ರ ಸಂ. | ಹುದ್ದೆಯ ವಿವರ | ವೇತನ ಶ್ರೇಣಿ (ರೂ./-) | ಹುದ್ದೆಗಳ ಸಂಖ್ಯೆ |
|---|---|---|---|
| | | | ಪುರುಷ |
| 1 | ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಭಾರತೀಯ ಮೀಸಲು ಪಡೆ) | 37,500–76100/– | 161 |

(ಗಮನಿಸಿ: ಈ ಮೇಲ್ಕಂಡ ಮೂರು ವೃಂದದ ಹುದ್ದೆಗಳಿಗೆ ಹುದ್ದೆವಾರು ಮತ್ತು ಪ್ರವರ್ಗವಾರು ವಿವರಗಳನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ.)

# ಶೈಕ್ಷಣಿಕ ವಿದ್ಯಾರ್ಹತೆ

| ಕ್ರಮ ಸಂಖ್ಯೆ | ವಿಶೇಷ ಮೀಸಲು ಪೊಲೀಸ್ ಕಾನ್‌ಸ್ಟೇಬಲ್ (ಕೆ.ಎಸ್.ಆರ್.ಪಿ), (ಕೆ.ಎಸ್.ಐ.ಎಸ್.ಎಫ್) ಮತ್ತು (ಐ.ಆರ್.ಬಿ) ಹುದ್ದೆಗಳ ವಿದ್ಯಾರ್ಹತೆ |
|---|---|
| 01 | Must have passed 2nd PUC or posses an equivalent qualification. |

- ಸರ್ಕಾರದ ಸುತ್ತೋಲೆ ಸಂಖ್ಯೆ : ಸಿಆಸುಇ 81 ಸೇವನೆ 2017, ದಿನಾಂಕ:27.02.2018 ರಲ್ಲಿ ಕರ್ನಾಟಕ ಪದವಿ ಪೂರ್ವ ಶಿಕ್ಷಣ ಮಂಡಳಿಯು ನಡೆಸುವ ಪಿಯುಸಿ ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳು ಈ ಕೆಳಕಂಡಂತಿರುತ್ತದೆ.
    1) ಸಿ.ಬಿ.ಎಸ್.ಇ ಮತ್ತು ಐ.ಎಸ್.ಸಿ ಮಂಡಳಿಯು ನಡೆಸುವ ಕ್ಲಾಸ್ 12 ಪರೀಕ್ಷೆ.
    2) ಇತರೆ ರಾಜ್ಯ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 12 ಪರೀಕ್ಷೆ.
    3) ನ್ಯಾಷನಲ್ ಇನ್ಸ್‌ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್ (ಎನ್.ಐ.ಓ.ಎಸ್) ವತಿಯಿಂದ ನಡೆಸುವ ಉನ್ನತ ಪ್ರೌಢ ಶಿಕ್ಷಣ ಕೋರ್ಸ್/ಹೆಚ್.ಎಸ್.ಸಿ.
    4) ಎರಡು ವರ್ಷಗಳ ಐ.ಟಿ.ಐ ಕೋರ್ಸ್ ಅಭ್ಯರ್ಥಿಗಳು ಎನ್.ಐ.ಓ.ಎಸ್‌ನ ವತಿಯಿಂದ ನಡೆಸುವ ಒಂದು ಭಾಷಾ ಕೋರ್ಸ್ ಮತ್ತು ಒಂದು ಶೈಕ್ಷಣಿಕ ವಿಷಯದಲ್ಲಿ (ದೂರಕಲಿಕೆ ಮಾದರಿಯಲ್ಲಿ) ಅಥವಾ ಪದವಿಪೂರ್ವ ಮಂಡಳಿಯು ನಡೆಸುವ ಪರೀಕ್ಷೆಯಲ್ಲಿ ಒಂದು ಭಾಷೆ ಮತ್ತು ಒಂದು ವಿಷಯದಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಪಿ.ಯು.ಸಿಗೆ ತತ್ಸಮಾನ.
- ಸರ್ಕಾರದ ಆದೇಶ ಸಂಖ್ಯೆ: ಇಡಿ 19 ಟಿವಿಇ 2019, ದಿನಾಂಕ: 06.08.2021 ರಲ್ಲಿ ಕರ್ನಾಟಕ ರಾಜ್ಯ ವೃತ್ತಿ ಶಿಕ್ಷಣ ಕೋರ್ಸುಗಳು (ಜೆ.ಓ.ಸಿ) ಪಿ.ಯು.ಸಿಗೆ ತತ್ಸಮಾನವೆಂದು ಈ ಕೆಳಕಂಡ ಅಂಶಗಳಿಗೆ ಮಾತ್ರ ಪರಿಗಣಿಸಿ, ಆದೇಶಿಸಿದೆ.
    1. ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡುವ ಹಾಗೂ ಈಗಾಗಲೇ ನೇಮಕಾತಿ ಹೊಂದಿ ಆದೇಶ ನಿರೀಕ್ಷೆಯಲ್ಲಿರುವ ವಿದ್ಯಾರ್ಥಿಗಳಿಗೆ ಜೆ.ಒ.ಸಿ ಯು ಪಿ.ಯು.ಸಿಗೆ ತತ್ಸಮಾನವೆಂದು ಪರಿಗಣಿಸುವುದು.
    2. ಪಿ.ಯು.ಸಿ ಅಥವಾ ಜೆ.ಓ.ಸಿ ಅಂಕಗಳನ್ನು ಪರಿಗಣಿಸಿದೆ ಕೇವಲ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಪರಿಗಣಿಸಿ ಉದ್ಯೋಗಕ್ಕೆ ಆಯ್ಕೆ ಮಾಡುವುದಾದರೆ ಜೆ.ಓ.ಸಿಯನ್ನು ಪಿ.ಯು.ಸಿಗೆ ತತ್ಸಮಾನವೆಂದು ಕನಿಷ್ಠ ಶೈಕ್ಷಣಿಕ ಅರ್ಹತೆಯಾಗಿ ಪರಿಗಣಿಸುವುದು.
- ಸರ್ಕಾರದ ಆದೇಶ ಸಂಖ್ಯೆ: ಇಪಿ 33 ಟಿವಿಇ 2021, ದಿನಾಂಕ: 30.09.2021 ರಲ್ಲಿ ಮೂರು ವರ್ಷಗಳ ಡಿಪ್ಲೊಮಾ ವಿದ್ಯಾರ್ಹತೆಯನ್ನು ಪಿ.ಯು.ಸಿ ವಿದ್ಯಾರ್ಹತೆ ತತ್ಸಮಾನವೆಂದು ಈ ಕೆಳಕಂಡ ಅಂಶಗಳಿಗೆ ಮಾತ್ರ ಪರಿಗಣಿಸಿ, ಆದೇಶಿಸಿದೆ.
    1. ನೇರ ನೇಮಕಾತಿ / ಅನುಕಂಪದ ಆಧಾರದ ನೇಮಕಾತಿ ಹೊಂದಲು ಮತ್ತು ಉನ್ನತ ಶಿಕ್ಷಣ ಪಡೆಯಲು ತಾಂತ್ರಿಕ ಶಿಕ್ಷಣ ಇಲಾಖೆಯು ಮೂರು ವರ್ಷಗಳ ಡಿಪ್ಲೊಮಾ ಶಿಕ್ಷಣವನ್ನು ಪಿ.ಯು.ಸಿಗೆ ತತ್ಸಮಾನವೆಂದು ಪರಿಗಣಿಸುವುದು.
    2. 2015ಕ್ಕಿಂತ ಹಿಂದಿನ ವರ್ಷಗಳಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಮೂರು ವರ್ಷಗಳ ಡಿಪ್ಲೊಮಾ ಉತ್ತೀರ್ಣರಾದ ವಿದ್ಯಾರ್ಥಿಗಳು ಕೆ.ಪಿ.ಎಸ್.ಸಿ ಯಿಂದ ನಡೆಸುವ ಇಲಾಖಾ ಪರೀಕ್ಷೆಗಳ ಜೊತೆಗೆ ಕನ್ನಡ ಭಾಷಾ ಪರೀಕ್ಷೆಯನ್ನು ತೇರ್ಗಡೆ ಹೊಂದುವುದು.

**ಟಿಪ್ಪಣಿ :**

**a.** ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನಿಗದಿತ ವಿದ್ಯಾರ್ಹತೆ ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ. ಮೇಲಿನ ವಿದ್ಯಾರ್ಹತೆಯನ್ನು ಹೊರತುಪಡಿಸಿ ಬೇರೆ ಯಾವ ವಿದ್ಯಾರ್ಹತೆಯನ್ನೂ ಪರಿಗಣಿಸಲಾಗುವುದಿಲ್ಲ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ದೊಳಗೆ ಎಲ್ಲಾ ಅಭ್ಯರ್ಥಿಗಳು ಪಿಯುಸಿ, 12ನೇ ತರಗತಿ ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿಯನ್ನು ಹೊಂದಿರಬೇಕು.

**b.** ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 43 ಸೇವನೆ 2020, ದಿನಾಂಕ: 5.3.2021 ರನ್ವಯ ಕನ್ನಡ ಭಾಷಾ ಪರೀಕ್ಷೆಗಾಗಿ ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 102 ಸೇವನೆ 2022 ದಿನಾಂಕ 24-03-2025 ರನ್ವಯ ಅಭ್ಯರ್ಥಿಯು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅಥವಾ ರಾಜ್ಯ ಸರ್ಕಾರವು ಅದಕ್ಕೆ ತತ್ಸಮಾನವೆಂದು ಘೋಷಿಸಿದ ಯಾವುದೇ ಪರೀಕ್ಷೆಯಲ್ಲಿ ಅಥವಾ ಎಸ್‌ಎಸ್‌ಎಲ್‌ಸಿಗಿಂತ ಉನ್ನತ ಮಟ್ಟದ ಪರೀಕ್ಷೆಗಳಲ್ಲಿ ಕನ್ನಡ ವಿಷಯವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ಅಭ್ಯಸಿಸಿದ್ದರೆ ಅಥವಾ ಕನ್ನಡ ಮಾಧ್ಯಮದಲ್ಲಿ ಅಧ್ಯಯನ ಮಾಡಿ ಇಂತಹ ಪರೀಕ್ಷೆಗಳನ್ನು ಪಾಸು ಮಾಡಿದ್ದರೆ ಅಥವಾ ಆಯೋಗ ಅಥವಾ ಇನ್ನಿತರ ಯಾವುದೇ ಆಯ್ಕೆ ಪ್ರಾಧಿಕಾರವು ಈ ಹಿಂದೆ ನಡೆಸಿದ ಕನ್ನಡ ಭಾಷೆಯ ಪರೀಕ್ಷೆಯಲ್ಲಿ (ಕಡ್ಡಾಯ ಕನ್ನಡ ಪರೀಕ್ಷೆ) ಉತ್ತೀರ್ಣರಾಗಿದ್ದರೆ, ಅಂತಹ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆಯಿಂದ ವಿನಾಯಿತಿ ನೀಡತಕ್ಕದ್ದು ಎಂದು ಆದೇಶಿಸಲಾಗಿರುತ್ತದೆ.

ಒಂದು ವೇಳೆ ಅಭ್ಯರ್ಥಿಗಳಲ್ಲಿ ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 102 ಸೇವನೆ 2022 ದಿನಾಂಕ 24-03-2025 ರನ್ವಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣಗೊಳ್ಳದೇ ಇದ್ದಲ್ಲಿ, ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 43 ಸೇವನೆ 2020, ದಿನಾಂಕ: 5.3.2021 ರನ್ವಯ ಎಸ್‌ಎಸ್‌ಎಲ್‌ಸಿ ಹಂತದಲ್ಲಿನ ಪ್ರಥಮ ಭಾಷೆ ಕನ್ನಡದನ್ವಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಗರಿಷ್ಠ 150 ಅಂಕಗಳ ಒಂದು ಪ್ರಶ್ನೆ ಪತ್ರಿಕೆಯಲ್ಲಿ ಅಭ್ಯರ್ಥಿಯು ಅರ್ಹತೆ ಹೊಂದಲು ಕನಿಷ್ಠ 50 ಅಂಕಗಳನ್ನು ಗಳಿಸಬೇಕಾಗಿರುತ್ತದೆ.

**ಸೂಚನೆ: ಮೇಲ್ಕಂಡ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆ ಹೊರತು ಪಡಿಸಿ, ಇತರೆ ವಿದ್ಯಾರ್ಹತೆಯಲ್ಲಿ ಅರ್ಜಿ ಸಲ್ಲಿಸಿ ಮುಂದಿನ ಪ್ರಕ್ರಿಯೆಯಲ್ಲಿ ಅನರ್ಹಗೊಂಡಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.**

**ವಯೋಮಿತಿ:** ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಕನಿಷ್ಠ 18 ವರ್ಷಗಳು ತುಂಬಿರತಕ್ಕದ್ದು ಹಾಗೂ ಈ ಕೆಳಕಂಡ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು;

c. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 262 ಸೇಶನಿ 2025 ದಿನಾಂಕ 29.01.2026 ರಲ್ಲಿ ನಿರ್ದೇಶಿಸಿರುವಂತೆ ಒಂದು ಬಾರಿಗೆ ಅನ್ವಯವಾಗುವಂತೆ ಗರಿಷ್ಠ ವಯೋಮಿತಿಯಲ್ಲಿ 5 ವರ್ಷಗಳ ಸಡಿಲಿಕೆಯನ್ನು ನೀಡಲಾಗಿದೆ.

| **ಅಭ್ಯರ್ಥಿಗಳು** | **ಗರಿಷ್ಠ ವಯೋಮಿತಿ** |
|---|---|
| ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಗೆ | 33 ವರ್ಷಗಳು |
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ /ಪ್ರವರ್ಗ-1 ಮತ್ತು ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ | 35 ವರ್ಷಗಳು |
| ಕರ್ನಾಟಕದ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಅಭ್ಯರ್ಥಿಗಳಿಗೆ | 38 ವರ್ಷಗಳು |

**<u>ಟಿಪ್ಪಣಿ:</u>**

**ಮಾಜಿ ಸೈನಿಕ ಅಭ್ಯರ್ಥಿಗಳಿಗೆ:** ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದು ಹಾಕಿದ ಹಾಗೂ ಸೇವಾನಿವೃತ್ತಿ ಹೊಂದಿದಕಾರಣದಿಂದ ಬಿಡುಗಡೆಯಾದ ಮಾಜಿ ಯೋಧರಾಗಿದ್ದಲ್ಲಿ "ಅವರು ಸೇವೆಸಲ್ಲಿಸಿದ ಅವಧಿ"ಯ ಜೊತೆಗೆ ಹೆಚ್ಚುವರಿ 03 ವರ್ಷಗಳ ರಿಯಾಯಿತಿಯನ್ನು ನೀಡಲಾಗುವುದು. ಮಾಜಿ ಯೋಧ ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ.

**d. ಅರ್ಜಿ ಸಲ್ಲಿಸುವ ವಿಧಾನ:** ಪ್ರಾಧಿಕಾರದ ವೆಬ್‌ಸೈಟ್ https://cetonline.karnataka.gov.in/kea/ ನಲ್ಲಿ ನೀಡಲಾಗುವ **ಲಿಂಕ್** ಅನ್ನು ಆಯ್ಕೆ ಮಾಡಿ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಭರ್ತಿ ಮಾಡಬೇಕು. ಒಮ್ಮೆ ಸಲ್ಲಿಸಿದ ಅರ್ಜಿಯಲ್ಲಿನ ಯಾವುದೇ ಮಾಹಿತಿಯನ್ನು ಯಾವುದೇ ಹಂತದಲ್ಲಿ ಬದಲಾವಣೆ / ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ. ಅಭ್ಯರ್ಥಿಗಳು ಎಚ್ಚರಿಕೆಯಿಂದ ಅಧಿಸೂಚನೆಯನ್ನು ಓದಿ ಅರ್ಥೈಸಿಕೊಂಡು ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ. ಅಭ್ಯರ್ಥಿಗಳು ಹುದ್ದೆಗಳ ವರ್ಗೀಕರಣದಲ್ಲಿ ಪ್ರಕಟಿಸಿದ ಯಾವುದಾದರೂ **ಒಂದು ಪಡೆಗೆ (ಒಂದು ಬ್ಯಾಟಲಿಯನ್‌ಗೆ)** ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.

**e. ಆನ್‌ಲೈನ್ ಅರ್ಜಿ ಸಲ್ಲಿಸಲು ವೇಳಾಪಟ್ಟಿ**

| | |
|---|---|
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | **13.07.2026** |
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **10.08.2026** |
| ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ | **11.08.2026** |

**ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಭರ್ತಿ ಮಾಡುವ ಮೊದಲು ಅರ್ಹತೆಗೆ ಸಂಬಂಧಿಸಿದ ಎಲ್ಲಾ ಸೂಚನೆಗಳನ್ನು ಓದಿಕೊಳ್ಳತಕ್ಕದ್ದು ಹಾಗೂ ನೀಡಿರುವ ಸೂಚನೆಗಳನ್ವಯ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.ತಪ್ಪು ಅಥವಾ ಸುಳ್ಳು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದಲ್ಲಿ ಯಾವುದೇ ಸಮಯದಲ್ಲಿಯಾದರೂ ಯಾವುದೇ ಸೂಚನೆ ನೀಡದೆ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು ಹಾಗೂ ನಿಯಮಾನುಸಾರ ಅಂತಹವರ ವಿರುದ್ಧ ಸರ್ಕಾರವು / ಪ್ರಾಧಿಕಾರ / ಸಂಸ್ಥೆಯು ಕಾನೂನಿನನ್ವಯ ಸೂಕ್ತಕ್ರಮ ಕೈಗೊಳ್ಳುವುದು.**

**ತರಬೇತಿ, ಖಾಯಂಪೂರ್ವ ಅವಧಿ ಮತ್ತು ವೇತನ ಶ್ರೇಣಿ :**

a) **ತರಬೇತಿ:** ನೇಮಕಾತಿ ಹೊಂದಿದ ಅಭ್ಯರ್ಥಿಗಳು ಡಿಜಿ ಮತ್ತು ಐಜಿಪಿ ರವರು ಕಾಲ-ಕಾಲಕ್ಕೆ ನಿರ್ದಿಷ್ಟ ಪಡಿಸಿದ ಪೊಲೀಸ್ ತರಬೇತಿ ಶಾಲೆಗಳಲ್ಲಿ ಒಂಬತ್ತು ತಿಂಗಳ ಮೂಲ ಬುನಾದಿ ತರಬೇತಿಯನ್ನು ಪಡೆಯಬೇಕು. ತರಬೇತಿಯಲ್ಲಿ ನಿಗದಿಪಡಿಸಿದ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು. ಸದರಿ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಅಭ್ಯರ್ಥಿಗಳಿಗೆ ಮತ್ತೊಂದು ಅವಕಾಶವನ್ನು ನೀಡಲಾಗುವುದು ಸದರಿ ಅವಕಾಶದಲ್ಲಿಯೂ ಸಹ ಅನುತ್ತೀರ್ಣರಾದ ಅಭ್ಯರ್ಥಿಗಳನ್ನು ಸೇವೆಯಿಂದ ವಜಾಗೊಳಿಸಲಾಗುವುದು.

b) **ಖಾಯಂಪೂರ್ವ ಅವಧಿ:** ಕರ್ನಾಟಕ ನಾಗರಿಕ ಸೇವಾ (ಖಾಯಂ ಪೂರ್ವ) ನಿಯಮಗಳು 1977 ರನ್ವಯ ನೇರ ನೇಮಕಾತಿ ಮೂಲಕ ಆಯ್ಕೆಗೊಂಡ ಅಭ್ಯರ್ಥಿಗಳು ಸೇವೆಗೆ ಸೇರಿದ ದಿನಾಂಕದಿಂದ (ಮೂಲ ಬುನಾದಿ ತರಬೇತಿಯು ಸೇರಿದಂತೆ) ಎರಡು ವರ್ಷ ಆರು ತಿಂಗಳುಗಳ ಕಾಲದ ಖಾಯಂಪೂರ್ವ ಅವಧಿಯಲ್ಲಿರುತ್ತಾರೆ.

c) **ವೇತನ ಶ್ರೇಣಿ:₹. 37500-900-39300-1000-43300-1125-47800-1250-52800-1375-58300-1500-64300-1650-74200-1900-76100**

d) **ಪಿಂಚಣಿ ಸೌಲಭ್ಯ:** ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ (ಎಸ್‌ಪಿಎಲ್) 04 ಪಿಇಟಿ 2005, ದಿನಾಂಕ:31.03.2006 ರಂತೆ ರಾಷ್ಟ್ರೀಯ ಪಿಂಚಣಿ ಯೋಜನೆ (ಎನ್.ಪಿ.ಎಸ್) ಸೌಲಭ್ಯ ಅನ್ವಯವಾಗುವುದು.

**f.** **ಶುಲ್ಕ:**ಆನ್‌ಲೈನ್ ಮೂಲಕ ಮಾತ್ರ ಶುಲ್ಕ ಪಾವತಿಸಬೇಕಾಗಿರುತ್ತದೆ.

| ವಿವರಗಳು | ಶುಲ್ಕ | |
|---|---|---|
| ಸಾಮಾನ್ಯ ಅರ್ಹತೆ ಮತ್ತು ಇತರೆ ಪ್ರವರ್ಗಗಳು (ಪ್ರವರ್ಗ-2ಎ / 2ಬಿ / 3ಎ / 3ಬಿ) | ರೂ. 750 /- | ಪಾವತಿಸಿದ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳು | ರೂ. 500 /- | |

**g.** **ಲಿಖಿತ ಪರೀಕ್ಷಾ ವಿಧಾನ:**

ಮೇಲ್ಕಂಡ ಹುದ್ದೆಗಳಿಗೆ ಲಿಖಿತ ಪರೀಕ್ಷೆಯನ್ನು ಆಫ್‌ಲೈನ್-ಒಎಂಆರ್ ಮಾದರಿ (Offline-OMR type) ಯಲ್ಲಿ ನಡೆಸಲಾಗುವುದು.

**ಲಿಖಿತ ಪರೀಕ್ಷೆಯನ್ನು ರಾಜ್ಯದ ಆಯ್ದ ಜಿಲ್ಲಾಕೇಂದ್ರಗಳಲ್ಲಿ** ನಡೆಸಲಾಗುವುದು. **(ಆಡಳಿತಾತ್ಮಕ ಉದ್ದೇಶದಿಂದ ಜಿಲ್ಲಾ ಪರೀಕ್ಷಾ ಕೇಂದ್ರಗಳು ಬದಲಾವಣೆಯ ಷರತ್ತಿಗೆ ಒಳಪಟ್ಟಿರುತ್ತದೆ)**ಅಭ್ಯರ್ಥಿಗಳಿಗೆ ಪರೀಕ್ಷೆಯ ಪ್ರವೇಶ ಪತ್ರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಪ್ರಕಟಣೆಯ ಮೂಲಕ ತಿಳಿಸಲಾಗುವುದು ಹಾಗೂ ಈ ಬಗ್ಗೆ ಮಾಹಿತಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿಯೂ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಒಂದು ಮೂಲ ಗುರುತಿನ ಚೀಟಿಯೊಂದಿಗೆ (ಪ್ಯಾನ್‌ಕಾರ್ಡ್ / ವಾಹನ ಚಾಲನಾ ಪರವಾನಗಿ / ಆಧಾರ್‌ಕಾರ್ಡ್ / ಪಾಸ್‌ಪೋರ್ಟ್ / ವೋಟರ್ ಐಡಿ/ ಸರ್ಕಾರಿ ನೌಕರರ ಐಡಿ) ಪರೀಕ್ಷಾ ಕೇಂದ್ರಗಳಿಗೆ ಹೋಗಬೇಕು. ತಪ್ಪಿದ್ದಲ್ಲಿ ಪರೀಕ್ಷಾ ಕೇಂದ್ರವನ್ನು ಪ್ರವೇಶಿಸಲು ಅನುಮತಿಸಲಾಗುವುದಿಲ್ಲ.
**(ಪರೀಕ್ಷಾ ಕೇಂದ್ರವನ್ನು ಯಾವುದೇ ಕಾರಣಕ್ಕೂ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ)**

➢ **ಸೂಚನೆ:-**

ಮೇಲ್ಕಂಡ ಎಲ್ಲಾ ವಿಶೇಷ ಮೀಸಲು ಪೊಲೀಸ್ ಕಾನ್‌ಸ್ಟೇಬಲ್ (ಕೆ.ಎಸ್.ಆರ್.ಪಿ), (ಕೆ.ಎಸ್.ಐ.ಎಸ್.ಎಫ್) ಮತ್ತು (ಐ.ಆರ್.ಬಿ) ಹುದ್ದೆಗಳಿಗೆ ಆನ್‌ಲೈನ್ ಮೂಲಕ ಒಂದೇ ಅರ್ಜಿಯನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಮೊದಲ ಒಂದು ಹುದ್ದೆಯ ಅರ್ಜಿಗೆ ಮೇಲ್ಕಂಡ ಶುಲ್ಕವನ್ನು ಪಾವತಿಸತಕ್ಕದ್ದು ಹಾಗೂ ಒಂದೇ ಪಠ್ಯಕ್ರಮದ ಹೆಚ್ಚುವರಿ ವೃಂದ/ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ್ದಲ್ಲಿ ಆಯ್ಕೆ ಮಾಡಲಾದ ಪ್ರತಿ ಹೆಚ್ಚುವರಿ ಹುದ್ದೆಗೆ ರೂ.100 ನ್ನು ಅರ್ಜಿ ಶುಲ್ಕವಾಗಿ ಪಾವತಿಸತಕ್ಕದ್ದು. ಅದರಂತೆ ಒಂದೇ ಪಠ್ಯಕ್ರಮದ ಹುದ್ದೆಗಳ ಒಂದೇ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶುಲ್ಕ ಪಾವತಿಸಿದ ಎಲ್ಲಾ ಹುದ್ದೆಗಳಿಗೆ ಪರಿಗಣಿಸಿ, ಪೊಲೀಸ್ ಇಲಾಖೆ ಅಂಕಪಟ್ಟಿಯನ್ನು ಹಸ್ತಾಂತರಿಸಲಾಗುವುದು.

**a. ಪ್ರಶ್ನೆಪತ್ರಿಕೆ ಹಾಗೂ ಪಠ್ಯಕ್ರಮ :-**

| ಪತ್ರಿಕೆ/ Paper | ವಿಷಯ / Subject | ಒಟ್ಟು ಪ್ರಶ್ನೆಗಳು/ Total Questions | ಒಟ್ಟು ಅಂಕಗಳು/ Total Marks | ಅವಧಿ / Duration (ಗಂಟೆ / hours) |
|---|---|---|---|---|
| ಲಿಖಿತ ಪರೀಕ್ಷೆ | ಸಾಮಾನ್ಯ ಅಧ್ಯಯನ ಮತ್ತು ಮಾನಸಿಕ ಸಾಮರ್ಥ್ಯ | 100 | 100 | 1 ½ ಗಂಟೆ (90 ನಿಮಿಷಗಳು) |

- **ಲಿಖಿತ ಪರೀಕ್ಷೆ ವೇಳಾ ಪಟ್ಟಿ :**

| ಪರೀಕ್ಷೆ | ದಿನಾಂಕ | ಸಮಯ |
|---|---|---|
| ಲಿಖಿತ ಪರೀಕ್ಷೆ | 20.09.2026 | ಮಧ್ಯಾಹ್ನ 02:30 ರಿಂದ 04:00 ರವರೆಗೆ |
| ಕಡ್ಡಾಯ ಕನ್ನಡ (ಟಿಪ್ಪಣಿ-b ಯಲ್ಲಿ ತಿಳಿಸಿರುವಂತೆ ಕಡ್ಡಾಯ ಕನ್ನಡ ಪರೀಕ್ಷೆಯಿಂದ ವಿನಾಯಿತಿ ಪಡೆಯದ ಅಭ್ಯರ್ಥಿಗಳಿಗೆ) | ನಂತರದ ದಿನಾಂಕದಲ್ಲಿ ತಿಳಿಸಲಾಗುವುದು | |

- **ಸೂಚನೆ:-**

2026-27ನೇ ಸಾಲಿನ ಕಲ್ಯಾಣ ಕರ್ನಾಟಕ ಮೀಸಲಾತಿಯಲ್ಲಿನ ವಿಶೇಷ ಮೀಸಲು ಪೊಲೀಸ್ ಕಾನ್‌ಸ್ಟೇಬಲ್ (ಕೆ.ಎಸ್.ಆರ್.ಪಿ, ಐ.ಆರ್.ಬಿ ಮತ್ತು ಕೆ.ಎಸ್.ಐ.ಎಸ್.ಎಫ್) ಹುದ್ದೆಗಳಿಗೆ ಒಂದೇ ಲಿಖಿತ ಪರೀಕ್ಷೆಯನ್ನು ನಡೆಸಲಾಗುವುದು.

ವೃಂದ ಮತ್ತು ನೇಮಕಾತಿ ನಿಯಮದಂತೆ, ಲಿಖಿತ ಪರೀಕ್ಷೆಯ ನಂತರದ ದೈಹಿಕ ಪರೀಕ್ಷೆಗಾಗಿ (ಕೆ.ಎಸ್.ಆರ್.ಪಿ, ಐ.ಆರ್.ಬಿ ಮತ್ತು ಕೆ.ಎಸ್.ಐ.ಎಸ್.ಎಫ್) ಹುದ್ದೆಯ ಆಯಾ ನೇಮಕಾತಿ ಪ್ರಾಧಿಕಾರವತಿಯಿಂದ ಆಯಾ ವೃಂದದ ಹುದ್ದೆಯಲ್ಲಿ ಅಧಿಸೂಚಿಸಲಾಗಿರುವ ಹುದ್ದೆಗಳಲ್ಲಿ ಪ್ರವರ್ಗವಾರು 1:5 ಅನುಪಾತದಲ್ಲಿ ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಯನ್ನು ಪ್ರತ್ಯೇಕವಾಗಿ ನಡೆಸಿ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

- ಸರ್ಕಾರದ ಪತ್ರ ಸಂಖ್ಯೆ: ಒಇ 207 ಪೊಸಿಇ 2018, ದಿನಾಂಕ: 05.02.2019 ರಲ್ಲಿ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸುವ ಸಂಬಂಧ ಸ್ಪಷ್ಟೀಕರಣ ನೀಡಿದ್ದು, ಅದರಂತೆ ಅರ್ಹ ಮೆರಿಟ್ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಲುವಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲಾಗುತ್ತದೆ. ಆದ್ದರಿಂದ ಅಭ್ಯರ್ಥಿಗಳು ಶೂನ್ಯ ಹಾಗೂ ಶೂನ್ಯಕ್ಕಿಂತ ಕಡಿಮೆ ಅಂಕಗಳನ್ನು ಪಡೆದಲ್ಲಿ ಅಂತಹ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸುವುದು ಸೂಕ್ತವಲ್ಲ ಮತ್ತು ಸಮಂಜಸವಾಗಿರುವುದಿಲ್ಲವೆಂದು ಸ್ಪಷ್ಟೀಕರಣ ನೀಡಲಾಗಿರುವುದರಿಂದ ಶೂನ್ಯ ಹಾಗೂ ಶೂನ್ಯಕ್ಕಿಂತ ಕಡಿಮೆ ಅಂಕಗಳನ್ನು ಪಡೆದಂತಹ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸದೆ ಆಯಾ ವರ್ಗಕ್ಕೆ ಸೇರಿದ ಇತರೇ ಅರ್ಹ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದು.

## b. ಋಣಾತ್ಮಕ ಮೌಲ್ಯಮಾಪನ (Negative Valuation):-

- ಸ್ಪರ್ಧಾತ್ಮಕ ಪರೀಕ್ಷೆಯ ಪ್ರಶ್ನೆಪತ್ರಿಕೆಗಳಲ್ಲಿನ ಪ್ರತಿಯೊಂದು ಪ್ರಶ್ನೆಗೂ 04 ಪರ್ಯಾಯ ಉತ್ತರಗಳಿದ್ದು, ಅಭ್ಯರ್ಥಿಯು ಯಾವುದಾದರೂ ಒಂದು ಸರಿ ಉತ್ತರವನ್ನು ಮಾತ್ರ ಆಯ್ಕೆ ಮಾಡತಕ್ಕದ್ದು. ಪ್ರತಿ ತಪ್ಪು ಉತ್ತರಕ್ಕೆ ನಾಲ್ಕನೇ ಒಂದಂಶದಷ್ಟು **0.25** ಅಂಕಗಳನ್ನು ಕಳೆಯಲಾಗುವುದು.

- **ಒ.ಎಂ.ಆರ್ ಉತ್ತರ ಪತ್ರಿಕೆಯಲ್ಲಿ 5ನೇ ಆಯ್ಕೆ/ ವೃತ್ತವನ್ನು ನೀಡಿದ್ದು, ಉತ್ತರಿಸದೇ ಇರುವ ಪ್ರಶ್ನೆಗಳಿಗೆ ಐದನೇ ಆಯ್ಕೆ/ವೃತ್ತವನ್ನು ಶೇಡ್ ಮಾಡಲು ಕೊನೆಯ ಬೆಲ್ ಆದ ನಂತರ ಹೆಚ್ಚುವರಿಯಾಗಿ ಐದು ನಿಮಿಷಗಳನ್ನು ನೀಡಲಾಗುವುದು. ಯಾವುದೇ ಆಯ್ಕೆಯನ್ನು / ವೃತ್ತವನ್ನು ಶೇಡ್ ಮಾಡಿಲ್ಲದಿದ್ದರೆ, ಪ್ರತಿ ಪ್ರಶ್ನೆಗೆ 0.25 ಅಂಕಗಳನ್ನು ಕಡಿತಗೊಳಿಸಲಾಗುತ್ತದೆ.**

## vii.ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಗಳ ವಿವರ:

- ಅಭ್ಯರ್ಥಿಗಳು ವಸ್ತುನಿಷ್ಠ ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಲಾಗುವುದು. ಈ ಅರ್ಹತಾ ಪಟ್ಟಿಯಿಂದ ಪ್ರತಿ ವರ್ಗದಲ್ಲಿ ಅಧಿಸೂಚಿತ ಖಾಲಿ ಇರುವ ಹುದ್ದೆಗಳಿಗೆ ಮೆರಿಟ್ ಹಾಗೂ ಮೀಸಲಾತಿಗೆ ಅನುಗುಣವಾಗಿ ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಗಳಿಗೆ 1:5 ರ ಅನುಪಾತದಲ್ಲಿ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ತಯಾರಿಸಲಾಗುವುದು. 1:5 ರ ಅನುಪಾತದಂತೆ ಆಯ್ಕೆಯಾಗಿರುವ ಅಭ್ಯರ್ಥಿಗಳು ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಗಳಲ್ಲಿ ಅರ್ಹರಾಗದಿದ್ದಲ್ಲಿ ಮುಂದಿನ 1:5 ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳಿಗೆ ಕರೆಯಲಾಗುವುದು. ಈ ಅನುಪಾತವು ಯಾವುದೇ ಕಾರಣಕ್ಕೂ 1:10ರ ಅನುಪಾತವನ್ನು ಮೀರುವುದಿಲ್ಲ.

**viii.ಲಿಖಿತ ಪರೀಕ್ಷೆಯಲ್ಲಿ 1:5ರ ಅನುಪಾತದಡಿ ಅರ್ಹಗೊಂಡ ಅಭ್ಯರ್ಥಿಗಳಿಗೆ ದೇಹದಾರ್ಢ್ಯತೆ ಪರೀಕ್ಷೆ (Physical Standard Test) (PST) ಮತ್ತು ಸಹಿಷ್ಣುತೆ ಪರೀಕ್ಷೆ (Physical Endurance Test) (PET) ಗಳನ್ನು ನಡೆಸಲಾಗುವುದು:**

ಪರೀಕ್ಷೆಗಳ ದಿನಾಂಕವನ್ನು ವೆಬ್‌ಸೈಟ್ "https://cetonline.karnataka.gov.in/kea/"ನಲ್ಲಿ ಹಾಗೂ "https://ksp.karnataka.gov.in/" ನಲ್ಲಿ ಪ್ರಕಟಿಸಲಾಗುವುದು.ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಹೊಂದಿರುವ ಪ್ರವೇಶ/ಕರೆ ಪತ್ರಗಳನ್ನು ಪ್ರಾಧಿಕಾರದ ಅಧಿಕೃತ ವೆಬ್‌ಸೈಟ್ ಮೂಲಕ ಅಭ್ಯರ್ಥಿಗಳು ಕಡ್ಡಾಯವಾಗಿ ಡೌನ್‌ಲೋಡ್ ಮಾಡಿಕೊಳ್ಳಬೇಕು. ಅಭ್ಯರ್ಥಿಗಳಿಗೆ ಪ್ರವೇಶ ಪತ್ರಗಳನ್ನು ಪ್ರತ್ಯೇಕವಾಗಿ ರವಾನಿಸಲಾಗುವುದಿಲ್ಲ. ಪ್ರವೇಶ ಪತ್ರವಿಲ್ಲದೇ ಪಿ.ಎಸ್.ಟಿ. ಮತ್ತು ಪಿ.ಇ.ಟಿ. ಪರೀಕ್ಷೆಗಳಿಗೆ ಅನುವು ಮಾಡಲಾಗುವುದಿಲ್ಲ. ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಈ ಕಛೇರಿಯ ಅಧಿಕೃತ ವೆಬ್‌ಸೈಟ್ https://cetonline.karnataka.gov.in/kea/ಹಾಗೂ "https://ksp.karnataka.gov.in/" ನ್ನು ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ.

**a)** ಅಭ್ಯರ್ಥಿಗಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳನ್ನು ಸಂಬಂಧಪಟ್ಟ ಪೊಲೀಸ್ ಅಧೀಕ್ಷಕರ / ಪೊಲೀಸ್ ಆಯುಕ್ತರ ಕಛೇರಿಯು / ಇತರೆ ನೇಮಕಾತಿ ಪ್ರಾಧಿಕಾರದ ಕಛೇರಿಯು ನಿಗದಿಪಡಿಸಿದ ಸ್ಥಳದಲ್ಲಿ ನಡೆಸಲಾಗುವುದು. ಆಯ್ಕೆ ಸಮಿತಿಯು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ. ಆದ್ದರಿಂದ ಅಭ್ಯರ್ಥಿಗಳು ಇಲಾಖೆಯ ವೈಬ್‌ಸೈಟ್‌ನ್ನು ದಿನ ನಿತ್ಯ ನೋಡಲು ತಿಳಿಸಲಾಗಿದೆ.

**b)** ದೈಹಿಕ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಸಂಬಂಧಪಟ್ಟ ದೈಹಿಕ ಪರೀಕ್ಷೆಯ ಕೇಂದ್ರಗಳ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ದೈಹಿಕ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ.
ದೈಹಿಕ ಪರೀಕ್ಷೆಗೆ ಬರುವಾಗ ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

i) ಪಾಸ್‌ಪೋರ್ಟ್ (Passport)
ii) ಚಾಲನಾ ಪರವಾನಗಿ ಪತ್ರ (Driving License)
iii) ಪ್ಯಾನ್ ಕಾರ್ಡ್ (PAN Card)
iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)
v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)
vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)
vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Caste Certificate with Photo)
viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)
ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)
x) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).
xi) ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್.(AADHAR CARD).

**c)** ಕರೆಪತ್ರದ ಜೊತೆಗೆ ಆನ್‌ಲೈನ್ ಮುಖಾಂತರ ಸಲ್ಲಿಸಿದ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ಸಹ ತರತಕ್ಕದ್ದು, ತಪ್ಪಿದ್ದಲ್ಲಿ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ. ನಿಗದಿತ ದಿನಾಂಕ ಹಾಗೂ ಸಮಯದಲ್ಲಿ ಹಾಜರಾಗದಿದ್ದರೆ ಅಂತಹವರನ್ನು ಅನರ್ಹ ಗೊಳಿಸಲಾಗುವುದು ಹಾಗೂ ಬದಲಿ ದಿನಾಂಕವನ್ನು ನೀಡಲಾಗುವುದಿಲ್ಲ.

**d) ದೇಹದಾರ್ಢ್ಯತೆ ಪರೀಕ್ಷೆ (Physical Standard Test):**

| | |
|---|---|
| ಪುರುಷ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 168 ಸೆಂ. ಮೀ.<br>***ಕನಿಷ್ಠ ಎದೆ ಸುತ್ತಳತೆ*** :<br>86 ಸೆಂ. ಮೀ (ಪೂರ್ತಿ ವಿಸ್ತರಿಸಿದಾಗ) ಕನಿಷ್ಠ ವಿಸ್ತರಣೆ 5 ಸೆಂ. ಮೀ. |
| ಮಹಿಳಾ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 158 ಸೆಂ. ಮೀ.<br>***ಕನಿಷ್ಠ ತೂಕ*** : 45 ಕೆ.ಜಿ. |
| ಕರ್ನಾಟಕ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಪುರುಷ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 155 ಸೆಂ. ಮೀ.<br>***ಕನಿಷ್ಠ ಎದೆ ಸುತ್ತಳತೆ:***<br>5 ಸೆಂ. ಮೀ.ಗಳ ಕನಿಷ್ಠ ವಿಸ್ತರಿಸುವುದರೊಂದಿಗೆ ಸಂಪೂರ್ಣವಾಗಿ ಹಿಗ್ಗಿಸಿದಾಗ 75 ಸೆಂ. ಮೀ.ಗಳಿಗಿಂತ ಕಡಿಮೆ ಇಲ್ಲದಂತೆ |
| ಕರ್ನಾಟಕ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಮಹಿಳಾ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 150 ಸೆಂ. ಮೀ.<br>***ಕನಿಷ್ಠ ತೂಕ*** : 45 ಕೆ.ಜಿ |

**ಟಿಪ್ಪಣಿ:**

- ನಿಗದಿಪಡಿಸಿರುವ ಕನಿಷ್ಠ ಎತ್ತರ 168 ಸೆಂ.ಮೀ. ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಿಲ್ಲದೆ ಇರುವ ಪಕ್ಷದಲ್ಲಿ ಕಡಿಮೆ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಸಹ ಅರ್ಹತೆಗೆ ಅನುಗುಣವಾಗಿ ಅಂತಿಮ ಆಯ್ಕೆಗೆ ಪರಿಗಣಿಸಲಾಗುವುದು. ಕಡಿಮೆ ಎತ್ತರ ಹೊಂದಿರುವ ಅಭ್ಯರ್ಥಿಗಳು ಹೆಚ್ಚಿನ ಅಂಕಗಳನ್ನು ಪಡೆದಿದ್ದರೂ ಮೊದಲು ಕನಿಷ್ಠ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಪರಿಗಣಿಸಿದ ನಂತರ ಕಡಿಮೆ ಎತ್ತರ ಹೊಂದಿರುವ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಪರಿಗಣಿಸಲಾಗುವುದು.
- **"ಬುಡಕಟ್ಟು ಜನಾಂಗ"** ಎಂದರೆ "ಉತ್ತರ ಕನ್ನಡ ಕಾರವಾರ, ದಕ್ಷಿಣ ಕನ್ನಡ ಮಂಗಳೂರು, ಉಡುಪಿ, ಚಿಕ್ಕಮಗಳೂರು, ಶಿವಮೊಗ್ಗ, ಕೊಡಗು, ಚಾಮರಾಜನಗರ ಮತ್ತು ಮೈಸೂರು ಅರಣ್ಯಗಳಲ್ಲಿ ಸಿದ್ದಿಗರು, ಜೇನುಕುರುಬ, ಕಾಡುಕುರುಬ, ಯೆರವ, ಸೋಲಿಗ, ಕುಡಿಯ, ಗೌಡ್ಲು, ಹಸಲರು, ಮಲೈಕುಡಿಯ ಮತ್ತು ಕೊರಗ ಬುಡಕಟ್ಟು ಸಮುದಾಯಗಳಿಗೆ ಸೇರಿದ ಅಭ್ಯರ್ಥಿಗಳು".

**a) ದೈಹಿಕ ಸಹಿಷ್ಣುತೆ ಪರೀಕ್ಷೆ : (Physical Endurance Test)**

i) ಮೇಲಿನ ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹರಾದ ಅಭ್ಯರ್ಥಿಗಳು ಈ ಕೆಳಗಿನ ಎಲ್ಲಾ ಸಹಿಷ್ಣುತೆ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು ಹಾಗೂ ಈ ಕೆಳಗಿನ ಎಲ್ಲಾ ಸಹಿಷ್ಣುತೆ ಪರೀಕ್ಷೆಗಳನ್ನು ಈ ಕೆಳಗೆ ನಮೂದಿಸಿರುವ ಕ್ರಮದಲ್ಲಿಯೇ ಭಾಗವಹಿಸುವುದು ಕಡ್ಡಾಯವಾಗಿರುತ್ತದೆ. ಈ ಪರೀಕ್ಷೆಗಳಲ್ಲಿ ಭಾಗವಹಿಸುವುದನ್ನು ತಿರಸ್ಕರಿಸುವವರು/ ವಿಫಲವಾಗುವವರು ಅನರ್ಹತೆಗೆ ಒಳಗಾಗುವರು. ಪ್ರತಿಯೊಂದು ಸಹಿಷ್ಣುತೆ ಪರೀಕ್ಷೆ ಮುಗಿದ ನಂತರ ನಿಗದಿತ ನಮೂನೆಗೆ ಅಭ್ಯರ್ಥಿಯು ಭರ್ತಿ ಮಾಡಿರುವ ವಿವರಗಳನ್ನು ಪರಿಶೀಲಿಸಿ ಸಹಿ ಹಾಕಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಯು ಅನರ್ಹತೆಗೊಳಗಾಗುವನು. ಸಹಿಷ್ಣುತೆ ಪರೀಕ್ಷೆಗೆ ಅಂಕಗಳನ್ನು ನೀಡಲಾಗುವುದಿಲ್ಲ. ಇವು ಕೇವಲ ಅರ್ಹತೆಗೆ ಮಾತ್ರ ಸೀಮಿತವಾಗಿರುತ್ತದೆ.

ii) **ದೈಹಿಕ ಸಹಿಷ್ಣುತೆ ಪರೀಕ್ಷೆಯಲ್ಲಿರುವ ಅಂಶಗಳು ಹಾಗೂ ಅರ್ಹತಾ ವೇಳೆ/ ದೂರದ ವಿವರಗಳು ಈ ಕೆಳಕಂಡಂತಿರುತ್ತದೆ ಮತ್ತು ಅವುಗಳನ್ನು ನಮೂದಿಸಲಾಗಿರುವ ಕ್ರಮದಲ್ಲಿಯೇ ನಡೆಸಲಾಗುವುದು:**

| ದೈಹಿಕ ಸಹಿಷ್ಣುತೆ ಪರೀಕ್ಷೆ | | |
|---|---|---|
| | **ಅಂಶಗಳು** | **ಅರ್ಹತಾ ವೇಳೆ / ದೂರ** |
| ಪುರುಷ ಅಭ್ಯರ್ಥಿಗಳಿಗೆ | 1600 ಮೀಟರ್ ಓಟ | 6 ನಿಮಿಷ 30 ಸೆಕೆಂಡ್ |
| | ಉದ್ದ ಜಿಗಿತ<br>ಅಥವಾ<br>ಎತ್ತರ ಜಿಗಿತ | 3.80 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>ಅಥವಾ<br>1.20 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| | ಗುಂಡು ಎಸೆತ (7.26 ಕೆ.ಜಿ.) | 5.60 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| ಮಹಿಳಾ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳಿಗೆ | 400 ಮೀಟರ್ ಓಟ | 1 ನಿಮಿಷ 30 ಸೆಕೆಂಡ್ |
| | ಉದ್ದ ಜಿಗಿತ<br>ಅಥವಾ<br>ಎತ್ತರ ಜಿಗಿತ | 2.50 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>ಅಥವಾ<br>0.90 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| | ಗುಂಡು ಎಸೆತ (4 ಕೆ.ಜಿ.) | 3.75 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |

ವಿಶೇಷ ಸೂಚನೆಗಳು :-

i) ದೈಹಿಕ ಸಹಿಷ್ಣುತೆ ಪರೀಕ್ಷೆಗೆ ಹಾಜರಾಗುವ ಮುನ್ನ ಅಭ್ಯರ್ಥಿಗಳು ದೈಹಿಕವಾಗಿ ಸದೃಢರಿರಬೇಕು. ಈ ಪರೀಕ್ಷೆಗಳ ಸಂದರ್ಭದಲ್ಲಿ ಸಂಭವಿಸುವ ಯಾವುದೇ ರೀತಿಯ ಅನಾಹುತ / ತೊಂದರೆಗಳಿಗೆ ಪೊಲೀಸ್ ಇಲಾಖೆ/ ನೇಮಕಾತಿ ಸಮಿತಿಯು ಜವಾಬ್ದಾರರಾಗಿರುವುದಿಲ್ಲ. ಅಭ್ಯರ್ಥಿಗಳು ಅವರ ಸ್ವಂತ ಹಿತದೃಷ್ಟಿಯಿಂದ ಅವರ ದೇಹದ ವೈದ್ಯಕೀಯ ಪರೀಕ್ಷೆಯನ್ನು ಮಾಡಿಸಿಕೊಂಡು, ತಮ್ಮ ಆರೋಗ್ಯವು ಎಲ್ಲ ರೀತಿಯಿಂದಲೂ ಸದೃಢವಾಗಿದೆ ಎಂದು ಖಚಿತ ಪಡಿಸಿಕೊಂಡು ಇಲಾಖೆ ನಡೆಸುವ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಎಲ್ಲ ವಿಧದಿಂದಲೂ ಅರ್ಹರೆಂದು ಮುಂಚಿತವಾಗಿಯೇ ತಿಳಿದುಕೊಂಡು ಹಾಜರಾಗತಕ್ಕದ್ದು. ಈ ದಿಸೆಯಲ್ಲಿ ಕನಿಷ್ಠ ಒಂದು ತಿಂಗಳ ಮುಂಚೆಯಿಂದಲೇ ಸಹಿಷ್ಣುತೆ ಪರೀಕ್ಷೆಗೆ ಅಭ್ಯರ್ಥಿಗಳು ಸಾಕಷ್ಟು ಅಭ್ಯಾಸ ಮಾಡಿಕೊಳ್ಳತಕ್ಕದ್ದು. ಸಹಿಷ್ಣುತೆ ಪರೀಕ್ಷೆಯಲ್ಲಿ ಸಂಭವಿಸುವ ಯಾವ ಅನಾಹುತಗಳಿಗೂ ಇಲಾಖೆ ಜವಾಬ್ದಾರರಾಗುವುದಿಲ್ಲ. ಈ ಪರೀಕ್ಷೆಗಳಲ್ಲಿ ಅಭ್ಯರ್ಥಿಗಳು ತಮ್ಮ ಸ್ವಂತ ಜವಾಬ್ದಾರಿ ಹಾಗೂ ಸ್ವಇಚ್ಛೆಯಿಂದ ಭಾಗವಹಿಸುವುದು.

ii) ದೈಹಿಕ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು ದೈಹಿಕವಾಗಿ ಸದೃಢವಾಗಿರಬೇಕಾಗಿರುವುದರಿಂದ ಅನಾರೋಗ್ಯದ ಕಾರಣ ನಿಗದಿಪಡಿಸಲಾಗುವ ದಿನಾಂಕದಂದು ಹಾಜರಾಗದಿರುವ ಅಭ್ಯರ್ಥಿಗಳಿಗೆ ಮತ್ತೊಮ್ಮೆ ಅವಕಾಶ ಕಲ್ಪಿಸುವ ಕುರಿತು ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆ ಸಮಿತಿಯು ತೆಗೆದುಕೊಳ್ಳುವ ತೀರ್ಮಾನವೇ ಅಂತಿಮವಾಗಿರುತ್ತದೆ. ಅಲ್ಲದೆ ಪರೀಕ್ಷೆಗೆ ಅರ್ಹರಾಗುವ ಗರ್ಭಿಣಿ ಮಹಿಳಾ ಅಭ್ಯರ್ಥಿಗಳಿಗೆ ಆರೋಗ್ಯದ ಹಿತದೃಷ್ಟಿಯಿಂದ ಅವಕಾಶ ಕಲ್ಪಿಸದಿರುವುದು ಸೂಕ್ತವಾಗಿರುತ್ತದೆ. ಆದ್ದರಿಂದ ಸದರಿ ವಿಷಯದ ಕುರಿತು ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ಆಯ್ಕೆ ಸಮಿತಿಯು ತೆಗೆದುಕೊಳ್ಳುವ ತೀರ್ಮಾನವೇ ಅಂತಿಮವಾಗಿರುತ್ತದೆ. ಒಂದು ವೇಳೆ ಅಭ್ಯರ್ಥಿಯು ಸಮಿತಿಯ ತೀರ್ಮಾನವನ್ನು ಉಲ್ಲಂಘಿಸಿ, ಸ್ವಇಚ್ಛೆಯಿಂದ ಭಾಗವಹಿಸಿದಲ್ಲಿ, ಉಂಟಾಗಬಹುದಾದ ಅನಾಹುತ/ ತೊಂದರೆಗಳಿಗೆ ಪೊಲೀಸ್ ಇಲಾಖೆ/ ನೇಮಕಾತಿ ಸಮಿತಿಯವರು ಜವಾಬ್ದಾರರಾಗಿರುವುದಿಲ್ಲ.

ಟಿಪ್ಪಣಿ :

i) ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಯನ್ನು ಒಂದು ದೈಹಿಕ ಪರೀಕ್ಷೆಯ ಸಮಿತಿಯು ನಡೆಸುತ್ತದೆ. ಯಾವುದೇ ವೈದ್ಯಕೀಯ ಪ್ರಮಾಣ ಪತ್ರದ ಆಧಾರದ ಮೇಲೆ ಪರಿಗಣಿಸಲಾಗುವುದಿಲ್ಲ. ದೈಹಿಕ ಪರೀಕ್ಷೆಯ ಸಮಿತಿಯು ನೀಡುವ ಫಲಿತಾಂಶವೇ ಅಂತಿಮವಾಗಿರುತ್ತದೆ.

ii) ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆ ಪೂರ್ಣಗೊಂಡ ನಂತರ ಅಭ್ಯರ್ಥಿಗಳು ದೈಹಿಕ ಪರೀಕ್ಷೆ ಸಮಿತಿ ಸಮ್ಮುಖದಲ್ಲಿ ನಿಗದಿತ ನಮೂನೆಗೆ ಸಹಿ ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು. ಇಲ್ಲವಾದರೆ ಅಂತಹವರನ್ನು ಅನರ್ಹರೆಂದು ಪರಿಗಣಿಸಲಾಗುವುದು.

iii) ಅಭ್ಯರ್ಥಿಗಳು ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಯಲ್ಲಿ ಅರ್ಹಗೊಂಡಲ್ಲಿ ಮಾತ್ರ ವೈದ್ಯಕೀಯ ಪರೀಕ್ಷೆಗೆ ಅರ್ಹಗೊಳ್ಳುವರು.

iv) ನಿಗದಿಪಡಿಸಿರುವ ಕನಿಷ್ಠ ಎತ್ತರ 168 ಸೆಂ.ಮೀ. ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಿಲ್ಲದೆ ಇರುವ ಪಕ್ಷದಲ್ಲಿ ಕಡಿಮೆ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಸಹ ಅರ್ಹತೆಗೆ ಅನುಗುಣವಾಗಿ ಅಂತಿಮ ಆಯ್ಕೆಗೆ ಪರಿಗಣಿಸಲಾಗುವುದು. ಕಡಿಮೆ ಎತ್ತರ ಹೊಂದಿರುವ ಅಭ್ಯರ್ಥಿಗಳು ಹೆಚ್ಚಿನ ಅಂಕಗಳನ್ನು ಪಡೆದಿದ್ದರೂ ಮೊದಲು ಕನಿಷ್ಠ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಪರಿಗಣಿಸಿದ ನಂತರ ಕಡಿಮೆ ಎತ್ತರ ಹೊಂದಿರುವ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಪರಿಗಣಿಸಲಾಗುವುದು.

v) ದೇಹದಾರ್ಢ್ಯತೆ ಪರೀಕ್ಷೆಯ ಎತ್ತರ ಹಾಗೂ ತೂಕವನ್ನು ಗುಣಮಟ್ಟ ಯಂತ್ರದಿಂದ ಪಡೆಯಲಾಗುವುದು.

vi) ಪಾರದರ್ಶಕತೆಗಾಗಿ ಮೇಲೆ ಹೇಳಿದ ಎಲ್ಲಾ ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಯನ್ನು ವೀಡಿಯೋಗ್ರಫಿ ಅಥವಾ ಸಿಸಿ ಟಿವಿ ಮೂಲಕ ಸೆರೆಹಿಡಿಯಲಾಗುವುದು.

**vii)** ಈ ಮೇಲ್ಕಂಡ ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳನ್ನು ಪ್ರತಿ ವರ್ಗದನ್ವಯ ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಅಧಿಸೂಚಿತ ಖಾಲಿ ಹುದ್ದೆಗಳ ಸಂಖ್ಯೆಗಳಲ್ಲಿ 1:2 ರ ಅನುಪಾತದಂತೆ ಅರ್ಹತೆಯ ಕ್ರಮದಲ್ಲಿ ಕಿರುಪಟ್ಟಿ **(Shortlisted)** ಅನ್ನು ತಯಾರಿಸಲಾಗುವುದು. ಸದರಿ ಪಟ್ಟಿಯಿಂದ ಅಧಿಸೂಚಿತ ಖಾಲಿ ಹುದ್ದೆಗಳ ಸಂಖ್ಯೆಗನುಗುಣವಾಗಿ ಮಾತ್ರ ಅಭ್ಯರ್ಥಿಗಳಿಗೆ ನೇಮಕಾತಿ ಪ್ರಾಧಿಕಾರವು ನಿರ್ಧರಿಸುವ ಸಮಯ ಮತ್ತು ಸ್ಥಳದಲ್ಲಿ ವೈದ್ಯಕೀಯ ಮಂಡಳಿಯವರಿಂದ ವೈದ್ಯಕೀಯ ಪರೀಕ್ಷೆಯನ್ನು ನಡೆಸಲಾಗುವುದು ಹಾಗೂ ಇನ್ನುಳಿದ ವಿಧಾನ ಮತ್ತು ಅರ್ಹತೆಯನ್ನು ಸರ್ಕಾರದ ಆದೇಶ ದಿನಾಂಕ:13.04.2026 ಕ್ಕೆ ಒಳಪಟ್ಟಿರುತ್ತದೆ.

* ಅಭ್ಯರ್ಥಿಗಳು ಮೇಲ್ಕಂಡ ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಗಳಲ್ಲಿ ಅರ್ಹರಾಗಿದ್ದರೂ ಸಹ ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಯು ಶಾರೀರಿಕವಾಗಿ ಸಧೃಡರಾಗಿರಬೇಕಾಗಿರುತ್ತದೆ. ಆದ್ದರಿಂದ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸಲು ಅಡ್ಡಿಪಡಿಸುವಂತಹ ಯಾವುದೇ ದೈಹಿಕ ನ್ಯೂನ್ಯತೆಗಳನ್ನು / ಅಂಗವೈಕಲ್ಯಗಳನ್ನು ಹೊಂದಿರಬಾರದು.

**ix.ವೈದ್ಯಕೀಯ ಪರೀಕ್ಷೆ :**

ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಿದ ನಂತರ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಅರ್ಹರಾಗೊಳ್ಳುವ ಎಲ್ಲಾ ಅಭ್ಯರ್ಥಿಗಳು ವೈದ್ಯಕೀಯ ಮಂಡಳಿಯ ಮುಂದೆ ವೈದ್ಯಕೀಯ ಪರೀಕ್ಷೆಗೆ ಹಾಜರಾಗತಕ್ಕದ್ದು. ವೈದ್ಯಕೀಯ ಪರೀಕ್ಷೆಯ ವೇಳೆ ಮತ್ತು ಸ್ಥಳವನ್ನು ನೇಮಕಾತಿ ಪ್ರಾಧಿಕಾರವು ನಿಗದಿಪಡಿಸುವುದು.

ಆಯ್ಕೆಯಾದ ಅಭ್ಯರ್ಥಿಗಳು ವೈದ್ಯಕೀಯ ಪರೀಕ್ಷೆಗೆ ಹಾಜರಾಗುವಾಗ ಮೂಲ ದಾಖಲೆಗಳೊಂದಿಗೆ (ಎಸ್‌ಎಸ್‌ಎಲ್‌ಸಿ ಅಥವಾ 10ನೇ ತರಗತಿಯ ವಿದ್ಯಾರ್ಹತೆ ಪ್ರಮಾಣ ಪತ್ರ, ಪಿ.ಯು.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ, ಸಮತಳ ಮೀಸಲಾತಿ ಕೋರಿದ್ದಲ್ಲಿ ಅವುಗಳ ಪ್ರಮಾಣ ಪತ್ರಗಳು) ಹಾಜರಾಗುವುದು ಹಾಗೂ ಪತ್ರಾಂಕಿತ (Gazetted) ಅಧಿಕಾರಿಯವರಿಂದ ದೃಢೀಕರಿಸಿದ ಮೂಲ ದಾಖಲೆಗಳ ಜೆರಾಕ್ಸ್ ಪ್ರತಿಯ ಒಂದು ಸೆಟ್‌ಅನ್ನು ಸಂಬಂಧಪಟ್ಟ ಕಛೇರಿಗೆ ನೀಡುವುದು.

**ವೈದ್ಯಕೀಯ ಪರೀಕ್ಷೆಗಳು ಈ ಕೆಳಕಂಡಂತಿರುತ್ತವೆ :**

a) ದೃಷ್ಟಿ:

ಕನ್ನಡಕ ಸಹಿತ ಅಥವಾ ಕನ್ನಡಕವಿಲ್ಲದೇ ಕೆಳಗೆ ಕಾಣಿಸಿದ ದರ್ಜೆಯ ಸಮೀಪ ಮತ್ತು ದೂರದ ದೃಷ್ಟಿ ಹೊಂದಿರಬೇಕು.

| | ಉತ್ತಮ | | ಕನಿಷ್ಠ |
|---|---|---|---|
| (i) ದೂರದ ದೃಷ್ಟಿ | 6/9 | ಅಥವಾ | 6/9 |
| | 6/9 | | 6/12 |
| (ii) ಸಮೀಪದ ದೃಷ್ಟಿ | 0/6 | | 0/8 |

ಪ್ರತಿ ಕಣ್ಣು ಸಂಪೂರ್ಣ ಕ್ಷೇತ್ರ ದೃಷ್ಟಿ ಹೊಂದಿರಬೇಕು. ವರ್ಣಾಂಧತೆ, ಮೆಳ್ಳಗಣ್ಣು ಅಥವಾ ಯಾವುದೇ ಕಣ್ಣಿನ ಅಥವಾ ರೆಪ್ಪೆಯ ವಿಕೃತ ಸ್ಥಿತಿಯನ್ನು ಅನರ್ಹತೆಯೆಂದು ಪರಿಗಣಿಸಲಾಗುವುದು.

b) ಶ್ರವಣ ಶಕ್ತಿ:

i) ರಿನ್ನೇಸ್ ಪರೀಕ್ಷೆ (Rinne's Test) ii) ವೆಬ್ಬರ್ ಪರೀಕ್ಷೆ (Weber's Test)

iii) ವರ್ಟಿಗೋ ಪರೀಕ್ಷೆ (Tests for Vertigo)

ಮೇಲಿನ ಪರೀಕ್ಷೆಗಳಲ್ಲಿ ಯಾವುದೇ ನ್ಯೂನತೆಗಳು ಕಂಡು ಬಂದಲ್ಲಿ ಅನರ್ಹತೆ ಎಂದು ಪರಿಗಣಿಸಲಾಗುವುದು.

c) ಅಪಧಮನಿ ಊತ ಸಹ ಅನರ್ಹತೆ (Varicose Veins)

d) ಮಾತಿನಲ್ಲಿ ಅಡಚಣೆ ಸಹ ಅನರ್ಹತೆ (Impediment in speech)

e) ಎದೆಯ ಕ್ಷ-ಕಿರಣ (Chest X-Ray) ವನ್ನು ಪರೀಕ್ಷೆಗೆ ತೆಗೆದುಕೊಳ್ಳಲಾಗುವುದು ಹಾಗೂ ಯಾವುದೇ ಇತರೆ ವೈದ್ಯಕೀಯ ಪರೀಕ್ಷೆಗಳನ್ನು ವೈದ್ಯಕೀಯ ಮಂಡಳಿಯ ಸಲಹೆ ಮೇರೆಗೆ ನಡೆಸಲಾಗುವುದು. **(Chest X-Ray) and any other medical tests should be conducted as per suggestion of Medical Board.**

f) **Musculoskeletal Deformities: Presence of any of the following deformities shall be a disqualification:**

- **Knock Knees**
- **Flat foot**
- **Bow legs**
- **Cubitus Valgus**
- **Cubitus Varus**

**Any defect observed during the tests mentioned above shall be a disqualification.**

ಇತರೆ ಯಾವುದೇ ದೈಹಿಕ ಅಥವಾ ಮಾನಸಿಕ ನ್ಯೂನತೆ ಅಂದರೆ ಅಶಕ್ತ ಅವಯವಗಳು ಅಥವಾ ಕರ್ತವ್ಯ ನಿರ್ವಹಿಸಲು ಹಾಜರಾಗುವ ಅಭ್ಯರ್ಥಿಗಳಿಗೆ ಯಾವುದೇ ಭತ್ಯೆಯನ್ನು ನೀಡಲಾಗುವುದಿಲ್ಲ.

**ಟಿಪ್ಪಣಿ: ಮೇಲಿನ ಎಲ್ಲಾ ಪರೀಕ್ಷೆಗಳನ್ನು ವೈದ್ಯಕೀಯ ಮಂಡಳಿಯು ನಡೆಸುತ್ತದೆ. ದೈಹಿಕವಾಗಿ ಅರ್ಹರೆಂದು ಪ್ರಮಾಣೀಕರಿಸಿದ ಅಭ್ಯರ್ಥಿಗಳು ಮಾತ್ರ ನೇಮಕಾತಿಗೆ ಅರ್ಹರಾಗೊಳ್ಳುವರು.** ಸಹಿಷ್ಣುತೆ ಪರೀಕ್ಷೆ, ಲಿಖಿತ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳಿಗೆ ಯಾವುದೇ ಭತ್ಯೆಯನ್ನು ನೀಡಲಾಗುವುದಿಲ್ಲ.

- **ನೇಮಕಾತಿ:**

**ವೈದ್ಯಕೀಯ ಮಂಡಳಿಯು ವೈದ್ಯಕೀಯ ಪರೀಕ್ಷೆಯನ್ನು ನಡೆಸಿ, ನೀಡುವ ವರದಿಯನ್ನಾಧರಿಸಿ ಆಯ್ಕೆ ಪ್ರಾಧಿಕಾರವು ಹುದ್ದೆಗಳನುಸಾರ ಆಯ್ಕೆ ಪಟ್ಟಿಯನ್ನು ತಯಾರಿಸಿ ನೇಮಕಾತಿ ಪ್ರಾಧಿಕಾರಕ್ಕೆ ಕಳುಹಿಸುವುದು ಮತ್ತು ಸದರಿ ಆಯ್ಕೆ ಪಟ್ಟಿಯನ್ನು ಪ್ರಕಟಿಸುವುದು. ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳು ಆಯ್ಕೆಗೆ ಎಲ್ಲಾ ರೀತಿಯಿಂದಲೂ ಅರ್ಹತೆಯನ್ನು ಹೊಂದಿರುವ ಬಗ್ಗೆ ನೇಮಕಾತಿ ಪ್ರಾಧಿಕಾರವು ದೃಢಪಡಿಸಿಕೊಂಡ ನಂತರ ಖಾಲಿ ಹುದ್ದೆಗಳನುಸಾರ ನೇಮಕಾತಿ ಮಾಡಿಕೊಳ್ಳತಕ್ಕದ್ದು.**

**X. ಅರ್ಹತಾ ಷರತ್ತುಗಳು–**

(ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

(ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

(ಇ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

(ಈ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

(ಉ) ಕೇಂದ್ರ ಅಥವಾ ಕರ್ನಾಟಕ ಅಥವಾ ಇತರೆ ರಾಜ್ಯದ ಲೋಕಸೇವಾ ಆಯೋಗ ಅಥವಾ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅಥವಾ ಯಾವುದೇ ವಿಶ್ವವಿದ್ಯಾನಿಲಯಗಳಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ಖಾಯಂ ಆಗಿ ಡಿಬಾರ್ ಆದ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

(ಊ) **ಯಾವುದೇ ನೈತಿಕ ಪರಿಭಾಷೆಗೆ ಶಿಕ್ಷೆಗೆ ಒಳಪಟ್ಟ ವ್ಯಕ್ತಿ ಅಥವಾ ಕೇಂದ್ರ ಅಥವಾ ಕರ್ನಾಟಕ ಅಥವಾ ಇತರೆ ರಾಜ್ಯದ ಲೋಕಸೇವಾ ಆಯೋಗ ಅಥವಾ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅಥವಾ ಯಾವುದೇ ವಿಶ್ವವಿದ್ಯಾನಿಲಯಗಳಿಂದ ನಡೆಸಲಾಗುವ ಪರೀಕ್ಷೆಗಳಿಂದ, ಅಥವಾ ನೇಮಕಾತಿಗಳಿಂದ ತಾತ್ಕಾಲಿಕವಾಗಿ ಡಿಬಾರ್ ಆದ ಅಥವಾ ಅನರ್ಹಗೊಂಡ ವ್ಯಕ್ತಿಯು ಸರ್ಕಾರವು ಎಲ್ಲಾ ಸಂದರ್ಭಗಳನ್ನು ಮರುಪರಿಶೀಲಿಸಿ ಅವರು ನೇಮಕಾತಿಗೆ ಅರ್ಹರೆಂದು ಪರಿಗಣಿಸುವವರೆಗೂ ನೇಮಕಾತಿಗೆ ಅರ್ಹರಾಗುವುದಿಲ್ಲ.**

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ **ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ** ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

**ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು :–**

ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು:–

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು:– ನಮೂನೆ 'ಡಿ'
ಆ) ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳು:– ನಮೂನೆ 'ಇ'
ಇ) ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು:– ನಮೂನೆ 'ಎಫ್'

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಸೀಲ್ದಾರ್‌ರವರಿಂದ ಅಂದರೆ ತಹಶೀಲ್ದಾರ್‌ರವರ ಸಹಿ ಮತ್ತು ಮೊಹರು ಅಥವಾ ಬಾರ್‌ಕೋಡ್, ಹಾಲೋಗ್ರಾಮ್ ಮತ್ತು ವಾಟರ್ ಮಾರ್ಕ್‌ನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ–1ರ ಮೀಸಲಾತಿ ಪ್ರಮಾಣ ಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿಪಡಿಸಿದ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. ಇತರೆ ಹಿಂದುಳಿದ ವರ್ಗಗಳ ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ ಮತ್ತು ಪ್ರವರ್ಗ–3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು 5 ವರ್ಷ ಚಾಲ್ತಿಯಲ್ಲಿರುತ್ತವೆ. ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು. ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ, ಅವರ ಅಭ್ಯರ್ಥಿತನವನ್ನು ಸಾಮಾನ್ಯ

ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಪ್ರತ್ಯೇಕವಾಗಿ ನೀಡಲಾಗಿದೆ. ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು. **ಉದ್ಯೋಗಕ್ಕಾಗಿ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಮಾತ್ರ ಪರಿಗಣಿಸಲಾಗುವುದು. (ಶಿಕ್ಷಣ ಅಥವಾ ಇತರೆ ಸೌಲಭ್ಯಗಳಿಗೆ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ)**

**(ಇತರೆ ಹಿಂದುಳಿದ ವರ್ಗಗಳಾದ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ವಿವಾಹಿತ ಮಹಿಳಾ ಅಭ್ಯರ್ಥಿಗಳು ಅವರ ಪತಿಯ ಹೆಸರಿನೊಂದಿಗೆ ಜಾರಿಯಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಗೊಳಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು ಅರ್ಜಿಯಲ್ಲಿ ಮೀಸಲಾತಿ ಕೋರತಕ್ಕದ್ದು.)**

### xi. ಮಾಜಿ ಸೈನಿಕ

ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 13 ಎಸ್‌ಆರ್‌ಆರ್ 92 ದಿನಾಂಕ 01-04-1992 ಮತ್ತು ಅಧಿಸೂಚನೆ ಸಂಖ್ಯೆ ಡಿಪಿಎಆರ್ 28 ಎಸ್‌ಆರ್‌ಆರ್ 95 ದಿನಾಂಕ 21-10-1995 ರನ್ವಯ ನೇರ ನೇಮಕಾತಿಗಳಲ್ಲಿ ಶೇಕಡ 10 ರಷ್ಟು ಹುದ್ದೆಗಳನ್ನು ಮಾಜಿ ಸೈನಿಕರಿಗೆ ಮೀಸಲಾತಿ ಕಲ್ಪಿಸಲಾಗಿದೆ. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿದ್ದಂತೆ ಮಾಜಿ ಸೈನಿಕರ ವಿವರಣೆ ಕೆಳಕಂಡಂತಿದೆ:

(1) ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು

(2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

(3) ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವವರು

**ಅಥವಾ**

ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆಯಾದವರು

**ಅಥವಾ**

ಇ) ಸ್ವಂತಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆಹೊಂದಿದ ವ್ಯಕ್ತಿಗಳು.

**ಅಥವಾ**

ಈ) ತಮ್ಮ ಸ್ವಂತಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿಗಳು ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿಗಳು ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:-

i) ನಿರಂತರ ಸೇವೆ ಸಲ್ಲಿಸಿದ ನಿವೃತ್ತಿ ಹೊಂದಿದ ಪಿಂಚಣಿದಾರರು.

ii) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿಗಳು.

iii) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು ಅರ್ಹರಾಗಿರುವುದಿಲ್ಲ.

**ವಿವರಣೆ:**-ಕೇಂದ್ರ ಸಶಸ್ತ್ರ ದಳದಲ್ಲಿ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ನಿರ್ದಿಷ್ಟ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರಿಕ ಸೇವೆ ಅಥವಾ ಹುದ್ದೆಗೆ ನೇಮಕ ಹೊಂದುವಂತಿಲ್ಲ. ಇಂತಹವರು ಅರ್ಜಿ ಸಲ್ಲಿಸುವ ಮುನ್ನ ಸೇನೆಯಿಂದ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲಿಸಬೇಕು. ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು /ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಕೊಲ್ಲಲ್ಪಟ್ಟಿರುವ / ಶಾಶ್ವತವಾಗಿ ಅಂಗವಿಕಲರಾದ ಬಗ್ಗೆ ಪ್ರಮಾಣಪತ್ರವನ್ನು ಮೂಲ ದಾಖಲಾತಿ ಪರಿಶೀಲನೆಗೆ ತಪ್ಪದೇ ಹಾಜರುಪಡಿಸಬೇಕು. ಈ ಪ್ರಮಾಣ ಪತ್ರದ ನಮೂನೆಯನ್ನು ಪ್ರತ್ಯೇಕವಾಗಿ ನೀಡಲಾಗಿದೆ).

**xii. ಗ್ರಾಮೀಣ ಅಭ್ಯರ್ಥಿ:-**

ಸರ್ಕಾರಿ ಅಧಿಸೂಚನೆ ಸಂಖ್ಯೆ: 59 ಶಾಸನ 2000, ದಿನಾಂಕ 06-01-2001 ರನ್ವಯ ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೆನೆನಿ 2001 ದಿನಾಂಕ 13-02-2001 ರನ್ವಯ ನಮೂನೆ-2ನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು.

ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಅರ್ಜಿಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಅಭ್ಯರ್ಥಿಗಳ ನೇರ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಸಹ ಅನರ್ಹರಾಗುತ್ತಾರೆ.ಈ ಪ್ರಮಾಣಪತ್ರಗಳ ನಮೂನೆಗಳನ್ನು ಪ್ರತ್ಯೇಕವಾಗಿ ನೀಡಲಾಗಿದೆ).

**xiii . ಕನ್ನಡ ಮಾಧ್ಯಮ ಅಭ್ಯರ್ಥಿ**

ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೆನೆನಿ 2001 ದಿನಾಂಕ 24-10-2002 ರನ್ವಯಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿಅಂತಹ ಅಭ್ಯರ್ಥಿಗಳ ಕ.ಮಾ.ಅ. ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಪ್ರತ್ಯೇಕವಾಗಿ ತೋರಿಸಲಾಗಿದೆ).

**xiv. ಯೋಜನೆಗಳಿಂದ ನಿರ್ವಸಿತರಾದ ಅಭ್ಯರ್ಥಿಗಳು:**

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 23 ಸೆನೆನಿ 99, ದಿನಾಂಕ 23.11.2000 ಮತ್ತು ತಿದ್ದುಪಡಿ ಆದೇಶ ಸಂಖ್ಯೆ ಸಿಆಸುಇ 252 ಸೆನೆನಿ 2020 (ಭಾಗ-1), ದಿನಾಂಕ 07.07.2021. ರನ್ವಯ ಯೋಜನೆಗಳಿಂದ ನಿರ್ವಸಿತರಾದ (ಆದರೆ ಈ ನಿಯಮಗಳು ಜಾರಿಯಾಗುವ 25 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಾತಿ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

**ಟಿಪ್ಪಣಿ: ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 02 ಸೆಹಿಮ 2023, ದಿನಾಂಕ: 08.03.2023 ರನ್ವಯ ಸಮತಳ ಮೀಸಲಾತಿಯ ಹುದ್ದೆಗಳಲ್ಲಿ ಮಾಜಿ ಸೈನಿಕರು ಮತು ಯೋಜನೆಗಳಿಂದ ನಿರ್ವಸಿತರಾದ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅದೇ ಪ್ರವರ್ಗದ ಇತರೆ ಅಭ್ಯರ್ಥಿಗಳಿಂದ ತುಂಬಲಾಗುವುದು.**

### xv. ಅನುಚ್ಛೇಧ 371 (ಜೆ) ರಂತೆ ಕಲ್ಯಾಣ–ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ

ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಅನುಬಂಧ–ಎ ಯಲ್ಲಿರುವ ನಮೂನೆಯಲ್ಲಿಯೇ ಅರ್ಹತಾ ಪ್ರಮಾಣಪತ್ರವನ್ನು ಸಕ್ಷಮ ಪ್ರಾಧಿಕಾರವಾದ ಸಂಬಂಧಪಟ್ಟ ಉಪ ವಿಭಾಗದ ಸಹಾಯಕ ಆಯುಕ್ತರಿಂದ ಪಡೆದಿಟ್ಟುಕೊಳ್ಳತಕ್ಕದ್ದು. ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಸದರಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಸದರಿ ಮೀಸಲಾತಿಯಡಿ ಪರಿಗಣಿಸಲಾಗುವುದಿಲ್ಲ. ಈ ಪ್ರಮಾಣ ಪತ್ರದ ನಮೂನೆಯನ್ನು ಪ್ರತ್ಯೇಕವಾಗಿ ನೀಡಲಾಗಿದೆ. ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಅರ್ಹತಾ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು.

### xvi. ಪ್ರಾಧಿಕಾರದೊಡನೆ ಪತ್ರ ವ್ಯವಹಾರ:

ಪ್ರಾಧಿಕಾರವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಆದುದರಿಂದ, ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವಾಗ ಜಾಗರೂಕತೆಯಿಂದ ಭರ್ತಿ ಮಾಡತಕ್ಕದ್ದು.ಅಭ್ಯರ್ಥಿಗಳು ಪ್ರಾಧಿಕಾರದೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯು ಈ ಕೆಳಕಂಡ ಮಾಹಿತಿಗಳನ್ನು ಒಳಗೊಂಡಿರಬೇಕು.

(i) ಅರ್ಜಿ ಸಂಖ್ಯೆ &ಹುದ್ದೆಯ / ವಿಷಯದ ಹೆಸರು

(ii) ಅಭ್ಯರ್ಥಿಯ ಪೂರ್ಣ ಹೆಸರು (ಬಿಡಿ ಅಕ್ಷರಗಳಲ್ಲಿ)

(iii) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

- ಪ್ರಾಧಿಕಾರದ ಅಧಿಕೃತ 'X' ಖಾತೆ @KEA_KARNATAKA ದಲ್ಲಿ ಹಾಗೂ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಲಭ್ಯವಿರುವ ನೇಮಕಾತಿ ಸಂಬಂಧದ ಎಲ್ಲಾ ಮಾಹಿತಿಗಳನ್ನು ಪಡೆಯಬಹುದಾಗಿರುತ್ತದೆ.

### xvii. ಪ್ರಮುಖವಾದ ಸೂಚನೆಗಳು:–

ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು (Recent photograph in JPEG format, with a file size between 50KB to 200KB)ಹಾಗೂ ಕಪ್ಪು ಶಾಹಿಯ ಸ್ಕೆಚ್/ಮಾರ್ಕರ್ ಪೆನ್‌ಲ್ಲಿ ಸಹಿಯನ್ನು (Signature in JPEG format, with a file size between 50KB to 70KB) ಅಳತೆಯಲ್ಲಿ ಸ್ಕ್ಯಾನ್ ಮಾಡಿ ಅರ್ಜಿಗೆ UPLOAD ಮಾಡಬೇಕು. ಭಾವಚಿತ್ರ ಹಾಗೂ ಸಹಿಯನ್ನು UPLOAD ಮಾಡದ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ ಆನ್‌ಲೈನ್ ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಗಳಿಂದ ಪಡೆದಿಟ್ಟುಕೊಂಡು ಮೂಲ ದಾಖಲಾತಿಯ ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ ಅದೇ ಮೀಸಲಾತಿ ಪ್ರಮಾಣಪತ್ರದ ಹಾಗೂ ಇತರೇ ಪ್ರಮಾಣ ಪತ್ರಗಳ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. ಹೈದ್ರಾಬಾದ್–ಕರ್ನಾಟಕ ಮೀಸಲಾತಿಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಹೊರತುಪಡಿಸಿ ಇತರೆ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರಬೇಕು, ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ ಹಾಗೆಯೇ ಯಾವುದೇ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿರುವ ನಮೂನೆಗಳಲ್ಲಿರದಿದ್ದಲ್ಲಿ ಮತ್ತು ತಪ್ಪಿದ್ದಲ್ಲಿ ಸದರಿ ಮೀಸಲಾತಿಯನ್ನು ತಿರಸ್ಕರಿಸಲಾಗುವುದು/ ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

**ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಪಡೆದಿಟ್ಟುಕೊಳ್ಳಬೇಕಾದ ಪ್ರಮಾಣಪತ್ರಗಳು.**

1) ಆಧಾರ್‌ಕಾರ್ಡ್
2) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದ ಆಯಾ ಹುದ್ದೆಗಳಿಗೆ ನಿಗದಿಪಡಿಸಲಾದ/ ವಿದ್ಯಾರ್ಹತೆಯ ಎಲ್ಲಾ ವಿಷಯಗಳ/ ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಹಾಗೂ ಘಟಿಕೋತ್ಸವದ ಪ್ರಮಾಣ ಪತ್ರ /ಪಿಡಿಸಿ.
3) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ ಶಾಲೆಯ ವರ್ಗಾವಣೆ ಪ್ರಮಾಣ ಪತ್ರ/ ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.
4) ಸೈನಿಕ ಸೇವೆಯಿಂದ ಬಿಡುಗಡೆಯಾದ ಪ್ರಮಾಣ ಪತ್ರ ಮತ್ತು ಪಿಂಚಣಿ /ಗ್ರಾಚ್ಯುಟಿ ಪಡೆಯುತ್ತಿರುವ ಪ್ರಮಾಣ ಪತ್ರ/ ಮಾಜಿ ಸೈನಿಕ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಮೃತಪಟ್ಟಿದ್ದಲ್ಲಿ ಅಥವಾ ಶಾಶ್ವತವಾಗಿ ಅಂಗವಿಕಲರಾದ (Permanently Disabled) ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
5) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ ಮತ್ತು ಪ್ರವರ್ಗ–3ಬಿ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ)

6) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2ರಲ್ಲಿ (ಗ್ರಾಮೀಣ ಮೀಸಲಾತಿ ಕೋರಿದ ಸಾಮಾನ್ಯ ಅರ್ಹತೆ ಅಭ್ಯರ್ಥಿಗಳು ನಮೂನೆ-1 ರಲ್ಲಿ ಮಾತ್ರ ಹಾಗೂ ಗ್ರಾಮೀಣ ಮೀಸಲಾತಿ ಕೋರಿದ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಪ್ರವರ್ಗ-1/ ಪ್ರವರ್ಗ-2ಎ/ ಪ್ರವರ್ಗ-2ಬಿ/ ಪ್ರವರ್ಗ-3ಎ/ ಪ್ರವರ್ಗ-3ಬಿ ಅಭ್ಯರ್ಥಿಗಳು ನಮೂನೆ-2 ರಲ್ಲಿ ಮಾತ್ರ)

7) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ), ವಿಶೇಷ ಚೇತನ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

8) ಸೇವೆಯಲ್ಲಿರುವ ಅಭ್ಯರ್ಥಿಗಳು ಆಯ್ಕೆಯಾದಲ್ಲಿ ನಿರಾಕ್ಷೇಪಣ ಪ್ರಮಾಣ ಪತ್ರಗಳನ್ನು ಪಡೆದು ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು. (ನಿಗದಿಪಡಿಸಿದ್ದಲ್ಲಿ)

9) ಕಲ್ಯಾಣ-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳು ಮೀಸಲಾತಿಗೆ ಸಂಬಂಧಿಸಿದ ಪ್ರಮಾಣ ಪತ್ರ (ಮೀಸಲಾತಿ ಪ್ರಮಾಣ ಪತ್ರವನ್ನು ಕೊನೆಯ ದಿನಾಂಕದೊಳಗೆ ಪಡೆಯದೇ ಮೂಲ ದಾಖಲೆ ಪರಿಶೀಲನೆ ಸಮಯದಲ್ಲಿ ಸಲ್ಲಿಸಿದ್ದರೂ ಪರಿಗಣಿಸಲಾಗುವುದು).

**xviii. ವಿಶೇಷ ಸೂಚನೆಗಳು:-**

(1) ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ **ಒಂದು ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಳ್ಳಬೇಕು ಮತ್ತು ಶುಲ್ಕ ಪಾವತಿಯ ಚಲನ್ ಅನ್ನು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಕಾಯ್ದಿಟ್ಟುಕೊಳ್ಳತಕ್ಕದ್ದು. ನಂತರ ಯಾವುದೇ ಹಂತದಲ್ಲಿ ಪ್ರಾಧಿಕಾರಕ್ಕೆ ಮನವಿಯನ್ನು ಸಲ್ಲಿಸಿದ್ದಲ್ಲಿ ಅರ್ಜಿ ಪ್ರತಿಯನ್ನು ನೀಡಲಾಗುವುದಿಲ್ಲ.**

(2) **ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸಲಾಗುವ ಅರ್ಜಿಯಲ್ಲಿ ಯಾವುದೇ ಹಂತದಲ್ಲಿ ಅಥವಾ ಯಾವುದೇ ರೀತಿಯ ತಿದ್ದುಪಡಿಗಳನ್ನು ಮಾಡುವಂತೆ ಕೋರಿದ್ದಲ್ಲಿ, ಸದರಿ ಮನವಿಯನ್ನು ಪುರಸ್ಕರಿಸಲಾಗುವುದಿಲ್ಲ.**

(3) ಈಗಾಗಲೇ ಸೇವೆಯಲ್ಲಿರುವ / ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಆಯ್ಕೆಯಾದ ಪಕ್ಷದಲ್ಲಿ ಅವರುಗಳ ನೇಮಕಾತಿ ಪ್ರಾಧಿಕಾರಗಳಿಂದ ನಿಗದಿತ ನಮೂನೆಯಲ್ಲಿ ನಿರಾಕ್ಷೇಪಣಾ ಪ್ರಮಾಣ ಪತ್ರ/ ಅನುಮತಿಯನ್ನು / ಸೇವಾ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡು ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು. ಹಾಗೂ ಸೇವಾ ವಿವರಗಳನ್ನು ಅರ್ಜಿಯಲ್ಲಿ ನಮೂದಿಸಬೇಕು. ಸುಳ್ಳು ಮಾಹಿತಿಯನ್ನು ನಮೂದಿಸಿದ್ದಲ್ಲಿ ಅನರ್ಹಗೊಳಿಸಲಾಗುವುದು.

(4) ಶುಲ್ಕ ಪಾವತಿಸಲು ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಕೊನೆಯ ದಿನಾಂಕವಾಗುವುದು.

(5) ಅಭ್ಯರ್ಥಿಯು ಅರ್ಜಿಯಲ್ಲಿ ನೀಡುವ ಮೊಬೈಲ್ ಸಂಖ್ಯೆ/ಇ-ಮೇಲ್ ಅಂತಿಮವಾಗಿದ್ದು, ಎಲ್ಲಾ ಮಾಹಿತಿಗಳನ್ನು ಅದೇ ಮೊಬೈಲ್ ಸಂಖ್ಯೆ/ಇ-ಮೇಲ್ ಗಳಿಗೆ ಕಳುಹಿಸಿಕೊಡಲಾಗುವುದು. ನಂತರದಲ್ಲಿ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

(6) ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯ ಪರೀಕ್ಷೆಗೆ ಹಾಜರಾಗಿ, ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಫಲಿತಾಂಶ ಪ್ರಕಟವಾಗದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಂತಿಲ್ಲ.

(7) ಅಭ್ಯರ್ಥಿಯು ಸಲ್ಲಿಸುವ ವಿದ್ಯಾರ್ಹತೆಯ ಪ್ರಮಾಣ ಪತ್ರ/ಇನ್ನಿತರೆ ಮೀಸಲಾತಿ ಪ್ರಮಾಣ ಪತ್ರಗಳಿಗೆ ಸಂಬಂಧಿಸಿದಂತೆ ಯಾವುದೇ ಗೊಂದಲಗಳು ಇದ್ದಲ್ಲಿ ಸಂಬಂಧಪಟ್ಟ ಪ್ರಾಧಿಕಾರಸ್ಥರು ಗೊಂದಲ ನಿವಾರಣೆ ಮಾಡುವವರೆಗೆ ಅವರ ಆಯ್ಕೆಯನ್ನು ಅಂತಿಮಗೊಳಿಸಲಾಗುವುದಿಲ್ಲ.

(8) ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡುವ ಮೊದಲು ವೆಬ್‌ಸೈಟಿನಲ್ಲಿ ನೀಡಿರುವ ವಿವರವಾದ ಪ್ರಕಟಣೆಯನ್ನು/ಸೂಚನೆಗಳನ್ನು/ವಿಧಾನವನ್ನು ತಿಳಿದುಕೊಳ್ಳುವುದು ಹಾಗೂ ಅರ್ಜಿಯಲ್ಲಿ ಘೋಷಿಸಿರುವ ಮಾಹಿತಿಗಳು ಅಂತಿಮವಾಗಿದ್ದು, ಹೆಚ್ಚಿನ ಮಾಹಿತಿ / ದಾಖಲೆಗಳ ಸಲ್ಲಿಕೆಗೆ ಅವಕಾಶವಿರುವುದಿಲ್ಲ.

(9) ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಅರ್ಜಿಯು ತಿರಸ್ಕೃತವಾದಲ್ಲಿ ಅಥವಾ ಯಾವುದೇ ಸೌಲಭ್ಯದಿಂದ ಅವರು ವಂಚಿತರಾದಲ್ಲಿ ಅದಕ್ಕೆ ಅಭ್ಯರ್ಥಿಗಳೇ ನೇರ ಜವಾಬ್ದಾರರು.

(10)ಆಯ್ಕೆಗೆ ಸಂಬಂಧಿಸಿದಂತೆ ಅಭ್ಯರ್ಥಿಯು ಯಾವುದೇ ವಿಧವಾದ ಅಪಪ್ರಚಾರ ಮಾಡುವ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಲ್ಲಿ ಯಾವುದೇ ಮುನ್ಸೂಚನೆ ನೀಡದೆ ಅವರನ್ನು ಆಯ್ಕೆಗೆ ಅನರ್ಹಗೊಳಿಸಲಾಗುವುದು.

(11) **ಲಿಖಿತ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದವರು ಕೈಗೊಂಡು, ಉತ್ತರ ಪ್ರತಿಗಳನ್ನು ಮೌಲ್ಯಮಾಪನ ಮಾಡಿ ನೀಡುವ ಅಂಕಪಟ್ಟಿಯನ್ನು ಪೊಲೀಸ್ ಇಲಾಖೆಯು ಹಾಗೂ ನೇಮಕಾತಿ ವಿಭಾಗವು ಪರಿಗಣಿಸಿ ನಂತರದ ಪ್ರಕ್ರಿಯೆಗಳನ್ನು ನಡೆಸಲಾಗುವುದು.**

**xiv. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು:** ಮಾಹಿತಿ ಕೇಂದ್ರ-**080-23460460**.(10.00AMto6.00PM)
(ಅಧಿಸೂಚನೆ ಲಿಖಿತ ಪರೀಕ್ಷೆ ಹಾಗೂ ಅಂಕಪಟ್ಟಿಯ ಕುರಿತು ಮಾತ್ರ ಪ್ರಾಧಿಕಾರಕ್ಕೆ ಕರೆ ಮಾಡಬಹುದಾಗಿರುತ್ತದೆ.)

**xx.** ದುರ್ನಡತೆ:- **ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂದು, ತಪ್ಪಿತಸ್ಥನೆಂದು ಕಂಡುಬಂದಲ್ಲಿ ಅಥವಾ ಒಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗಳಿಗೆ ಹಾಜರಾಗಿರುವ ವಿಷಯವನ್ನು ಮರೆಮಾಚಿ ಮತ್ತೊಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗೆ ಹಾಜರಾದರೆ ಹಾಗೂ ನೇಮಕಾತಿ ಸಮಿತಿಯಿಂದ ನೀಡಲಾದ ಯಾವುದೇ ಸೂಚನೆಗಳನ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ನೇಮಕಾತಿ ಸಮಿತಿ ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.**

**(ಡಾ: ಚೇತನ್ ಸಿಂಗ್ ರಾಠೋರ್, ಐ.ಪಿ.ಎಸ್)**
ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, (ಸಿ.ಐ.ಡಿ)
ಡಿ.ಐ.ಜಿ.ಪಿ., ನೇಮಕಾತಿ, (ಪ್ರಭಾರ) ಹಾಗೂ ಸಮನ್ವಯಾಧಿಕಾರಿ,
ಸ್ಪೆ.ಆರ್.ಪಿ.ಸಿ (ಕೆ.ಎಸ್.ಆರ್.ಪಿ, ಐ.ಆರ್.ಬಿ & ಕೆ.ಎಸ್.ಐ.ಎಸ್.ಎಫ್) ನೇಮಕಾತಿ ಸಮಿತಿ,
ಕಾರ್ಲ್‌ಟನ್ ಭವನ, ಅರಮನೆ ರಸ್ತೆ, ಬೆಂಗಳೂರು – 560001.

ಗಮನಿಸಿ:

1. ಕೇವಲ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ್ದಲ್ಲಿ, ಲಿಖಿತ ಪರೀಕ್ಷೆಗೆ ಹಾಜರಾದಲ್ಲಿ ಮತ್ತು ಲಿಖಿತ ಪರೀಕ್ಷೆಯಲ್ಲಿ ಅರ್ಹತೆ ಪಡೆದ ಮಾತ್ರಕ್ಕೆ ಅಭ್ಯರ್ಥಿಗಳಿಗೆ ಈ ಮೇಲಿನ ವಿವಿಧ ಹುದ್ದೆಗಳ ನೇಮಕಾತಿಯಲ್ಲಿ ಯಾವುದೇ ಹಕ್ಕನ್ನು ನೀಡುವುದಿಲ್ಲ, ನೇಮಕಾತಿಯು ಸರ್ಕಾರವು ನಿಗದಿಪಡಿಸುವ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ.

2. ಮೇಲಿನ ಯಾವುದೇ ನಿಯಮಗಳು / ಕಾರ್ಯವಿಧಾನಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸ ಅಥವಾ ಅಸ್ಪಷ್ಟತೆ ಕಂಡು ಬಂದಲ್ಲಿ, ಸಂಬಂಧಪಟ್ಟ ಸಂಸ್ಥೆಗಳ ಪದವೃಂದ ಮತ್ತು ನೇಮಕಾತಿ ನಿಯಮಗಳು ಅನ್ವಯವಾಗುತ್ತವೆ.

ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:–

| | | | |
|---|---|---|---|
| ಸಾ.ಅ | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ<br>(ಪ್ರ–ಎ)<br>(ಪ್ರ–ಬಿ)<br>(ಪ್ರ–ಸಿ) | ಪರಿಶಿಷ್ಟ ಜಾತಿ<br>(ಪ್ರವರ್ಗ–ಎ)<br>(ಪ್ರವರ್ಗ–ಬಿ)<br>(ಪ್ರವರ್ಗ–ಸಿ) | SC<br>(Cat-A)<br>(Cat -B)<br>(Cat -C) | Scheduled Caste<br>(Category -A)<br>(Category -B)<br>(Category -C) |
| ಪ.ಪಂ | ಪರಿಶಿಷ್ಟ ಪಂಗಡ | ST | Scheduled Tribe |
| ಪ್ರ–1 | ಪ್ರವರ್ಗ–1 | Cat–1 | Category–1 |
| 2ಎ | ಪ್ರವರ್ಗ–2ಎ | 2A | Category – 2A |
| 2ಬಿ | ಪ್ರವರ್ಗ–2ಬಿ | 2B | Category – 2B |
| 3ಎ | ಪ್ರವರ್ಗ–3ಎ | 3A | Category – 3A |
| 3ಬಿ | ಪ್ರವರ್ಗ–3ಬಿ | 3B | Category – 3B |
| ಮಾ.ಸೈ | ಮಾಜಿ ಸೈನಿಕ | XMP | Ex- Service Men<br>(Ex-Military person) |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಯೋ.ಅ | ಯೋಜನಾ ನಿರಾಶ್ರಿತ ಅಭ್ಯರ್ಥಿ | PDP | Project Displaced Person |
| ಮ.ಅ | ಮಹಿಳಾ ಅಭ್ಯರ್ಥಿ | Wom | Woman Candidate |

**ಸೂಚನೆ: ಈ ಅಧಿಸೂಚನೆಯಲ್ಲಿ ತಿಳಿಸಿರುವ ಹುದ್ದೆಗಳ ಸಂಖ್ಯೆ & ವರ್ಗೀಕರಣಕ್ಕೆ ಸಂಬಂಧಿಸಿದಂತೆ, ನೇಮಕಾತಿ ಪ್ರಾಧಿಕಾರವು ಪರೀಕ್ಷೆ ದಿನಾಂಕಕ್ಕೆ ಮೊದಲು ಬದಲಾವಣೆ ಬಯಸಿದಲ್ಲಿ ಅಷ್ಟಕ್ಕೆ ಸೀಮಿತವಾಗಿ ಮಾತ್ರ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ತಿದ್ದುಪಡಿ ಅಧಿಸೂಚನೆ ಹೊರಡಿಸಲಾಗುವುದು.**

ಕರ್ನಾಟಕ ಸರ್ಕಾರ
**ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆ**
ಬೆಂಗಳೂರು

**ಸಂಖ್ಯೆ:03/ನೇಮಕಾತಿ-3(ಬಿ)/ಆರ್.ಪಿ.ಸಿ/2026-27**

ಡೈರೆಕ್ಟರ್ ಜನರಲ್ ಆಫ್ ಪೊಲೀಸ್
ನೇಮಕಾತಿ ರವರ ಕಛೇರಿ,
ಕಾರ್ಲಟನ್ ಭವನ, ಅರಮನೆ ರಸ್ತೆ,
ಬೆಂಗಳೂರು, **ದಿನಾಂಕ: 10.07.2026**

# ಅಧಿಸೂಚನೆ

**ವಿಷಯ:-** ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಮಿಕ್ಕುಳಿದ ವೃಂದದಲ್ಲಿ ಖಾಲಿ ಇರುವ ವಿಶೇಷ ಮೀಸಲು ಪೊಲೀಸ್ ಕಾನ್‌ಸ್ಟೇಬಲ್ (ಕೆ.ಎಸ್.ಆರ್.ಪಿ) (ಪುರುಷ ಮತ್ತು ಮಹಿಳಾ)-1455 ಹುದ್ದೆಗಳ ನೇರ ನೇಮಕಾತಿ ಕುರಿತು

*****

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ಮಿಕ್ಕುಳಿದ ವೃಂದದಲ್ಲಿ ಖಾಲಿ ಇರುವ ವಿಶೇಷ ಮೀಸಲು ಪೊಲೀಸ್ ಕಾನ್‌ಸ್ಟೇಬಲ್ (ಕೆ.ಎಸ್.ಆರ್.ಪಿ) ಹುದ್ದೆಗಳಿಗೆ ನೇಮಕಾತಿ ಮಾಡುವ ಸಂಬಂಧ ಈ ಅಧಿಸೂಚನೆ ಹೊರಡಿಸಿದೆ. ಈ ಹುದ್ದೆಗಳ ನೇಮಕಾತಿ ಲಿಖಿತ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದವರು ಕೈಗೊಳ್ಳಲಾಗುವುದು, ಕಾರಣ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಹ ಅಭ್ಯರ್ಥಿಗಳು ಸದರಿ ಹುದ್ದೆಗಳ ದೇಹದಾರ್ಢ್ಯತೆ ಹಾಗೂ ಇತರೆ ನೇಮಕಾತಿಗೆ ಅರ್ಹತೆ ಪಡೆಯಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಾಜರಾಗಬೇಕು.

ಕರ್ನಾಟಕ ರಾಜ್ಯದ, ಪೊಲೀಸ್ ಇಲಾಖೆಯಲ್ಲಿ ವಿಶೇಷ ಮೀಸಲು ಪೊಲೀಸ್ ಕಾನ್‌ಸ್ಟೇಬಲ್ (ಕೆ.ಎಸ್.ಆರ್.ಪಿ) (ಪುರುಷ ಮತ್ತು ಮಹಿಳಾ) ಮಿಕ್ಕುಳಿದ ವೃಂದದ ಹುದ್ದೆಗಳ ನೇರ ನೇಮಕಾತಿಗಾಗಿ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ (ನೇಮಕಾತಿ ಮತ್ತು ಸೇವಾಷರತ್ತುಗಳು) ನಿಯಮಗಳು, 2025 ಮತ್ತು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013, ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು, 2013 ಹಾಗೂ ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 77 ಹೈಕಕೋ 2025, ದಿನಾಂಕ: 03.06.2025, ಮತ್ತು **ಸರ್ಕಾರದ ಆದೇಶ ಸಂಖ್ಯೆ ಹೆಚ್‌ಡಿ 44 ಪಿಪಿಎ 2026 ದಿನಾಂಕ:13.04.2026** ರಲ್ಲಿ **ಪೊಲೀಸ್ ಕಾನ್‌ಸ್ಟೇಬಲ್ ವೃಂದದ ಹುದ್ದೆಗಳ ನೇರ ನೇಮಕಾತಿಯಲ್ಲಿನ ವಿಧಾನ ಮತ್ತು ಅರ್ಹತೆಯನ್ನು ಪರಿಷ್ಕರಿಸಿದನ್ವಯ** ಮತ್ತು ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಾವಳಿ 1977 ಮತ್ತು ಕಾಲಕಾಲಕ್ಕೆ ಆಗಿರುವ ಅದರ ತಿದ್ದುಪಡಿ ನಿಯಮಗಳನ್ವಯ ಹಾಗೂ ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ)(ಸಾಮಾನ್ಯ) ನಿಯಮಗಳು, 2021 ಮತ್ತು ತಿದ್ದುಪಡಿ ನಿಯಮ 2025 ಹಾಗೂ **ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2026, ದಿನಾಂಕ:13.05.2026 ರನ್ವಯ ಸದರಿ ಸರ್ಕಾರ ಆದೇಶಕ್ಕೆ ಒಳಪಟ್ಟಿರುವಂತೆ ತಿದ್ದುಪಡಿ ಆದೇಶ ದಿನಾಂಕ: 18.05.2026 ಸರ್ಕಾರದ ನಡವಳಿ ದಿನಾಂಕ: 22.05.2026 ಹಾಗೂ ಸರ್ಕಾರದ ಸೇರ್ಪಡೆ ಆದೇಶ ದಿನಾಂಕ: 25.05.2026 ಗಳನ್ವಯ** ತಿಳಿಯಪಡಿಸಿದ ನಿಯಮಗಳಿಗೆ ಕಾಲಕಾಲಕ್ಕೆ ಆಗುವ ತಿದ್ದುಪಡಿಗಳ ಅನುಸಾರ ಈ ಅಧಿಸೂಚನೆಯನ್ನು ಪ್ರಕಟಿಸುತ್ತ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಪೊಲೀಸ್ ಇಲಾಖೆಯಲ್ಲಿ ವಿಶೇಷ ಮೀಸಲು ಪೊಲೀಸ್ ಕಾನ್‌ಸ್ಟೇಬಲ್ (ಕೆ.ಎಸ್.ಆರ್.ಪಿ) ಮಿಕ್ಕುಳಿದ ವೃಂದದಲ್ಲಿ ಖಾಲಿ ಇರುವ ಹುದ್ದೆಗಳ ವಿವರ**

| ಕ್ರ ಸಂ. | ಹುದ್ದೆಯ ವಿವರ | ವೇತನ ಶ್ರೇಣಿ (ರೂ./-) | ಹುದ್ದೆಗಳ ಸಂಖ್ಯೆ | |
|---|---|---|---|---|
| | | | ಪುರುಷ | ಮಹಿಳಾ |
| 1 | ವಿಶೇಷ ಮೀಸಲು ಪೊಲೀಸ್ ಕಾನ್‌ಸ್ಟೇಬಲ್ (ಕೆ.ಎಸ್.ಆರ್.ಪಿ) | 37,500 – 76100/- | 1382 | 73 |
| | ಒಟ್ಟು ಹುದ್ದೆಗಳ ಸಂಖ್ಯೆ | | 1455 | |

(ಗಮನಿಸಿ: ಹುದ್ದೆವಾರು ಮತ್ತು ಪ್ರವರ್ಗವಾರು ವಿವರಗಳನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ.)

## ಶೈಕ್ಷಣಿಕ ವಿದ್ಯಾರ್ಹತೆ

| ಕ್ರಮ ಸಂಖ್ಯೆ | ವಿಶೇಷ ಮೀಸಲು ಪೊಲೀಸ್ ಕಾನ್‌ಸ್ಟೇಬಲ್ (ಕೆ.ಎಸ್.ಆರ್.ಪಿ) ಹುದ್ದೆಯ ವಿದ್ಯಾರ್ಹತೆ |
|---|---|
| 01 | Must have passed 2nd PUC or posses an equivalent qualification. |

- ಸರ್ಕಾರದ ಸುತ್ತೋಲೆ ಸಂಖ್ಯೆ : ಸಿಆಸುಇ 81 ಸೇವನೆ 2017, ದಿನಾಂಕ:27.02.2018 ರಲ್ಲಿ ಕರ್ನಾಟಕ ಪದವಿ ಪೂರ್ವ ಶಿಕ್ಷಣ ಮಂಡಳಿಯು ನಡೆಸುವ ಪಿಯುಸಿ ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳು ಈ ಕೆಳಕಂಡಂತಿರುತ್ತದೆ.
    1) ಸಿ.ಬಿ.ಎಸ್.ಇ ಮತ್ತು ಐ.ಎಸ್.ಸಿ ಮಂಡಳಿಯು ನಡೆಸುವ ಕ್ಲಾಸ್ 12 ಪರೀಕ್ಷೆ.
    2) ಇತರೆ ರಾಜ್ಯ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 12 ಪರೀಕ್ಷೆ.
    3) ನ್ಯಾಷನಲ್ ಇನ್ಸ್‌ಸ್ಟಿಟೂಟ್ ಆಫ್ ಓಪನ್ ಸ್ಕೂಲಿಂಗ್ (ಎನ್.ಐ.ಓ.ಎಸ್) ವತಿಯಿಂದ ನಡೆಸುವ ಉನ್ನತ ಪ್ರೌಢ ಶಿಕ್ಷಣ ಕೋರ್ಸ್/ಹೆಚ್.ಎಸ್.ಸಿ.
    4) ಎರಡು ವರ್ಷಗಳ ಐ.ಟಿ.ಐ ಕೋರ್ಸ್ ಅಭ್ಯರ್ಥಿಗಳು ಎನ್.ಐ.ಓ.ಎಸ್‌ನ ವತಿಯಿಂದ ನಡೆಸುವ ಒಂದು ಭಾಷಾ ಕೋರ್ಸ್ ಮತ್ತು ಒಂದು ಶೈಕ್ಷಣಿಕ ವಿಷಯದಲ್ಲಿ (ದೂರಕಲಿಕೆ ಮಾದರಿಯಲ್ಲಿ) ಅಥವಾ ಪದವಿಪೂರ್ವ ಮಂಡಳಿಯು ನಡೆಸುವ ಪರೀಕ್ಷೆಯಲ್ಲಿ ಒಂದು ಭಾಷೆ ಮತ್ತು ಒಂದು ವಿಷಯದಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಪಿ.ಯು.ಸಿಗೆ ತತ್ಸಮಾನ.
- ಸರ್ಕಾರದ ಆದೇಶ ಸಂಖ್ಯೆ: ಇಡಿ 19 ಟಿವಿಇ 2019, ದಿನಾಂಕ: 06.08.2021 ರಲ್ಲಿ ಕರ್ನಾಟಕ ರಾಜ್ಯ ವೃತ್ತಿ ಶಿಕ್ಷಣ ಕೋರ್ಸುಗಳು (ಜೆ.ಓ.ಸಿ) ಪಿ.ಯು.ಸಿಗೆ ತತ್ಸಮಾನವೆಂದು ಈ ಕೆಳಕಂಡ ಅಂಶಗಳಿಗೆ ಮಾತ್ರ ಪರಿಗಣಿಸಿ, ಆದೇಶಿಸಿದೆ.
    1. ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡುವ ಹಾಗೂ ಈಗಾಗಲೇ ನೇಮಕಾತಿ ಹೊಂದಿ ಆದೇಶ ನಿರೀಕ್ಷೆಯಲ್ಲಿರುವ ವಿದ್ಯಾರ್ಥಿಗಳಿಗೆ ಜೆ.ಒ.ಸಿ ಯು ಪಿ.ಯು.ಸಿಗೆ ತತ್ಸಮಾನವೆಂದು ಪರಿಗಣಿಸುವುದು.
    2. ಪಿ.ಯು.ಸಿ ಅಥವಾ ಜೆ.ಓ.ಸಿ ಅಂಕಗಳನ್ನು ಪರಿಗಣಿಸಿದೆ ಕೇವಲ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಪರಿಗಣಿಸಿ ಉದ್ಯೋಗಕ್ಕೆ ಆಯ್ಕೆ ಮಾಡುವುದಾದರೆ ಜೆ.ಓ.ಸಿಯನ್ನು ಪಿ.ಯು.ಸಿಗೆ ತತ್ಸಮಾನವೆಂದು ಕನಿಷ್ಠ ಶೈಕ್ಷಣಿಕ ಅರ್ಹತೆಯಾಗಿ ಪರಿಗಣಿಸುವುದು.
- ಸರ್ಕಾರದ ಆದೇಶ ಸಂಖ್ಯೆ: ಇಡಿ 33 ಟಿವಿಇ 2021, ದಿನಾಂಕ: 30.09.2021 ರಲ್ಲಿ ಮೂರು ವರ್ಷಗಳ ಡಿಪ್ಲೊಮಾ ವಿದ್ಯಾರ್ಹತೆಯನ್ನು ಪಿ.ಯು.ಸಿ ವಿದ್ಯಾರ್ಹತೆ ತತ್ಸಮಾನವೆಂದು ಈ ಕೆಳಕಂಡ ಅಂಶಗಳಿಗೆ ಮಾತ್ರ ಪರಿಗಣಿಸಿ, ಆದೇಶಿಸಿದೆ.
    1. ನೇರ ನೇಮಕಾತಿ / ಅನುಕಂಪದ ಆಧಾರದ ನೇಮಕಾತಿ ಹೊಂದಲು ಮತ್ತು ಉನ್ನತ ಶಿಕ್ಷಣ ಪಡೆಯಲು ತಾಂತ್ರಿಕ ಶಿಕ್ಷಣ ಇಲಾಖೆಯ ಮೂರು ವರ್ಷಗಳ ಡಿಪ್ಲೊಮಾ ಶಿಕ್ಷಣವನ್ನು ಪಿ.ಯು.ಸಿಗೆ ತತ್ಸಮಾನವೆಂದು ಪರಿಗಣಿಸುವುದು.
    2. 2015ಕ್ಕಿಂತ ಹಿಂದಿನ ವರ್ಷಗಳಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಮೂರು ವರ್ಷಗಳ ಡಿಪ್ಲೊಮಾ ಉತ್ತೀರ್ಣರಾದ ವಿದ್ಯಾರ್ಥಿಗಳು ಕೆ.ಪಿ.ಎಸ್.ಸಿ ಯಿಂದ ನಡೆಸುವ ಇಲಾಖಾ ಪರೀಕ್ಷೆಗಳ ಜೊತೆಗೆ ಕನ್ನಡ ಭಾಷಾ ಪರೀಕ್ಷೆಯನ್ನು ತೇರ್ಗಡೆ ಹೊಂದುವುದು.

**ಟಿಪ್ಪಣಿ :**

**a.** ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನಿಗದಿತ ವಿದ್ಯಾರ್ಹತೆ ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ. ಮೇಲಿನ ವಿದ್ಯಾರ್ಹತೆಯನ್ನು ಹೊರತುಪಡಿಸಿ ಬೇರೆ ಯಾವ ವಿದ್ಯಾರ್ಹತೆಯನ್ನೂ ಪರಿಗಣಿಸಲಾಗುವುದಿಲ್ಲ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ದೊಳಗೆ ಎಲ್ಲಾ ಅಭ್ಯರ್ಥಿಗಳು ಪಿಯುಸಿ, 12ನೇ ತರಗತಿ ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿಯನ್ನು ಹೊಂದಿರಬೇಕು.

**b.** **ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 43 ಸೇವನೆ 2020, ದಿನಾಂಕ: 5.3.2021 ರನ್ವಯ ಕನ್ನಡ ಭಾಷಾ ಪರೀಕ್ಷೆಗಾಗಿ ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 102 ಸೇವನೆ 2022 ದಿನಾಂಕ 24-03-2025 ರನ್ವಯ ಅಭ್ಯರ್ಥಿಯು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅಥವಾ ರಾಜ್ಯ ಸರ್ಕಾರವು ಅದಕ್ಕೆ ತತ್ಸಮಾನವೆಂದು ಘೋಷಿಸಿದ ಯಾವುದೇ ಪರೀಕ್ಷೆಯಲ್ಲಿ ಅಥವಾ ಎಸ್‌ಎಸ್‌ಎಲ್‌ಸಿಗಿಂತ ಉನ್ನತ ಮಟ್ಟದ ಪರೀಕ್ಷೆಗಳಲ್ಲಿ ಕನ್ನಡ ವಿಷಯವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ಅಭ್ಯಸಿಸಿದ್ದರೆ ಅಥವಾ ಕನ್ನಡ ಮಾಧ್ಯಮದಲ್ಲಿ ಅಧ್ಯಯನ ಮಾಡಿ ಇಂತಹ ಪರೀಕ್ಷೆಗಳನ್ನು ಪಾಸು ಮಾಡಿದ್ದರೆ ಅಥವಾ ಆಯೋಗ ಅಥವಾ ಇನ್ನಿತರ ಯಾವುದೇ ಆಯ್ಕೆ ಪ್ರಾಧಿಕಾರವು ಈ ಹಿಂದೆ ನಡೆಸಿದ ಕನ್ನಡ ಭಾಷೆಯ ಪರೀಕ್ಷೆಯಲ್ಲಿ (ಕಡ್ಡಾಯ ಕನ್ನಡ ಪರೀಕ್ಷೆ) ಉತ್ತೀರ್ಣರಾಗಿದ್ದರೆ, ಅಂತಹ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆಯಿಂದ ವಿನಾಯಿತಿ ನೀಡತಕ್ಕದ್ದು ಎಂದು ಆದೇಶಿಸಲಾಗಿರುತ್ತದೆ.**

**ಒಂದು ವೇಳೆ ಅಭ್ಯರ್ಥಿಗಳಲ್ಲಿ ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 102 ಸೇವನೆ 2022 ದಿನಾಂಕ 24-03-2025 ರನ್ವಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣಗೊಳ್ಳದೇ ಇದ್ದಲ್ಲಿ, ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 43 ಸೇವನೆ 2020, ದಿನಾಂಕ: 5.3.2021 ರನ್ವಯ ಎಸ್‌ಎಸ್‌ಎಲ್‌ಸಿ ಹಂತದಲ್ಲಿನ ಪ್ರಥಮ ಭಾಷೆ ಕನ್ನಡದನ್ವಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಗರಿಷ್ಠ 150 ಅಂಕಗಳ ಒಂದು ಪ್ರಶ್ನೆ ಪತ್ರಿಕೆಯಲ್ಲಿ ಅಭ್ಯರ್ಥಿಯು ಅರ್ಹತೆ ಹೊಂದಲು ಕನಿಷ್ಠ 50 ಅಂಕಗಳನ್ನು ಗಳಿಸಬೇಕಾಗಿರುತ್ತದೆ.**

**ಸೂಚನೆ: ಮೇಲ್ಕಂಡ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆ ಹೊರತುಪಡಿಸಿ, ಇತರೆ ವಿದ್ಯಾರ್ಹತೆಯಲ್ಲಿ ಅರ್ಜಿ ಸಲ್ಲಿಸಿ ಮುಂದಿನ ಪ್ರಕ್ರಿಯೆಯಲ್ಲಿ ಅನರ್ಹಗೊಂಡಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಜವಬ್ದಾರಿಯಾಗಿರುವುದಿಲ್ಲ.**

c. **ವಯೋಮಿತಿ:** ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಕನಿಷ್ಠ 18 ವರ್ಷಗಳು ತುಂಬಿರತಕ್ಕದ್ದು ಹಾಗೂ ಈ ಕೆಳಕಂಡ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು;

d. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 262 ಸೇನೆನಿ 2025 ದಿನಾಂಕ 29.01.2026 ರಲ್ಲಿ ನಿರ್ದೇಶಿಸಿರುವಂತೆ ಒಂದು ಬಾರಿಗೆ ಅನ್ವಯವಾಗುವಂತೆ ಗರಿಷ್ಠ ವಯೋಮಿತಿಯಲ್ಲಿ 5 ವರ್ಷಗಳ ಸಡಿಲಿಕೆಯನ್ನು ನೀಡಲಾಗಿದೆ.

| ಅಭ್ಯರ್ಥಿಗಳು | ಗರಿಷ್ಠ ವಯೋಮಿತಿ |
|---|---|
| ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಗೆ | 33 ವರ್ಷಗಳು |
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ /ಪ್ರವರ್ಗ-1 ಮತ್ತು ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ | 35 ವರ್ಷಗಳು |
| ಕರ್ನಾಟಕದ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಅಭ್ಯರ್ಥಿಗಳಿಗೆ | 38 ವರ್ಷಗಳು |

**ಟಿಪ್ಪಣಿ:**

**ಮಾಜಿ ಸೈನಿಕ ಅಭ್ಯರ್ಥಿಗಳಿಗೆ:** ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದು ಹಾಕಿದ ಹಾಗೂ ಸೇವಾನಿವೃತ್ತಿ ಹೊಂದಿದ ಕಾರಣದಿಂದ ಬಿಡುಗಡೆಯಾದ ಮಾಜಿಯೋಧರಾಗಿದ್ದಲ್ಲಿ "ಅವರು ಸೇವೆಸಲ್ಲಿಸಿದ ಅವಧಿ"ಯ ಜೊತೆಗೆ ಹೆಚ್ಚುವರಿ 03 ವರ್ಷಗಳ ರಿಯಾಯಿತಿಯನ್ನು ನೀಡಲಾಗುವುದು. ಮಾಜಿ ಯೋಧ ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ.

e. **ಅರ್ಜಿ ಸಲ್ಲಿಸುವ ವಿಧಾನ:** ಪ್ರಾಧಿಕಾರದ ವೆಬ್‌ಸೈಟ್ https://cetonline.karnataka.gov.in/kea/ ನಲ್ಲಿ ನೀಡಲಾಗುವ **ಲಿಂಕ್** ಅನ್ನು ಆಯ್ಕೆ ಮಾಡಿ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಭರ್ತಿ ಮಾಡಬೇಕು. ಒಮ್ಮೆ ಸಲ್ಲಿಸಿದ ಅರ್ಜಿಯಲ್ಲಿನ ಯಾವುದೇ ಮಾಹಿತಿಯನ್ನು ಯಾವುದೇ ಹಂತದಲ್ಲಿ ಬದಲಾವಣೆ / ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ. ಅಭ್ಯರ್ಥಿಗಳು ಎಚ್ಚರಿಕೆಯಿಂದ ಅಧಿಸೂಚನೆಯನ್ನು ಓದಿ ಅರ್ಥೈಸಿಕೊಂಡು ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ. ಅಭ್ಯರ್ಥಿಗಳು ಹುದ್ದೆಗಳ ವರ್ಗೀಕರಣದಲ್ಲಿ ಪ್ರಕಟಿಸಿದ ಯಾವುದಾದರೂ **ಒಂದು ಪಡೆಗೆ (ಒಂದು ಬ್ಯಾಟಲಿಯನ್‌ಗೆ)** ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.

f. **ಆನ್‌ಲೈನ್ ಅರ್ಜಿ ಸಲ್ಲಿಸಲು ವೇಳಾಪಟ್ಟಿ**

| | |
|---|---|
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | **13.07.2026** |
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **10.08.2026** |
| ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ | **11.08.2026** |

**ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಭರ್ತಿ ಮಾಡುವ ಮೊದಲು ಅರ್ಹತೆಗೆ ಸಂಬಂಧಿಸಿದ ಎಲ್ಲಾ ಸೂಚನೆಗಳನ್ನು ಓದಿಕೊಳ್ಳತಕ್ಕದ್ದು ಹಾಗೂ ನೀಡಿರುವ ಸೂಚನೆಗಳನ್ವಯ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.ತಪ್ಪು ಅಥವಾ ಸುಳ್ಳು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದಲ್ಲಿ ಯಾವುದೇ ಸಮಯದಲ್ಲಿಯಾದರೂ ಯಾವುದೇ ಸೂಚನೆ ನೀಡದೆ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು ಹಾಗೂ ನಿಯಮಾನುಸಾರ ಅಂತಹವರ ವಿರುದ್ಧ ಸರ್ಕಾರವು / ಪ್ರಾಧಿಕಾರ / ಸಂಸ್ಥೆಯು ಕಾನೂನಿನನ್ವಯ ಸೂಕ್ತ ಕ್ರಮ ಕೈಗೊಳ್ಳುವುದು.**

## ತರಬೇತಿ, ಖಾಯಂಪೂರ್ವ ಅವಧಿ ಮತ್ತು ವೇತನ ಶ್ರೇಣಿ :

a) **ತರಬೇತಿ:** ನೇಮಕಾತಿ ಹೊಂದಿದ ಅಭ್ಯರ್ಥಿಗಳು ಡಿಜಿ ಮತ್ತು ಐಜಿಪಿ ರವರು ಕಾಲ-ಕಾಲಕ್ಕೆ ನಿರ್ದಿಷ್ಟ ಪಡಿಸಿದ ಪೊಲೀಸ್ ತರಬೇತಿ ಶಾಲೆಗಳಲ್ಲಿ ಒಂಬತ್ತು ತಿಂಗಳ ಮೂಲ ಬುನಾದಿ ತರಬೇತಿಯನ್ನು ಪಡೆಯಬೇಕು. ತರಬೇತಿಯಲ್ಲಿ ನಿಗದಿಪಡಿಸಿದ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು. ಸದರಿ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಅಭ್ಯರ್ಥಿಗಳಿಗೆ ಮತ್ತೊಂದು ಅವಕಾಶವನ್ನು ನೀಡಲಾಗುವುದು ಸದರಿ ಅವಕಾಶದಲ್ಲಿಯೂ ಸಹ ಅನುತ್ತೀರ್ಣರಾದ ಅಭ್ಯರ್ಥಿಗಳನ್ನು ಸೇವೆಯಿಂದ ವಜಾಗೊಳಿಸಲಾಗುವುದು.

b) **ಖಾಯಂಪೂರ್ವ ಅವಧಿ:** ಕರ್ನಾಟಕ ನಾಗರಿಕ ಸೇವಾ (ಖಾಯಂ ಪೂರ್ವ) ನಿಯಮಗಳು 1977 ರನ್ವಯ ನೇರ ನೇಮಕಾತಿ ಮೂಲಕ ಆಯ್ಕೆಗೊಂಡ ಅಭ್ಯರ್ಥಿಗಳು ಸೇವೆಗೆ ಸೇರಿದ ದಿನಾಂಕದಿಂದ (ಮೂಲ ಬುನಾದಿ ತರಬೇತಿಯು ಸೇರಿದಂತೆ) ಎರಡು ವರ್ಷ ಆರು ತಿಂಗಳುಗಳ ಕಾಲದ ಖಾಯಂಪೂರ್ವ ಅವಧಿಯಲ್ಲಿರುತ್ತಾರೆ.

c) **ವೇತನ ಶ್ರೇಣಿ:₹. 37500-900-39300-1000-43300-1125-47800-1250-52800-1375-58300-1500-64300-1650-74200-1900-76100**

d) **ಪಿಂಚಣಿ ಸೌಲಭ್ಯ:** ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ (ಎಸ್‌ಪಿಎಲ್) 04 ಪಿಇಟಿ 2005, ದಿನಾಂಕ:31.03.2006 ರಂತೆ ರಾಷ್ಟ್ರೀಯ ಪಿಂಚಣಿ ಯೋಜನೆ (ಎನ್.ಪಿ.ಎಸ್) ಸೌಲಭ್ಯ ಅನ್ವಯವಾಗುವುದು.

**g.** ಶುಲ್ಕ:ಆನ್‌ಲೈನ್ ಮೂಲಕ ಮಾತ್ರ ಶುಲ್ಕ ಪಾವತಿಸಬೇಕಾಗಿರುತ್ತದೆ.

| ವಿವರಗಳು | ಶುಲ್ಕ | |
|---|---|---|
| ಸಾಮಾನ್ಯ ಅರ್ಹತೆ ಮತ್ತು ಇತರೆ ಪ್ರವರ್ಗಗಳು (ಪ್ರವರ್ಗ-2ಎ / 2ಬಿ / 3ಎ / 3ಬಿ) | ರೂ. 750 /- | ಪಾವತಿಸಿದ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳು | ರೂ. 500 /- | |

**h. ಲಿಖಿತ ಪರೀಕ್ಷಾ ವಿಧಾನ:**

ಮೇಲ್ಕಂಡ ಹುದ್ದೆಗಳಿಗೆ ಲಿಖಿತ ಪರೀಕ್ಷೆಯನ್ನು ಆಫ್‌ಲೈನ್-ಒಎಂಆರ್ ಮಾದರಿ (Offline-OMR type) ಯಲ್ಲಿ ನಡೆಸಲಾಗುವುದು.

ಲಿಖಿತ ಪರೀಕ್ಷೆಯನ್ನು ರಾಜ್ಯದ ಆಯ್ದ ಜಿಲ್ಲಾಕೇಂದ್ರಗಳಲ್ಲಿ ನಡೆಸಲಾಗುವುದು. **(ಆಡಳಿತಾತ್ಮಕ ಉದ್ದೇಶದಿಂದ ಜಿಲ್ಲಾ ಪರೀಕ್ಷಾ ಕೇಂದ್ರಗಳು ಬದಲಾವಣೆಯ ಷರತ್ತಿಗೆ ಒಳಪಟ್ಟಿರುತ್ತದೆ)** ಅಭ್ಯರ್ಥಿಗಳಿಗೆ ಪರೀಕ್ಷೆಯ ಪ್ರವೇಶ ಪತ್ರಗಳನ್ನು ಪ್ರಾಧಿಕಾರದ ವೆಬ್‌ಸೈಟ್ ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಪ್ರಕಟಣೆಯ ಮೂಲಕ ತಿಳಿಸಲಾಗುವುದು ಹಾಗೂ ಈ ಬಗ್ಗೆ ಮಾಹಿತಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿಯೂ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಒಂದು ಮೂಲ ಗುರುತಿನ ಚೀಟಿಯೊಂದಿಗೆ (ಪ್ಯಾನ್‌ಕಾರ್ಡ್ / ವಾಹನ ಚಾಲನಾ ಪರವಾನಗಿ / ಆಧಾರ್‌ಕಾರ್ಡ್ / ಪಾಸ್‌ಪೋರ್ಟ್ / ವೋಟರ್ ಐಡಿ/ ಸರ್ಕಾರಿ ನೌಕರರ ಐಡಿ) ಪರೀಕ್ಷಾ ಕೇಂದ್ರಗಳಿಗೆ ಹೋಗಬೇಕು. ತಪ್ಪಿದ್ದಲ್ಲಿ ಪರೀಕ್ಷಾ ಕೇಂದ್ರವನ್ನು ಪ್ರವೇಶಿಸಲು ಅನುಮತಿಸಲಾಗುವುದಿಲ್ಲ.
**(ಪರೀಕ್ಷಾ ಕೇಂದ್ರವನ್ನು ಯಾವುದೇ ಕಾರಣಕ್ಕೂ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ)**

**a. ಪ್ರಶ್ನೆಪತ್ರಿಕೆ ಹಾಗೂ ಪಠ್ಯಕ್ರಮ :-**

| ಪತ್ರಿಕೆ/ Paper | ವಿಷಯ / Subject | ಒಟ್ಟು ಪ್ರಶ್ನೆಗಳು/ Total Questions | ಒಟ್ಟು ಅಂಕಗಳು/ Total Marks | ಅವಧಿ / Duration (ಗಂಟೆ / hours) |
|---|---|---|---|---|
| ಲಿಖಿತ ಪರೀಕ್ಷೆ | ಸಾಮಾನ್ಯ ಅಧ್ಯಯನ ಮತ್ತು ಮಾನಸಿಕ ಸಾಮರ್ಥ್ಯ | 100 | 100 | 1 ½ ಗಂಟೆ (90 ನಿಮಿಷಗಳು) |

- **ಲಿಖಿತ ಪರೀಕ್ಷೆ ವೇಳಾ ಪಟ್ಟಿ :**

| ಪರೀಕ್ಷೆ | ದಿನಾಂಕ | ಸಮಯ |
|---|---|---|
| ಲಿಖಿತ ಪರೀಕ್ಷೆ | 20.09.2026 | ಬೆಳಿಗ್ಗೆ 10.30 ರಿಂದ 12.00 ರವರೆಗೆ |
| ಕಡ್ಡಾಯ ಕನ್ನಡ (ಟಿಪ್ಪಣಿ-b ಯಲ್ಲಿ ತಿಳಿಸಿರುವಂತೆ ಕಡ್ಡಾಯ ಕನ್ನಡ ಪರೀಕ್ಷೆಯಿಂದ ವಿನಾಯಿತಿ ಪಡೆಯದ ಅಭ್ಯರ್ಥಿಗಳಿಗೆ) | ನಂತರದ ದಿನಾಂಕದಲ್ಲಿ ತಿಳಿಸಲಾಗುವುದು | |

- ಸರ್ಕಾರದ ಪತ್ರ ಸಂಖ್ಯೆ: ಒಇ 207 ಪೊಸಿಇ 2018, ದಿನಾಂಕ: 05.02.2019 ರಲ್ಲಿ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸುವ ಸಂಬಂಧ ಸ್ಪಷ್ಟೀಕರಣ ನೀಡಿದ್ದು, ಅದರಂತೆ ಅರ್ಹ ಮೆರಿಟ್ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಲುವಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲಾಗುತ್ತದೆ. ಆದ್ದರಿಂದ ಅಭ್ಯರ್ಥಿಗಳು ಶೂನ್ಯ ಹಾಗೂ ಶೂನ್ಯಕ್ಕಿಂತ ಕಡಿಮೆ ಅಂಕಗಳನ್ನು ಪಡೆದಲ್ಲಿ ಅಂತಹ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸುವುದು ಸೂಕ್ತವಲ್ಲ ಮತ್ತು ಸಮಂಜಸವಾಗಿರುವುದಿಲ್ಲವೆಂದು ಸ್ಪಷ್ಟೀಕರಣ ನೀಡಲಾಗಿರುವುದರಿಂದ ಶೂನ್ಯ ಹಾಗೂ ಶೂನ್ಯಕ್ಕಿಂತ ಕಡಿಮೆ ಅಂಕಗಳನ್ನು ಪಡೆದಂತಹ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸದೆ ಆಯಾ ವರ್ಗಕ್ಕೆ ಸೇರಿದ ಇತರೇ ಅರ್ಹ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದು.

**b. ಋಣಾತ್ಮಕ ಮೌಲ್ಯಮಾಪನ (Negative Valuation):-**

- ಸ್ಪರ್ಧಾತ್ಮಕ ಪರೀಕ್ಷೆಯ ಪ್ರಶ್ನೆಪತ್ರಿಕೆಗಳಲ್ಲಿನ ಪ್ರತಿಯೊಂದು ಪ್ರಶ್ನೆಗೂ 04 ಪರ್ಯಾಯ ಉತ್ತರಗಳಿದ್ದು, ಅಭ್ಯರ್ಥಿಯು ಯಾವುದಾದರೂ ಒಂದು ಸರಿ ಉತ್ತರವನ್ನು ಮಾತ್ರ ಆಯ್ಕೆ ಮಾಡತಕ್ಕದ್ದು. ಪ್ರತಿ ತಪ್ಪು ಉತ್ತರಕ್ಕೆ ನಾಲ್ಕನೇ ಒಂದಂಶ ದಷ್ಟು 0.25 ಅಂಕಗಳನ್ನು ಕಳೆಯಲಾಗುವುದು.
- ಒ.ಎಂ.ಆರ್ ಉತ್ತರ ಪತ್ರಿಕೆಯಲ್ಲಿ 5ನೇ ಆಯ್ಕೆ/ ವೃತ್ತವನ್ನು ನೀಡಿದ್ದು, ಉತ್ತರಿಸದೇ ಇರುವ ಪ್ರಶ್ನೆಗಳಿಗೆ ಐದನೇ ಆಯ್ಕೆ/ವೃತ್ತವನ್ನು ಶೇಡ್ ಮಾಡಲು ಕೊನೆಯ ಬೆಲ್ ಆದ ನಂತರ ಹೆಚ್ಚುವರಿಯಾಗಿ ಐದು ನಿಮಿಷಗಳನ್ನು ನೀಡಲಾಗುವುದು. ಯಾವುದೇ ಆಯ್ಕೆಯನ್ನು / ವೃತ್ತವನ್ನು ಶೇಡ್ ಮಾಡಿಲ್ಲದಿದ್ದರೆ, ಪ್ರತಿ ಪ್ರಶ್ನೆಗೆ 0.25 ಅಂಕಗಳನ್ನು ಕಡಿತಗೊಳಿಸಲಾಗುತ್ತದೆ.

**vii.ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಗಳ ವಿವರ:**

- ಅಭ್ಯರ್ಥಿಗಳು ವಸ್ತುನಿಷ್ಠ ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಲಾಗುವುದು. ಈ ಅರ್ಹತಾ ಪಟ್ಟಿಯಿಂದ ಪ್ರತಿ ವರ್ಗದಲ್ಲಿ ಅಧಿಸೂಚಿತ ಖಾಲಿ ಇರುವ ಹುದ್ದೆಗಳಿಗೆ ಮೆರಿಟ್ ಹಾಗೂ ಮೀಸಲಾತಿಗೆ ಅನುಗುಣವಾಗಿ ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಗಳಿಗೆ 1:5 ರ ಅನುಪಾತದಲ್ಲಿ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ತಯಾರಿಸಲಾಗುವುದು. 1:5 ರ ಅನುಪಾತದಂತೆ ಆಯ್ಕೆಯಾಗಿರುವ ಅಭ್ಯರ್ಥಿಗಳು ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಗಳಲ್ಲಿ ಅರ್ಹರಾಗದಿದ್ದಲ್ಲಿ ಮುಂದಿನ 1:5 ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳಿಗೆ ಕರೆಯಲಾಗುವುದು. ಈ ಅನುಪಾತವು ಯಾವುದೇ ಕಾರಣಕ್ಕೂ 1:10ರ ಅನುಪಾತವನ್ನು ಮೀರುವುದಿಲ್ಲ.

**viii.ಲಿಖಿತ ಪರೀಕ್ಷೆಯಲ್ಲಿ 1:5ರ ಅನುಪಾತದಡಿ ಅರ್ಹಗೊಂಡ ಅಭ್ಯರ್ಥಿಗಳಿಗೆ ದೇಹದಾರ್ಢ್ಯತೆ ಪರೀಕ್ಷೆ (Physical Standard Test) (PST) ಮತ್ತು ಸಹಿಷ್ಣುತೆ ಪರೀಕ್ಷೆ (Physical Endurance Test) (PET) ಗಳನ್ನು ನಡೆಸಲಾಗುವುದು:**

ಪರೀಕ್ಷೆಗಳ ದಿನಾಂಕವನ್ನು ವೆಬ್‌ಸೈಟ್ "https://cetonline.karnataka.gov.in/kea/"ನಲ್ಲಿ ಹಾಗೂ "https://ksp.karnataka.gov.in/" ನಲ್ಲಿ ಪ್ರಕಟಿಸಲಾಗುವುದು.ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಹೊಂದಿರುವ ಪ್ರವೇಶ/ಕರೆ ಪತ್ರಗಳನ್ನು ಪ್ರಾಧಿಕಾರದ ಅಧಿಕೃತ ವೆಬ್‌ಸೈಟ್ ಮೂಲಕ ಅಭ್ಯರ್ಥಿಗಳು ಕಡ್ಡಾಯವಾಗಿ ಡೌನ್‌ಲೋಡ್ ಮಾಡಿಕೊಳ್ಳಬೇಕು. ಅಭ್ಯರ್ಥಿಗಳಿಗೆ ಪ್ರವೇಶ ಪತ್ರಗಳನ್ನು ಪ್ರತ್ಯೇಕವಾಗಿ ರವಾನಿಸಲಾಗುವುದಿಲ್ಲ. ಪ್ರವೇಶ ಪತ್ರವಿಲ್ಲದೇ ಪಿ.ಎಸ್.ಟಿ. ಮತ್ತು ಪಿ.ಇ.ಟಿ. ಪರೀಕ್ಷೆಗಳಿಗೆ ಅನುವು ಮಾಡಲಾಗುವುದಿಲ್ಲ. ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಈ ಕಛೇರಿಯ ಅಧಿಕೃತ ವೆಬ್‌ಸೈಟ್ https://cetonline.karnataka.gov.in/kea/ ಹಾಗೂ "https://ksp.karnataka.gov.in/" ನ್ನು ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ.

**a)** ಅಭ್ಯರ್ಥಿಗಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳನ್ನು ಸಂಬಂಧಪಟ್ಟ ಪೊಲೀಸ್ ಅಧೀಕ್ಷಕರ / ಪೊಲೀಸ್ ಆಯುಕ್ತರ ಕಛೇರಿಯು / ಇತರೆ ನೇಮಕಾತಿ ಪ್ರಾಧಿಕಾರದ ಕಛೇರಿಯು ನಿಗದಿಪಡಿಸಿದ ಸ್ಥಳದಲ್ಲಿ ನಡೆಸಲಾಗುವುದು. ಆಯ್ಕೆ ಸಮಿತಿಯು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ. ಆದ್ದರಿಂದ ಅಭ್ಯರ್ಥಿಗಳು ಇಲಾಖೆಯ ವೈಬ್‌ಸೈಟ್‌ನ್ನು ದಿನ ನಿತ್ಯ ನೋಡಲು ತಿಳಿಸಲಾಗಿದೆ.

**b)** ದೈಹಿಕ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಸಂಬಂಧಪಟ್ಟ ದೈಹಿಕ ಪರೀಕ್ಷೆಯ ಕೇಂದ್ರಗಳ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ದೈಹಿಕ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ.
ದೈಹಿಕ ಪರೀಕ್ಷೆಗೆ ಬರುವಾಗ ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

i) ಪಾಸ್‌ಪೋರ್ಟ್ (Passport)
ii) ಚಾಲನಾ ಪರವಾನಗಿ ಪತ್ರ (Driving License)
iii) ಪ್ಯಾನ್ ಕಾರ್ಡ್ (PAN Card)
iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)
v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)
vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Caste Certificate with Photo)

viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)

ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)

x) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).

xi) ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್.(AADHAR CARD).

**c)** ಕರೆಪತ್ರದ ಜೊತೆಗೆ ಆನ್‌ಲೈನ್ ಮುಖಾಂತರ ಸಲ್ಲಿಸಿದ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ಸಹ ತರತಕ್ಕದ್ದು, ತಪ್ಪಿದ್ದಲ್ಲಿ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ. ನಿಗದಿತ ದಿನಾಂಕ ಹಾಗೂ ಸಮಯದಲ್ಲಿ ಹಾಜರಾಗದಿದ್ದರೆ ಅಂತಹವರನ್ನು ಅನರ್ಹ ಗೊಳಿಸಲಾಗುವುದು ಹಾಗೂ ಬದಲಿ ದಿನಾಂಕವನ್ನು ನೀಡಲಾಗುವುದಿಲ್ಲ.

## d) <u>ದೇಹದಾರ್ಢ್ಯತೆ ಪರೀಕ್ಷೆ (Physical Standard Test):</u>

| | |
|---|---|
| ಪುರುಷ<br>ಮತ್ತು<br>ಮಾಜಿ ಸೈನಿಕ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 168 ಸೆಂ. ಮೀ.<br>***ಕನಿಷ್ಠ ಎದೆ ಸುತ್ತಳತೆ*** :<br>86 ಸೆಂ. ಮೀ (ಪೂರ್ತಿ ವಿಸ್ತರಿಸಿದಾಗ) ಕನಿಷ್ಠ ವಿಸ್ತರಣೆ 5 ಸೆಂ. ಮೀ. |
| ಮಹಿಳಾ<br>ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 158 ಸೆಂ. ಮೀ.<br>***ಕನಿಷ್ಠ ತೂಕ*** : 45 ಕೆ.ಜಿ. |

| | |
|---|---|
| ಕರ್ನಾಟಕ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಪುರುಷ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 155 ಸೆಂ. ಮೀ.<br>***ಕನಿಷ್ಠ ಎದೆ ಸುತ್ತಳತೆ***<br>5 ಸೆಂ. ಮೀ.ಗಳ ಕನಿಷ್ಠ ವಿಸ್ತರಿಸುವುದರೊಂದಿಗೆ ಸಂಪೂರ್ಣವಾಗಿ ಹಿಗ್ಗಿಸಿದಾಗ 75 ಸೆಂ. ಮೀ.ಗಳಿಗಿಂತ ಕಡಿಮೆ ಇಲ್ಲದಂತೆ |
| ಕರ್ನಾಟಕ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಮಹಿಳಾ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 150 ಸೆಂ. ಮೀ.<br>***ಕನಿಷ್ಠ ತೂಕ*** : 45 ಕೆ.ಜಿ |

**ಟಿಪ್ಪಣಿ:**

- ನಿಗದಿಪಡಿಸಿರುವ ಕನಿಷ್ಠ ಎತ್ತರ 168 ಸೆಂ.ಮೀ. ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಿಲ್ಲದೆ ಇರುವ ಪಕ್ಷದಲ್ಲಿ ಕಡಿಮೆ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಸಹ ಅರ್ಹತೆಗೆ ಅನುಗುಣವಾಗಿ ಅಂತಿಮ ಆಯ್ಕೆಗೆ ಪರಿಗಣಿಸಲಾಗುವುದು. ಕಡಿಮೆ ಎತ್ತರ ಹೊಂದಿರುವ ಅಭ್ಯರ್ಥಿಗಳು ಹೆಚ್ಚಿನ ಅಂಕಗಳನ್ನು ಪಡೆದಿದ್ದರೂ ಮೊದಲು ಕನಿಷ್ಠ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಪರಿಗಣಿಸಿದ ನಂತರ ಕಡಿಮೆ ಎತ್ತರ ಹೊಂದಿರುವ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಪರಿಗಣಿಸಲಾಗುವುದು.

- **"ಬುಡಕಟ್ಟು ಜನಾಂಗ"** ಎಂದರೆ "ಉತ್ತರ ಕನ್ನಡ ಕಾರವಾರ, ದಕ್ಷಿಣ ಕನ್ನಡ ಮಂಗಳೂರು, ಉಡುಪಿ, ಚಿಕ್ಕಮಗಳೂರು, ಶಿವಮೊಗ್ಗ, ಕೊಡಗು, ಚಾಮರಾಜನಗರ ಮತ್ತು ಮೈಸೂರು ಅರಣ್ಯಗಳಲ್ಲಿ ಸಿದ್ದಿಗರು, ಜೇನುಕುರುಬ, ಕಾಡುಕುರುಬ, ಯೆರವ, ಸೋಲಿಗ, ಕುಡಿಯ, ಗೌಡ್ಲು, ಹಸಲರು, ಮಲೈಕುಡಿಯ ಮತ್ತು ಕೊರಗ ಬುಡಕಟ್ಟು ಸಮುದಾಯಗಳಿಗೆ ಸೇರಿದ ಅಭ್ಯರ್ಥಿಗಳು".

**e) ದೈಹಿಕ ಸಹಿಷ್ಣುತೆ ಪರೀಕ್ಷೆ : (Physical Endurance Test)**

i) ಮೇಲಿನ ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹರಾದ ಅಭ್ಯರ್ಥಿಗಳು ಈ ಕೆಳಗಿನ ಎಲ್ಲಾ ಸಹಿಷ್ಣುತೆ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು ಹಾಗೂ ಈ ಕೆಳಗಿನ ಎಲ್ಲಾ ಸಹಿಷ್ಣುತೆ ಪರೀಕ್ಷೆಗಳನ್ನು ಈ ಕೆಳಗೆ ನಮೂದಿಸಿರುವ ಕ್ರಮದಲ್ಲಿಯೇ ಭಾಗವಹಿಸುವುದು ಕಡ್ಡಾಯವಾಗಿರುತ್ತದೆ. ಈ ಪರೀಕ್ಷೆಗಳಲ್ಲಿ ಭಾಗವಹಿಸುವುದನ್ನು ತಿರಸ್ಕರಿಸುವವರು/ ವಿಫಲವಾಗುವವರು ಅನರ್ಹತೆಗೆ ಒಳಗಾಗುವರು. ಪ್ರತಿಯೊಂದು ಸಹಿಷ್ಣುತೆ ಪರೀಕ್ಷೆ ಮುಗಿದ ನಂತರ ನಿಗದಿತ ನಮೂನೆಗೆ ಅಭ್ಯರ್ಥಿಯು ಭರ್ತಿ ಮಾಡಿರುವ ವಿವರಗಳನ್ನು ಪರಿಶೀಲಿಸಿ ಸಹಿ ಹಾಕಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಯು ಅನರ್ಹತೆಗೊಳಗಾಗುವನು. ಸಹಿಷ್ಣುತೆ ಪರೀಕ್ಷೆಗೆ ಅಂಕಗಳನ್ನು ನೀಡಲಾಗುವುದಿಲ್ಲ. ಇವು ಕೇವಲ ಅರ್ಹತೆಗೆ ಮಾತ್ರ ಸೀಮಿತವಾಗಿರುತ್ತದೆ.

ii) ದೈಹಿಕ ಸಹಿಷ್ಣುತೆ ಪರೀಕ್ಷೆಯಲ್ಲಿರುವ ಅಂಶಗಳು ಹಾಗೂ ಅರ್ಹತಾ ವೇಳೆ/ ದೂರದ ವಿವರಗಳು ಈ ಕೆಳಕಂಡಂತಿರುತ್ತದೆ ಮತ್ತು ಅವುಗಳನ್ನು ನಮೂದಿಸಲಾಗಿರುವ ಕ್ರಮದಲ್ಲಿಯೇ ನಡೆಸಲಾಗುವುದು:

| ದೈಹಿಕ ಸಹಿಷ್ಣುತೆ ಪರೀಕ್ಷೆ | | |
|---|---|---|
| | ಅಂಶಗಳು | ಅರ್ಹತಾ ವೇಳೆ / ದೂರ |
| ಪುರುಷ ಅಭ್ಯರ್ಥಿಗಳಿಗೆ | 1600 ಮೀಟರ್ ಓಟ | 6 ನಿಮಿಷ 30 ಸೆಕೆಂಡ್ |
| | ಉದ್ದ ಜಿಗಿತ<br>ಅಥವಾ<br>ಎತ್ತರ ಜಿಗಿತ | 3.80 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>ಅಥವಾ<br>1.20 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| | ಗುಂಡು ಎಸೆತ (7.26 ಕೆ.ಜಿ.) | 5.60 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು. ಮಾತ್ರ) |
| ಮಹಿಳಾ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳಿಗೆ | 400 ಮೀಟರ್ ಓಟ | 1 ನಿಮಿಷ 30 ಸೆಕೆಂಡ್ |
| | ಉದ್ದ ಜಿಗಿತ<br>ಅಥವಾ<br>ಎತ್ತರ ಜಿಗಿತ | 2.50 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>ಅಥವಾ<br>0.90 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| | ಗುಂಡು ಎಸೆತ (4 ಕೆ.ಜಿ.) | 3.75 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |

**ವಿಶೇಷ ಸೂಚನೆಗಳು :-**

i) ದೈಹಿಕ ಸಹಿಷ್ಣುತೆ ಪರೀಕ್ಷೆಗೆ ಹಾಜರಾಗುವ ಮುನ್ನ ಅಭ್ಯರ್ಥಿಗಳು ದೈಹಿಕವಾಗಿ ಸದೃಢರಿರಬೇಕು. ಈ ಪರೀಕ್ಷೆಗಳ ಸಂದರ್ಭದಲ್ಲಿ ಸಂಭವಿಸುವ ಯಾವುದೇ ರೀತಿಯ ಅನಾಹುತ / ತೊಂದರೆಗಳಿಗೆ ಪೊಲೀಸ್ ಇಲಾಖೆ/ ನೇಮಕಾತಿ ಸಮಿತಿಯು ಜವಾಬ್ದಾರರಾಗಿರುವುದಿಲ್ಲ. ಅಭ್ಯರ್ಥಿಗಳು ಅವರ ಸ್ವಂತ ಹಿತದೃಷ್ಠಿಯಿಂದ ಅವರ ದೇಹದ ವೈದ್ಯಕೀಯ ಪರೀಕ್ಷೆಯನ್ನು ಮಾಡಿಸಿಕೊಂಡು, ತಮ್ಮ ಆರೋಗ್ಯವು ಎಲ್ಲ ರೀತಿಯಿಂದಲೂ ಸದೃಢವಾಗಿದೆ ಎಂದು ಖಚಿತ ಪಡಿಸಿಕೊಂಡು ಇಲಾಖೆ ನಡೆಸುವ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಎಲ್ಲ ವಿಧದಿಂದಲೂ ಅರ್ಹರೆಂದು ಮುಂಚಿತವಾಗಿಯೇ ತಿಳಿದುಕೊಂಡು ಹಾಜರಾಗತಕ್ಕದ್ದು. ಈ ದಿಸೆಯಲ್ಲಿ ಕನಿಷ್ಠ ಒಂದು ತಿಂಗಳ ಮುಂಚೆಯಿಂದಲೇ ಸಹಿಷ್ಣುತೆ ಪರೀಕ್ಷೆಗೆ ಅಭ್ಯರ್ಥಿಗಳು ಸಾಕಷ್ಟು ಅಭ್ಯಾಸ ಮಾಡಿಕೊಳ್ಳತಕ್ಕದ್ದು. ಸಹಿಷ್ಣುತೆ ಪರೀಕ್ಷೆಯಲ್ಲಿ ಸಂಭವಿಸುವ ಯಾವ ಅನಾಹುತಗಳಿಗೂ ಇಲಾಖೆ ಜವಾಬ್ದಾರರಾಗುವುದಿಲ್ಲ. ಈ ಪರೀಕ್ಷೆಗಳಲ್ಲಿ ಅಭ್ಯರ್ಥಿಗಳು ತಮ್ಮ ಸ್ವಂತ ಜವಾಬ್ದಾರಿ ಹಾಗೂ ಸ್ವಇಚ್ಛೆಯಿಂದ ಭಾಗವಹಿಸುವುದು.

ii) ದೈಹಿಕ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು ದೈಹಿಕವಾಗಿ ಸದೃಢವಾಗಿರಬೇಕಾಗಿರುವುದರಿಂದ ಅನಾರೋಗ್ಯದ ಕಾರಣ ನಿಗದಿಪಡಿಸಲಾಗುವ ದಿನಾಂಕದಂದು ಹಾಜರಾಗದಿರುವ ಅಭ್ಯರ್ಥಿಗಳಿಗೆ ಮತ್ತೊಮ್ಮೆ ಅವಕಾಶ ಕಲ್ಪಿಸುವ ಕುರಿತು ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆ ಸಮಿತಿಯು ತೆಗೆದುಕೊಳ್ಳುವ ತೀರ್ಮಾನವೇ ಅಂತಿಮವಾಗಿರುತ್ತದೆ. ಅಲ್ಲದೆ ಪರೀಕ್ಷೆಗೆ ಅರ್ಹರಾಗುವ ಗರ್ಭಿಣಿ ಮಹಿಳಾ ಅಭ್ಯರ್ಥಿಗಳಿಗೆ ಆರೋಗ್ಯದ ಹಿತದೃಷ್ಠಿಯಿಂದ ಅವಕಾಶ ಕಲ್ಪಿಸದಿರುವುದು ಸೂಕ್ತವಾಗಿರುತ್ತದೆ. ಆದ್ದರಿಂದ ಸದರಿ ವಿಷಯದ ಕುರಿತು ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ಆಯ್ಕೆ ಸಮಿತಿಯು ತೆಗೆದುಕೊಳ್ಳುವ ತೀರ್ಮಾನವೇ ಅಂತಿಮವಾಗಿರುತ್ತದೆ. ಒಂದು ವೇಳೆ ಅಭ್ಯರ್ಥಿಯು ಸಮಿತಿಯ ತೀರ್ಮಾನವನ್ನು ಉಲ್ಲಂಘಿಸಿ, ಸ್ವಇಚ್ಛೆಯಿಂದ ಭಾಗವಹಿಸಿದಲ್ಲಿ, ಉಂಟಾಗಬಹುದಾದ ಅನಾಹುತ/ ತೊಂದರೆಗಳಿಗೆ ಪೊಲೀಸ್ ಇಲಾಖೆ/ ನೇಮಕಾತಿ ಸಮಿತಿಯವರು ಜವಾಬ್ದಾರರಾಗಿರುವುದಿಲ್ಲ.

**ಟಿಪ್ಪಣಿ :**

i) ದೇಹದಾರ್ಢ್ಯತೆಮತ್ತು ಸಹಿಷ್ಣುತೆ ಪರೀಕ್ಷೆಯನ್ನು ಒಂದು ದೈಹಿಕ ಪರೀಕ್ಷೆಯ ಸಮಿತಿಯು ನಡೆಸುತ್ತದೆ. ಯಾವುದೇ ವೈದ್ಯಕೀಯ ಪ್ರಮಾಣ ಪತ್ರದ ಆಧಾರದ ಮೇಲೆ ಪರಿಗಣಿಸಲಾಗುವುದಿಲ್ಲ. ದೈಹಿಕ ಪರೀಕ್ಷೆಯ ಸಮಿತಿಯು ನೀಡುವ ಫಲಿತಾಂಶವೇ ಅಂತಿಮವಾಗಿರುತ್ತದೆ.

ii) ದೇಹದಾರ್ಢ್ಯತೆಮತ್ತು ಸಹಿಷ್ಣುತೆ ಪರೀಕ್ಷೆ ಪೂರ್ಣಗೊಂಡ ನಂತರ ಅಭ್ಯರ್ಥಿಗಳು ದೈಹಿಕ ಪರೀಕ್ಷೆ ಸಮಿತಿ ಸಮ್ಮುಖದಲ್ಲಿ ನಿಗದಿತ ನಮೂನೆಗೆ ಸಹಿ ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು. ಇಲ್ಲವಾದರೆ ಅಂತಹವರನ್ನು ಅನರ್ಹರೆಂದು ಪರಿಗಣಿಸಲಾಗುವುದು.

iii) ಅಭ್ಯರ್ಥಿಗಳು ದೇಹದಾರ್ಢ್ಯತೆಮತ್ತು ಸಹಿಷ್ಣುತೆ ಪರೀಕ್ಷೆಯಲ್ಲಿ ಅರ್ಹಗೊಂಡಲ್ಲಿ ಮಾತ್ರ ವೈದ್ಯಕೀಯ ಪರೀಕ್ಷೆಗೆ ಅರ್ಹಗೊಳ್ಳುವರು.

iv) ನಿಗದಿಪಡಿಸಿರುವ ಕನಿಷ್ಠ ಎತ್ತರ 168 ಸೆಂ.ಮೀ. ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಿಲ್ಲದೆ ಇರುವ ಪಕ್ಷದಲ್ಲಿ ಕಡಿಮೆ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಸಹ ಅರ್ಹತೆಗೆ ಅನುಗುಣವಾಗಿ ಅಂತಿಮ ಆಯ್ಕೆಗೆ ಪರಿಗಣಿಸಲಾಗುವುದು. ಕಡಿಮೆ ಎತ್ತರ ಹೊಂದಿರುವ ಅಭ್ಯರ್ಥಿಗಳು ಹೆಚ್ಚಿನ ಅಂಕಗಳನ್ನು ಪಡೆದಿದ್ದರೂ ಮೊದಲು ಕನಿಷ್ಠ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಪರಿಗಣಿಸಿದ ನಂತರ ಕಡಿಮೆ ಎತ್ತರ ಹೊಂದಿರುವ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಪರಿಗಣಿಸಲಾಗುವುದು.

v) ದೇಹದಾರ್ಢ್ಯತೆ ಪರೀಕ್ಷೆಯ ಎತ್ತರ ಹಾಗೂ ತೂಕವನ್ನು ಗುಣಮಟ್ಟ ಯಂತ್ರದಿಂದ ಪಡೆಯಲಾಗುವುದು.

vi) ಪಾರದರ್ಶಕತೆಗಾಗಿ ಮೇಲೆ ಹೇಳಿದ ಎಲ್ಲಾ ದೇಹದಾರ್ಢ್ಯತೆಮತ್ತು ಸಹಿಷ್ಣುತೆ ಪರೀಕ್ಷೆಯನ್ನು ವೀಡಿಯೋಗ್ರಫಿ ಅಥವಾ ಸಿಸಿ ಟಿವಿ ಮೂಲಕ ಸೆರೆಹಿಡಿಯಲಾಗುವುದು.

**vii) ಈ ಮೇಲ್ಕಂಡ ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳನ್ನು ಪ್ರತಿ ವರ್ಗದನ್ವಯ ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಅಧಿಸೂಚಿತ ಖಾಲಿ ಹುದ್ದೆಗಳ ಸಂಖ್ಯೆಗಳಲ್ಲಿ 1:2 ರ ಅನುಪಾತದಂತೆ ಅರ್ಹತೆಯ ಕ್ರಮದಲ್ಲಿ ಕಿರುಪಟ್ಟಿ (Shortlisted) ಅನ್ನು ತಯಾರಿಸಲಾಗುವುದು. ಸದರಿ ಪಟ್ಟಿಯಿಂದ ಅಧಿಸೂಚಿತ ಖಾಲಿ ಹುದ್ದೆಗಳ ಸಂಖ್ಯೆಗನುಗುಣವಾಗಿ ಮಾತ್ರ ಅಭ್ಯರ್ಥಿಗಳಿಗೆ ನೇಮಕಾತಿ ಪ್ರಾಧಿಕಾರವು ನಿರ್ಧರಿಸುವ ಸಮಯ ಮತ್ತು ಸ್ಥಳದಲ್ಲಿ ವೈದ್ಯಕೀಯ ಮಂಡಳಿಯವರಿಂದ ವೈದ್ಯಕೀಯ ಪರೀಕ್ಷೆಯನ್ನು ನಡೆಸಲಾಗುವುದು ಹಾಗೂ ಇನ್ನುಳಿದ ವಿಧಾನ ಮತ್ತು ಅರ್ಹತೆಯನ್ನು ಸರ್ಕಾರದ ಆದೇಶ ದಿನಾಂಕ:13.04.2026 ಕ್ಕೆ ಒಳಪಟ್ಟಿರುತ್ತದೆ.**

* ಅಭ್ಯರ್ಥಿಗಳು ಮೇಲ್ಕಂಡ ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಗಳಲ್ಲಿ ಅರ್ಹರಾಗಿದ್ದರೂ ಸಹ ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಯು ಶಾರೀರಿಕವಾಗಿ ಸಧೃಡರಾಗಿರಬೇಕಾಗಿರುತ್ತದೆ. ಆದ್ದರಿಂದ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸಲು ಅಡ್ಡಿಪಡಿಸುವಂತಹ ಯಾವುದೇ ದೈಹಿಕ ನ್ಯೂನ್ಯತೆಗಳನ್ನು / ಅಂಗವೈಕಲ್ಯಗಳನ್ನು ಹೊಂದಿರಬಾರದು.

**ix. ವೈದ್ಯಕೀಯ ಪರೀಕ್ಷೆ :**

ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಿದ ನಂತರ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಅರ್ಹಗೊಳ್ಳುವ ಎಲ್ಲಾ ಅಭ್ಯರ್ಥಿಗಳು ವೈದ್ಯಕೀಯ ಮಂಡಳಿಯ ಮುಂದೆ ವೈದ್ಯಕೀಯ ಪರೀಕ್ಷೆಗೆ ಹಾಜರಾಗತಕ್ಕದ್ದು. ವೈದ್ಯಕೀಯ ಪರೀಕ್ಷೆಯ ವೇಳೆ ಮತ್ತು ಸ್ಥಳವನ್ನು ನೇಮಕಾತಿ ಪ್ರಾಧಿಕಾರವು ನಿಗದಿಪಡಿಸುವುದು.

ಆಯ್ಕೆಯಾದ ಅಭ್ಯರ್ಥಿಗಳು ವೈದ್ಯಕೀಯ ಪರೀಕ್ಷೆಗೆ ಹಾಜರಾಗುವಾಗ ಮೂಲ ದಾಖಲೆಗಳೊಂದಿಗೆ (ಎಸ್‌ಎಸ್‌ಎಲ್‌ಸಿ ಅಥವಾ 10ನೇ ತರಗತಿಯ ವಿದ್ಯಾರ್ಹತೆ ಪ್ರಮಾಣ ಪತ್ರ, ಪಿ.ಯು.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ, ಸಮತಳ ಮೀಸಲಾತಿ ಕೋರಿದ್ದಲ್ಲಿ ಅವುಗಳ ಪ್ರಮಾಣ ಪತ್ರಗಳು) ಹಾಜರಾಗುವುದು ಹಾಗೂ ಪತ್ರಾಂಕಿತ (Gazetted) ಅಧಿಕಾರಿಯವರಿಂದ ದೃಢೀಕರಿಸಿದ ಮೂಲ ದಾಖಲೆಗಳ ಜೆರಾಕ್ಸ್ ಪ್ರತಿಯ ಒಂದು ಸೆಟ್‌ಅನ್ನು ಸಂಬಂಧಪಟ್ಟ ಕಛೇರಿಗೆ ನೀಡುವುದು.

**ವೈದ್ಯಕೀಯ ಪರೀಕ್ಷೆಗಳು ಈ ಕೆಳಕಂಡಂತಿರುತ್ತವೆ :**

a) ದೃಷ್ಟಿ:

ಕನ್ನಡಕ ಸಹಿತ ಅಥವಾ ಕನ್ನಡಕವಿಲ್ಲದೇ ಕೆಳಗೆ ಕಾಣಿಸಿದ ದರ್ಜೆಯ ಸಮೀಪ ಮತ್ತು ದೂರದ ದೃಷ್ಟಿ ಹೊಂದಿರಬೇಕು.

| | ಉತ್ತಮ | | ಕನಿಷ್ಠ |
|---|---|---|---|
| (i) ದೂರದ ದೃಷ್ಟಿ | 6/9 | ಅಥವಾ | 6/9 |
| | 6/9 | | 6/12 |
| (ii) ಸಮೀಪದ ದೃಷ್ಟಿ | 0/6 | | 0/8 |

ಪ್ರತಿ ಕಣ್ಣು ಸಂಪೂರ್ಣ ಕ್ಷೇತ್ರ ದೃಷ್ಟಿ ಹೊಂದಿರಬೇಕು. ವರ್ಣಾಂಧತೆ, ಮೆಳ್ಳಗಣ್ಣು ಅಥವಾ ಯಾವುದೇ ಕಣ್ಣಿನ ಅಥವಾ ರೆಪ್ಪೆಯ ವಿಕೃತ ಸ್ಥಿತಿಯನ್ನು ಅನರ್ಹತೆಯೆಂದು ಪರಿಗಣಿಸಲಾಗುವುದು.

b) **ಶ್ರವಣ ಶಕ್ತಿ:**

i) ರಿನ್ನೇಸ್ ಪರೀಕ್ಷೆ (Rinne's Test) ii) ವೆಬ್ಬರ್ ಪರೀಕ್ಷೆ (Weber's Test)

iii) ವರ್ಟಿಗೋ ಪರೀಕ್ಷೆ (Tests for Vertigo)

ಮೇಲಿನ ಪರೀಕ್ಷೆಗಳಲ್ಲಿ ಯಾವುದೇ ನ್ಯೂನತೆಗಳು ಕಂಡು ಬಂದಲ್ಲಿ ಅನರ್ಹತೆ ಎಂದು ಪರಿಗಣಿಸಲಾಗುವುದು.

c) ಅಪಧಮನಿ ಊತ ಸಹ ಅನರ್ಹತೆ (Varicose Veins)

d) ಮಾತಿನಲ್ಲಿ ಅಡಚಣೆ ಸಹ ಅನರ್ಹತೆ (Impediment in speech)

e) ಎದೆಯ ಕ್ಷ-ಕಿರಣ (Chest X-Ray) ವನ್ನು ಪರೀಕ್ಷೆಗೆ ತೆಗೆದುಕೊಳ್ಳಲಾಗುವುದು ಹಾಗೂ ಯಾವುದೇ ಇತರೆ ವೈದ್ಯಕೀಯ ಪರೀಕ್ಷೆಗಳನ್ನು ವೈದ್ಯಕೀಯ ಮಂಡಳಿಯ ಸಲಹೆ ಮೇರೆಗೆ ನಡೆಸಲಾಗುವುದು. **(Chest X-Ray) and any other medical tests should be conducted as per suggestion of Medical Board.**

f) **Musculoskeletal Deformities: Presence of any of the following deformities shall be a disqualification:**

- **Knock Knees**
- **Flat foot**
- **Bow legs**
- **Cubitus Valgus**
- **Cubitus Varus**

**Any defect observed during the tests mentioned above shall be a disqualification.**

ಇತರೆ ಯಾವುದೇ ದೈಹಿಕ ಅಥವಾ ಮಾನಸಿಕ ನ್ಯೂನತೆ ಅಂದರೆ ಅಶಕ್ತ ಅವಯವಗಳು ಅಥವಾ ಕರ್ತವ್ಯ ನಿರ್ವಹಿಸಲು ಹಾಜರಾಗುವ ಅಭ್ಯರ್ಥಿಗಳಿಗೆ ಯಾವುದೇ ಭತ್ಯೆಯನ್ನು ನೀಡಲಾಗುವುದಿಲ್ಲ.

**ಟಿಪ್ಪಣಿ: ಮೇಲಿನ ಎಲ್ಲಾ ಪರೀಕ್ಷೆಗಳನ್ನು ವೈದ್ಯಕೀಯ ಮಂಡಳಿಯು ನಡೆಸುತ್ತದೆ. ದೈಹಿಕವಾಗಿ ಅರ್ಹರೆಂದು ಪ್ರಮಾಣೀಕರಿಸಿದ ಅಭ್ಯರ್ಥಿಗಳು ಮಾತ್ರ ನೇಮಕಾತಿಗೆ ಅರ್ಹಗೊಳ್ಳುವರು.** ಸಹಿಷ್ಣುತೆ ಪರೀಕ್ಷೆ, ಲಿಖಿತ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳಿಗೆ ಯಾವುದೇ ಭತ್ಯೆಯನ್ನು ನೀಡಲಾಗುವುದಿಲ್ಲ.

**ನೇಮಕಾತಿ:**

**ವೈದ್ಯಕೀಯ ಮಂಡಳಿಯು ವೈದ್ಯಕೀಯ ಪರೀಕ್ಷೆಯನ್ನು ನಡೆಸಿ, ನೀಡುವ ವರದಿಯನ್ನಾಧರಿಸಿ ಆಯ್ಕೆ ಪ್ರಾಧಿಕಾರವು ಹುದ್ದೆಗಳನುಸಾರ ಆಯ್ಕೆ ಪಟ್ಟಿಯನ್ನು ತಯಾರಿಸಿ ನೇಮಕಾತಿ ಪ್ರಾಧಿಕಾರಕ್ಕೆ ಕಳುಹಿಸುವುದು ಮತ್ತು ಸದರಿ ಆಯ್ಕೆ ಪಟ್ಟಿಯನ್ನು ಪ್ರಕಟಿಸುವುದು. ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳು ಆಯ್ಕೆಗೆ ಎಲ್ಲಾ ರೀತಿಯಿಂದಲೂ ಅರ್ಹತೆಯನ್ನು ಹೊಂದಿರುವ ಬಗ್ಗೆ ನೇಮಕಾತಿ ಪ್ರಾಧಿಕಾರವು ದೃಢಪಡಿಸಿಕೊಂಡ ನಂತರ ಖಾಲಿ ಹುದ್ದೆಗಳನುಸಾರ ನೇಮಕಾತಿ ಮಾಡಿಕೊಳ್ಳತಕ್ಕದ್ದು.**

**x. ಅರ್ಹತಾ ಷರತ್ತುಗಳು–**

(ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

(ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

(ಇ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

(ಈ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

(ಉ) ಕೇಂದ್ರ ಅಥವಾ ಕರ್ನಾಟಕ ಅಥವಾ ಇತರೆ ರಾಜ್ಯದ ಲೋಕಸೇವಾ ಆಯೋಗ ಅಥವಾ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅಥವಾ ಯಾವುದೇ ವಿಶ್ವವಿದ್ಯಾನಿಲಯಗಳಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ಖಾಯಂ ಆಗಿ ಡಿಬಾರ್ ಆದ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

(ಊ) **ಯಾವುದೇ ನೈತಿಕ ಪರಿಭಾಷೆಗೆ ಶಿಕ್ಷೆಗೆ ಒಳಪಟ್ಟ ವ್ಯಕ್ತಿ ಅಥವಾ ಕೇಂದ್ರ ಅಥವಾ ಕರ್ನಾಟಕ ಅಥವಾ ಇತರೆ ರಾಜ್ಯದ ಲೋಕಸೇವಾ ಆಯೋಗ ಅಥವಾ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅಥವಾ ಯಾವುದೇ ವಿಶ್ವವಿದ್ಯಾನಿಲಯಗಳಿಂದ ನಡೆಸಲಾಗುವ ಪರೀಕ್ಷೆಗಳಿಂದ, ಅಥವಾ ನೇಮಕಾತಿಗಳಿಂದ ತಾತ್ಕಾಲಿಕವಾಗಿ ಡಿಬಾರ್ ಆದ ಅಥವಾ ಅನರ್ಹಗೊಂಡ ವ್ಯಕ್ತಿಯು ಸರ್ಕಾರವು ಎಲ್ಲಾ ಸಂದರ್ಭಗಳನ್ನು ಮರುಪರಿಶೀಲಿಸಿ ಅವರು ನೇಮಕಾತಿಗೆ ಅರ್ಹರೆಂದು ಪರಿಗಣಿಸುವವರೆಗೂ ನೇಮಕಾತಿಗೆ ಅರ್ಹರಾಗುವುದಿಲ್ಲ.**

**ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.**

**ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು :-**

ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು:-

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು:- ನಮೂನೆ 'ಡಿ'
ಆ) ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು:- ನಮೂನೆ 'ಇ'
ಇ) ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು:- ನಮೂನೆ 'ಎಫ್'

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಸೀಲ್ದಾರ್‌ರವರಿಂದ ಅಂದರೆ ತಹಶೀಲ್ದಾರ್‌ರವರ ಸಹಿ ಮತ್ತು ಮೊಹರು ಅಥವಾ ಬಾರ್‌ಕೋಡ್, ಹಾಲೋಗ್ರಾಮ್ ಮತ್ತು ವಾಟರ್ ಮಾರ್ಕ್‌ನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1ರ ಮೀಸಲಾತಿ ಪ್ರಮಾಣ ಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿಪಡಿಸಿದ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು 5 ವರ್ಷ ಚಾಲ್ತಿಯಲ್ಲಿರುತ್ತವೆ. ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು. ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು,

ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ, ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಪ್ರತ್ಯೇಕವಾಗಿ ನೀಡಲಾಗಿದೆ. ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು. **ಉದ್ಯೋಗಕ್ಕಾಗಿ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಮಾತ್ರ ಪರಿಗಣಿಸಲಾಗುವುದು. (ಶಿಕ್ಷಣ ಅಥವಾ ಇತರೆ ಸೌಲಭ್ಯಗಳಿಗೆ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ)**
**(ಇತರೆ ಹಿಂದುಳಿದ ವರ್ಗಗಳಾದ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ವಿವಾಹಿತ ಮಹಿಳಾ ಅಭ್ಯರ್ಥಿಗಳು ಅವರ ಪತಿಯ ಹೆಸರಿನೊಂದಿಗೆ ಜಾರಿಯಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಗೊಳಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು ಅರ್ಜಿಯಲ್ಲಿ ಮೀಸಲಾತಿ ಕೋರತಕ್ಕದ್ದು).**

## xi. ಮಾಜಿ ಸೈನಿಕ

ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 13 ಎಸ್‌ಆರ್‌ಆರ್ 92 ದಿನಾಂಕ 01-04-1992 ಮತ್ತು ಅಧಿಸೂಚನೆ ಸಂಖ್ಯೆ ಡಿಪಿಎಆರ್ 28 ಎಸ್‌ಆರ್‌ಆರ್ 95 ದಿನಾಂಕ 21-10-1995 ರನ್ವಯ ನೇರ ನೇಮಕಾತಿಗಳಲ್ಲಿ ಶೇಕಡ 10 ರಷ್ಟು ಹುದ್ದೆಗಳನ್ನು ಮಾಜಿ ಸೈನಿಕರಿಗೆ ಮೀಸಲಾತಿ ಕಲ್ಪಿಸಲಾಗಿದೆ. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿದ್ದಂತೆ ಮಾಜಿ ಸೈನಿಕರ ವಿವರಣೆ ಕೆಳಕಂಡಂತಿದೆ:

(1) ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು

(2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ.ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

(3) ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವವರು

**ಅಥವಾ**

ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆಯಾದವರು

**ಅಥವಾ**

ಇ) ಸ್ವಂತಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆಹೊಂದಿದ ವ್ಯಕ್ತಿಗಳು.

**ಅಥವಾ**

ಈ) ತಮ್ಮ ಸ್ವಂತಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿಗಳು ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿಗಳು ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:-

i) ನಿರಂತರ ಸೇವೆ ಸಲ್ಲಿಸಿದ ನಿವೃತ್ತಿ ಹೊಂದಿದ ಪಿಂಚಣಿದಾರರು.

ii) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿಗಳು.

iii) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು ಅರ್ಹರಾಗಿರುವುದಿಲ್ಲ.

<u>ವಿವರಣೆ:-</u> ಕೇಂದ್ರ ಸಶಸ್ತ್ರ ದಳದಲ್ಲಿ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ನಿರ್ದಿಷ್ಟ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರಿಕ ಸೇವೆ ಅಥವಾ ಹುದ್ದೆಗೆ ನೇಮಕ ಹೊಂದುವಂತಿಲ್ಲ. ಇಂತಹವರು ಅರ್ಜಿ ಸಲ್ಲಿಸುವ ಮುನ್ನ ಸೇನೆಯಿಂದ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲಿಸಬೇಕು.ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು /ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಕೊಲ್ಲಲ್ಪಟ್ಟಿರುವ/ಶಾಶ್ವತವಾಗಿ ಅಂಗವಿಕಲರಾದ ಬಗ್ಗೆ ಪ್ರಮಾಣಪತ್ರವನ್ನು ಮೂಲ ದಾಖಲಾತಿ ಪರಿಶೀಲನೆಗೆ ತಪ್ಪದೇ ಹಾಜರುಪಡಿಸಬೇಕು.ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿದೆ).

**Xi. ಗ್ರಾಮೀಣ ಅಭ್ಯರ್ಥಿ:-**

ಸರ್ಕಾರಿ ಅಧಿಸೂಚನೆ ಸಂಖ್ಯೆ: 59 ಶಾಸನ 2000, ದಿನಾಂಕ 06-01-2001 ರನ್ವಯ ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೆನೆನಿ 2001 ದಿನಾಂಕ 13-02-2001 ರನ್ವಯ ನಮೂನೆ-2ನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಅರ್ಜಿಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು.(ಅಭ್ಯರ್ಥಿಗಳ ನೇರ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಸಹ ಅನರ್ಹರಾಗುತ್ತಾರೆ. ಈ ಪ್ರಮಾಣಪತ್ರಗಳ ನಮೂನೆಗಳನ್ನು ಪ್ರತ್ಯೇಕವಾಗಿ ನೀಡಲಾಗಿದೆ).

**xii. ಕನ್ನಡ ಮಾಧ್ಯಮ ಅಭ್ಯರ್ಥಿ**

ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೇನೇನಿ 2001 ದಿನಾಂಕ 24-10-2002 ರನ್ವಯಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಕ.ಮಾ.ಅ. ಮೀಸಲಾತಿಯನ್ನು ರದ್ದು ಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಪ್ರತ್ಯೇಕವಾಗಿ ತೋರಿಸಲಾಗಿದೆ).

**xiii. ಯೋಜನೆಗಳಿಂದ ನಿರ್ವಸಿತರಾದ ಅಭ್ಯರ್ಥಿಗಳು:**

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 23 ಸೇನೇನಿ 99, ದಿನಾಂಕ 23.11.2000 ಮತ್ತು ತಿದ್ದುಪಡಿ ಆದೇಶ ಸಂಖ್ಯೆ ಸಿಆಸುಇ 252 ಸೇನೇನಿ 2020 (ಭಾಗ-1), ದಿನಾಂಕ 07.07.2021. ರನ್ವಯ ಯೋಜನೆಗಳಿಂದ ನಿರ್ವಸಿತರಾದ (ಆದರೆ ಈ ನಿಯಮಗಳು ಜಾರಿಯಾಗುವ 25 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಾತಿ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

**ಟಿಪ್ಪಣಿ: ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 02 ಸೆಹಿಮ 2023, ದಿನಾಂಕ: 08.03.2023 ರನ್ವಯ ಸಮತಳ ಮೀಸಲಾತಿಯ ಹುದ್ದೆಗಳಲ್ಲಿ ಮಾಜಿ ಸೈನಿಕರು ಮತು ಯೋಜನೆಗಳಿಂದ ನಿರ್ವಸಿತರಾದ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅದೇ ಪ್ರವರ್ಗದ ಇತರೆ ಅಭ್ಯರ್ಥಿಗಳಿಂದ ತುಂಬಲಾಗುವುದು.**

**xiv. ಪ್ರಾಧಿಕಾರದೊಡನೆ ಪತ್ರ ವ್ಯವಹಾರ:**

ಪ್ರಾಧಿಕಾರವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಆದುದರಿಂದ, ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವಾಗ ಜಾಗರೂಕತೆಯಿಂದ ಭರ್ತಿ ಮಾಡತಕ್ಕದ್ದು.ಅಭ್ಯರ್ಥಿಗಳು ಪ್ರಾಧಿಕಾರದೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯು ಈ ಕೆಳಕಂಡ ಮಾಹಿತಿಗಳನ್ನು ಒಳಗೊಂಡಿರಬೇಕು.

(i) ಅರ್ಜಿ ಸಂಖ್ಯೆ &ಹುದ್ದೆಯ / ವಿಷಯದ ಹೆಸರು

(ii) ಅಭ್ಯರ್ಥಿಯ ಪೂರ್ಣ ಹೆಸರು (ಬಿಡಿ ಅಕ್ಷರಗಳಲ್ಲಿ)

(iii) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

- ಪ್ರಾಧಿಕಾರದ ಅಧಿಕೃತ 'X' ಖಾತೆ @KEA_KARNATAKA ದಲ್ಲಿ ಹಾಗೂ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಲಭ್ಯವಿರುವ ನೇಮಕಾತಿ ಸಂಬಂಧದ ಎಲ್ಲಾ ಮಾಹಿತಿಗಳನ್ನು ಪಡೆಯಬಹುದಾಗಿರುತ್ತದೆ.

**xv. ಪ್ರಮುಖವಾದ ಸೂಚನೆಗಳು:-**

ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು (Recent photograph in JPEG format, with a file size between 50KB to 200KB)ಹಾಗೂ ಕಪ್ಪು ಶಾಹಿಯ ಸ್ಕೆಚ್/ಮಾರ್ಕರ್ ಪೆನ್‌ಲ್ಲಿ ಸಹಿಯನ್ನು (Signature in JPEG format, with a file size between 50KB to 70KB) ಅಳತೆಯಲ್ಲಿ ಸ್ಕ್ಯಾನ್ ಮಾಡಿ ಅರ್ಜಿಗೆ UPLOAD ಮಾಡಬೇಕು. ಭಾವಚಿತ್ರ ಹಾಗೂ ಸಹಿಯನ್ನು UPLOAD ಮಾಡದ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ ಆನ್‌ಲೈನ್ ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಗಳಿಂದ ಪಡೆದಿಟ್ಟುಕೊಂಡು ಮೂಲ ದಾಖಲಾತಿಯ ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ ಅದೇ ಮೀಸಲಾತಿ ಪ್ರಮಾಣಪತ್ರದ ಹಾಗೂ ಇತರೇ ಪ್ರಮಾಣ ಪತ್ರಗಳ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. ಹೈದ್ರಾಬಾದ್-ಕರ್ನಾಟಕ ಮೀಸಲಾತಿಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಹೊರತುಪಡಿಸಿ ಇತರೆ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರಬೇಕು, ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ ಹಾಗೆಯೇ ಯಾವುದೇ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿರುವ ನಮೂನೆಗಳಲ್ಲಿರದಿದ್ದಲ್ಲಿ ಮತ್ತು ತಪ್ಪಿದ್ದಲ್ಲಿ ಸದರಿ ಮೀಸಲಾತಿಯನ್ನು ತಿರಸ್ಕರಿಸಲಾಗುವುದು/ ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

**ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಪಡೆದಿಟ್ಟುಕೊಳ್ಳಬೇಕಾದ ಪ್ರಮಾಣಪತ್ರಗಳು.**

1) ಆಧಾರ್‌ಕಾರ್ಡ್
2) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದ ಆಯಾ ಹುದ್ದೆಗಳಿಗೆ ನಿಗದಿಪಡಿಸಲಾದ/ ವಿದ್ಯಾರ್ಹತೆಯ ಎಲ್ಲಾ ವಿಷಯಗಳ/ ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಹಾಗೂ ಘಟಿಕೋತ್ಸವದ ಪ್ರಮಾಣ ಪತ್ರ /ಪಿಡಿಸಿ.
3) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ ಶಾಲೆಯ ವರ್ಗಾವಣೆ ಪ್ರಮಾಣ ಪತ್ರ/ ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.
4) ಸೈನಿಕ ಸೇವೆಯಿಂದ ಬಿಡುಗಡೆಯಾದ ಪ್ರಮಾಣ ಪತ್ರ ಮತ್ತು ಪಿಂಚಣಿ /ಗ್ರಾಚ್ಯುಟಿ ಪಡೆಯುತ್ತಿರುವ ಪ್ರಮಾಣ ಪತ್ರ/ ಮಾಜಿ ಸೈನಿಕ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಮೃತಪಟ್ಟಿದ್ದಲ್ಲಿ ಅಥವಾ ಶಾಶ್ವತವಾಗಿ ಅಂಗವಿಕಲರಾದ (Permanently Disabled ) ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
5) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ)
6) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2ರಲ್ಲಿ (ಗ್ರಾಮೀಣ ಮೀಸಲಾತಿ ಕೋರಿದ ಸಾಮಾನ್ಯ ಅರ್ಹತೆ ಅಭ್ಯರ್ಥಿಗಳು ನಮೂನೆ-1 ರಲ್ಲಿ ಮಾತ್ರ ಹಾಗೂ ಗ್ರಾಮೀಣ ಮೀಸಲಾತಿ ಕೋರಿದ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಪ್ರವರ್ಗ-1/ ಪ್ರವರ್ಗ-2ಎ/ ಪ್ರವರ್ಗ-2ಬಿ/ ಪ್ರವರ್ಗ-3ಎ/ ಪ್ರವರ್ಗ-3ಬಿ ಅಭ್ಯರ್ಥಿಗಳು ನಮೂನೆ-2 ರಲ್ಲಿ ಮಾತ್ರ)
7) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ), ವಿಶೇಷ ಚೇತನ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
8) ಸೇವೆಯಲ್ಲಿರುವ ಅಭ್ಯರ್ಥಿಗಳು ಆಯ್ಕೆಯಾದಲ್ಲಿ ನಿರಾಕ್ಷೇಪಣ ಪ್ರಮಾಣ ಪತ್ರಗಳನ್ನು ಪಡೆದು ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು. (ನಿಗದಿಪಡಿಸಿದ್ದಲ್ಲಿ)

**xvi. ವಿಶೇಷ ಸೂಚನೆಗಳು:-**

(1) ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ **ಒಂದು ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಳ್ಳಬೇಕು ಮತ್ತು ಶುಲ್ಕ ಪಾವತಿಯ ಚಲನ್ ಅನ್ನು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಕಾಯ್ದಿಟ್ಟುಕೊಳ್ಳತಕ್ಕದ್ದು. ನಂತರ ಯಾವುದೇ ಹಂತದಲ್ಲಿ ಪ್ರಾಧಿಕಾರಕ್ಕೆ ಮನವಿಯನ್ನು ಸಲ್ಲಿಸಿದ್ದಲ್ಲಿ ಅರ್ಜಿ ಪ್ರತಿಯನ್ನು ನೀಡಲಾಗುವುದಿಲ್ಲ.**

(2) **ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸಲಾಗುವ ಅರ್ಜಿಯಲ್ಲಿ ಯಾವುದೇ ಹಂತದಲ್ಲಿ ಅಥವಾ ಯಾವುದೇ ರೀತಿಯ ತಿದ್ದುಪಡಿಗಳನ್ನು ಮಾಡುವಂತೆ ಕೋರಿದ್ದಲ್ಲಿ, ಸದರಿ ಮನವಿಯನ್ನು ಪುರಸ್ಕರಿಸಲಾಗುವುದಿಲ್ಲ.**

(3) ಈಗಾಗಲೇ ಸೇವೆಯಲ್ಲಿರುವ / ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಆಯ್ಕೆಯಾದ ಪಕ್ಷದಲ್ಲಿ ಅವರುಗಳ ನೇಮಕಾತಿ ಪ್ರಾಧಿಕಾರಗಳಿಂದ ನಿಗದಿತ ನಮೂನೆಯಲ್ಲಿ ನಿರಾಕ್ಷೇಪಣಾ ಪ್ರಮಾಣ ಪತ್ರ/ ಅನುಮತಿಯನ್ನು / ಸೇವಾ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡು ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು. ಹಾಗೂ ಸೇವಾ ವಿವರಗಳನ್ನು ಅರ್ಜಿಯಲ್ಲಿ ನಮೂದಿಸಬೇಕು. ಸುಳ್ಳು ಮಾಹಿತಿಯನ್ನು ನಮೂದಿಸಿದ್ದಲ್ಲಿ ಅನರ್ಹಗೊಳಿಸಲಾಗುವುದು.

(4) ಶುಲ್ಕ ಪಾವತಿಸಲು ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಕೊನೆಯ ದಿನಾಂಕವಾಗುವುದು.

(5) ಅಭ್ಯರ್ಥಿಯು ಅರ್ಜಿಯಲ್ಲಿ ನೀಡುವ ಮೊಬೈಲ್ ಸಂಖ್ಯೆ/ಇ-ಮೇಲ್ ಅಂತಿಮವಾಗಿದ್ದು, ಎಲ್ಲಾ ಮಾಹಿತಿಗಳನ್ನು ಅದೇ ಮೊಬೈಲ್ ಸಂಖ್ಯೆ/ಇ-ಮೇಲ್ ಗಳಿಗೆ ಕಳುಹಿಸಿಕೊಡಲಾಗುವುದು. ನಂತರದಲ್ಲಿ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

(6) ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯ ಪರೀಕ್ಷೆಗೆ ಹಾಜರಾಗಿ, ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಫಲಿತಾಂಶ ಪ್ರಕಟವಾಗದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಂತಿಲ್ಲ.

(7) ಅಭ್ಯರ್ಥಿಯು ಸಲ್ಲಿಸುವ ವಿದ್ಯಾರ್ಹತೆಯ ಪ್ರಮಾಣ ಪತ್ರ/ಇನ್ನಿತರೆ ಮೀಸಲಾತಿ ಪ್ರಮಾಣ ಪತ್ರಗಳಿಗೆ ಸಂಬಂಧಿಸಿದಂತೆ ಯಾವುದೇ ಗೊಂದಲಗಳು ಇದ್ದಲ್ಲಿ ಸಂಬಂಧಪಟ್ಟ ಪ್ರಾಧಿಕಾರಸ್ಥರು ಗೊಂದಲ ನಿವಾರಣೆ ಮಾಡುವವರೆಗೆ ಅವರ ಆಯ್ಕೆಯನ್ನು ಅಂತಿಮಗೊಳಿಸಲಾಗುವುದಿಲ್ಲ.

(8) ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡುವ ಮೊದಲು ವೆಬ್‌ಸೈಟಿನಲ್ಲಿ ನೀಡಿರುವ ವಿವರವಾದ ಪ್ರಕಟಣೆಯನ್ನು/ಸೂಚನೆಗಳನ್ನು/ವಿಧಾನವನ್ನು ತಿಳಿದುಕೊಳ್ಳುವುದು ಹಾಗೂ ಅರ್ಜಿಯಲ್ಲಿ ಘೋಷಿಸಿರುವ ಮಾಹಿತಿಗಳು ಅಂತಿಮವಾಗಿದ್ದು, ಹೆಚ್ಚಿನ ಮಾಹಿತಿ / ದಾಖಲೆಗಳ ಸಲ್ಲಿಕೆಗೆ ಅವಕಾಶವಿರುವುದಿಲ್ಲ.

(9) ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಅರ್ಜಿಯು ತಿರಸ್ಕೃತವಾದಲ್ಲಿ ಅಥವಾ ಯಾವುದೇ ಸೌಲಭ್ಯದಿಂದ ಅವರು ವಂಚಿತರಾದಲ್ಲಿ ಅದಕ್ಕೆ ಅಭ್ಯರ್ಥಿಗಳೇ ನೇರ ಜವಾಬ್ದಾರರು.

(10)ಆಯ್ಕೆಗೆ ಸಂಬಂಧಿಸಿದಂತೆ ಅಭ್ಯರ್ಥಿಯು ಯಾವುದೇ ವಿಧವಾದ ಅಪಪ್ರಚಾರ ಮಾಡುವ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಲ್ಲಿ ಯಾವುದೇ ಮುನ್ಸೂಚನೆ ನೀಡದೆ ಅವರನ್ನು ಆಯ್ಕೆಗೆ ಅನರ್ಹಗೊಳಿಸಲಾಗುವುದು.

**(11)ಲಿಖಿತ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದವರು ಕೈಗೊಂಡು, ಉತ್ತರ ಪ್ರತಿಗಳನ್ನು ಮೌಲ್ಯಮಾಪನ ಮಾಡಿ ನೀಡುವ ಅಂಕಪಟ್ಟಿಯನ್ನು ಪೊಲೀಸ್ ಇಲಾಖೆಯು ಹಾಗೂ ನೇಮಕಾತಿ ವಿಭಾಗವು ಪರಿಗಣಿಸಿ ನಂತರದ ಪ್ರಕ್ರಿಯೆಗಳನ್ನು ನಡೆಸಲಾಗುವುದು.**

**xvii. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು:** ಮಾಹಿತಿ ಕೇಂದ್ರ-**080-23460460**.(10.00AMto6.00PM)

(ಅಧಿಸೂಚನೆ ಲಿಖಿತ ಪರೀಕ್ಷೆ ಹಾಗೂ ಅಂಕಪಟ್ಟಿಯ ಕುರಿತು ಮಾತ್ರ ಪ್ರಾಧಿಕಾರಕ್ಕೆ ಕರೆ ಮಾಡಬಹುದಾಗಿರುತ್ತದೆ.)

**xviii. ದುರ್ನಡತೆ:- ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂದು, ತಪ್ಪಿತಸ್ಥನೆಂದು ಕಂಡುಬಂದಲ್ಲಿ ಅಥವಾ ಒಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗಳಿಗೆ ಹಾಜರಾಗಿರುವ ವಿಷಯವನ್ನು ಮರೆಮಾಚಿ ಮತ್ತೊಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗೆ ಹಾಜರಾದರೆ ಹಾಗೂ ನೇಮಕಾತಿ ಸಮಿತಿಯಿಂದ ನೀಡಲಾದ ಯಾವುದೇ ಸೂಚನೆಗಳನ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ನೇಮಕಾತಿ ಸಮಿತಿ ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.**

**(ಡಾ: ಚೇತನ್ ಸಿಂಗ್ ರಾಥೋರ್, ಐ.ಪಿ.ಎಸ್)**
ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, (ಸಿ.ಐ.ಡಿ)
ಡಿ.ಐ.ಜಿ.ಪಿ., ನೇಮಕಾತಿ, (ಪ್ರಭಾರ) ಹಾಗೂ ಸಮನ್ವಯಾಧಿಕಾರಿ,
ಸ್ಪೆ.ಆರ್.ಪಿ.ಸಿ (ಕೆ.ಎಸ್.ಆರ್.ಪಿ) ನೇಮಕಾತಿ ಸಮಿತಿ,
ಕಾರ್ಲಟನ್ ಭವನ, ಅರಮನೆ ರಸ್ತೆ,
ಬೆಂಗಳೂರು – 560001

ಗಮನಿಸಿ:

1. ಕೇವಲ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ್ದಲ್ಲಿ, ಲಿಖಿತ ಪರೀಕ್ಷೆಗೆ ಹಾಜರಾದಲ್ಲಿ ಮತ್ತು ಲಿಖಿತ ಪರೀಕ್ಷೆಯಲ್ಲಿ ಅರ್ಹತೆ ಪಡೆದ ಮಾತ್ರಕ್ಕೆ ಅಭ್ಯರ್ಥಿಗಳಿಗೆ ವಿಶೇಷ ಮೀಸಲು ಪೊಲೀಸ್ ಕಾನ್‌ಸ್ಟೇಬಲ್ (ಕೆಎಸ್‌ಆರ್‌ಪಿ) ಹುದ್ದೆಯ ನೇಮಕಾತಿಯಲ್ಲಿ ಯಾವುದೇ ಹಕ್ಕನ್ನು ನೀಡುವುದಿಲ್ಲ, ನೇಮಕಾತಿಯು ಸರ್ಕಾರವು ನಿಗದಿಪಡಿಸುವ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ.
2. ಮೇಲಿನ ಯಾವುದೇ ನಿಯಮಗಳು / ಕಾರ್ಯವಿಧಾನಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸ ಅಥವಾ ಅಸ್ಪಷ್ಟತೆ ಕಂಡು ಬಂದಲ್ಲಿ, ಸಂಬಂಧಪಟ್ಟ ಸಂಸ್ಥೆಗಳ ಪದವೃಂದ ಮತ್ತು ನೇಮಕಾತಿ ನಿಯಮಗಳು ಅನ್ವಯವಾಗುತ್ತವೆ.

**ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:–**

| | | | |
|---|---|---|---|
| ಸಾ.ಅ | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ<br>(ಪ್ರ–ಎ)<br>(ಪ್ರ–ಬಿ)<br>(ಪ್ರ–ಸಿ) | ಪರಿಶಿಷ್ಟ ಜಾತಿ<br>(ಪ್ರವರ್ಗ–ಎ)<br>(ಪ್ರವರ್ಗ–ಬಿ)<br>(ಪ್ರವರ್ಗ–ಸಿ) | SC<br>(Cat-A)<br>(Cat -B)<br>(Cat -C) | Scheduled Caste<br>(Category -A)<br>(Category -B)<br>(Category -C) |
| ಪ.ಪಂ | ಪರಿಶಿಷ್ಟ ಪಂಗಡ | ST | Scheduled Tribe |
| ಪ್ರ–1 | ಪ್ರವರ್ಗ–1 | Cat–1 | Category–1 |
| 2ಎ | ಪ್ರವರ್ಗ–2ಎ | 2A | Category – 2A |
| 2ಬಿ | ಪ್ರವರ್ಗ–2ಬಿ | 2B | Category – 2B |
| 3ಎ | ಪ್ರವರ್ಗ–3ಎ | 3A | Category – 3A |
| 3ಬಿ | ಪ್ರವರ್ಗ–3ಬಿ | 3B | Category – 3B |
| ಮಾ.ಸೈ | ಮಾಜಿ ಸೈನಿಕ | XMP | Ex- Service Men<br>(Ex-Military person) |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಯೋ.ಅ | ಯೋಜನಾ ನಿರಾಶ್ರಿತ ಅಭ್ಯರ್ಥಿ | PDP | Project Displaced Person |
| ಮ.ಅ | ಮಹಿಳಾ ಅಭ್ಯರ್ಥಿ | Wom | Woman Candidate |

**ಸೂಚನೆ: ಈ ಅಧಿಸೂಚನೆಯಲ್ಲಿ ತಿಳಿಸಿರುವ ಹುದ್ದೆಗಳ ಸಂಖ್ಯೆ & ವರ್ಗೀಕರಣಕ್ಕೆ ಸಂಬಂಧಿಸಿದಂತೆ, ನೇಮಕಾತಿ ಪ್ರಾಧಿಕಾರವು ಪರೀಕ್ಷೆ ದಿನಾಂಕಕ್ಕೆ ಮೊದಲು ಬದಲಾವಣೆ ಬಯಸಿದಲ್ಲಿ ಅಷ್ಟಕ್ಕೆ ಸೀಮಿತವಾಗಿ ಮಾತ್ರ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ತಿದ್ದುಪಡಿ ಅಧಿಸೂಚನೆ ಹೊರಡಿಸಲಾಗುವುದು.**